ಸಂಪುಟ : 13 Volume | ಸಂಚಿಕೆ : 250 Issue | ಪುಟಗಳು : 08 Pages | ಶುಕ್ರವಾರ 21 ನವೆಂಬರ 2025 | ₹2 | PRGINO. 120927(RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಮಗೆ ಅಗತ್ಯವಿರುವುದು ಪರೋಪಕಾರವಲ್ಲ, ಆದರೆ ಚಲನಾತ್ಮಕ ವೈಜ್ಞಾನಿಕ ಸಾಮಾಜಿಕ ಶಕ್ತಿ

*ಭಗತ್ ಸಿಂಗ್*

4 ಕೃಷಿಗೆ ಉದ್ಯೋಗ ಖಾತ್ರಿ | 2 ಮಕ್ಕಳಲ್ಲಿ ಕಲಿಕಾ ಆಸಕ್ತಿ ಹುಟ್ಟಿಸಿ | 8 ಬೀದಿ ನಾಯಿಗಳ ಹಾವಳಿ | 3 ದತ್ತು ಮಾಸಾಚರಣೆ ಅಂಗವಾಗಿ ನಾಮಕರಣ

# ದೆಹಲಿಯಲ್ಲಿ ಕೈ ಹೈವೋಲ್ಟೇಜ್

## ಒಕ್ಕಲಿಗ ನಾಯಕರು ರಾಜಧಾನಿಗೆ ದೌಡು, ಹೈಕಮಾಂಡ್ ಮೇಲೆ ಒತ್ತಡ ಹೇರುವ ತಂತ್ರ

**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ಕರ್ನಾಟಕ ಕಾಂಗ್ರೆಸ್ ಪಾಳಯದಲ್ಲಿ ಬದಲಾವಣೆಯ ರಾಜಕಿಯ ಗಾಳಿ ಬಿಸತೊಡಗಿದೆ. ಕರ್ನಾಟಕ ಕಾಂಗ್ರೆಸ್ಸಿನ ಒಕ್ಕಲಿಗ ನಾಯಕರು ದೆಹಲಿಗೆ ಪ್ರಯಾಣ ಬೆಳೆಸಿದ್ದು, ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಲು ಸಿದ್ಧತೆ ನಡೆಸಿದ್ದಾರೆ. ರಾಜ್ಯ ರಾಜಕಾರಣದಲ್ಲಿ ನಾಯಕತ್ವ ಬದಲಾವಣೆಯ ಕೂಗು ಜೋರಾಗಿರುವ ಬೆನ್ನಲ್ಲೇ, ಡಿಕೆ ಶಿವಕುಮಾರ್ ಅವರು ಒಕ್ಕಲಿಗ ಸಮುದಾಯದ ಬೆಂಬಲದೊಂದಿಗೆ ಹೈಕಮಾಂಡ್ ಮೇಲೆ ಒತ್ತಡ ಹೇರಲು ಮುಂದಾಗಿದ್ದಾರೆ. ನ. 21ರಂದು ದೆಹಲಿಯಲ್ಲಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಲು ಅವಕಾಶ ಸಿಕ್ಕಿರುವ ಹಿನ್ನೆಲೆಯಲ್ಲಿ, ಕಾಂಗ್ರೆಸ್ಸಿನ ಸುಮಾರು ಎಂಟು - ಒಂಭತ್ತು ಒಕ್ಕಲಿಗ ನಾಯಕರು ದಿಢೀರನೆ ದೆಹಲಿಗೆ ಪ್ರಯಾಣ ಬೆಳೆಸಿದ್ದಾರೆ. ಅವರೊಂದಿಗೆ, ಅಲ್ಪಸಂಖ್ಯಾತ ನಾಯಕರಾದ ಇಕ್ಬಾಲು ಹುಸೇನ್ ಕೂಡ ಸೇರಿಕೊಂಡಿದ್ದಾರೆ.








### » ಆಗ ಫಲ ಸಿಕ್ಕಿರಲ್ಲಿಲ ಆದರೇ..!

ರಾಜ್ಯ ರಾಜಕಾರಣದಲ್ಲಿ ನಾಯಕತ್ವ ಬದಲಾವಣೆಯ ಕೂಗು ಜೋರಾಗಿದೆ. ಅತ್ತ, ಸಿದ್ಧರಾಮಯ್ಯನವರನ್ನು ಬದಲಾಯಿಸಿ ಆ ಸ್ಥಾನಕ್ಕೆ ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಅವರನ್ನು ತಂದು ಕೂರಿಸಬೇಕು ಎಂಬ ಒಲವನ್ನು ಹೊಂದಿದ್ದಾರೆ. ಈ ಕುರಿತಂತೆ ಹೈಕಮಾಂಡ್ ಜೊತೆ ಮಾತನಾಡಲು ಡಿಕೆಶಿಯವರು ಹಲವಾರು ಬಾರಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿದ್ದರೂ ಫಲ ಸಿಕ್ಕಿಲ್ಲ.

### » ಒಕ್ಕಲಿಗ ಟ್ರಂಪ್ ಕಾರ್ಡ್ ಪ್ಲೇ

ಈ ಎಲ್ಲಾ ಬೆಳವಣಿಗೆಯ ಬೆನ್ನಲ್ಲೇ, ಹೈಕಮಾಂಡ್ ಮುಂದೆ ತಾವು ಮುಖ್ಯಮಂತ್ರಿಯಾಗುವ ಇಂಗಿತವನ್ನು ಹಲವಾರು ಬಾರಿ ವ್ಯಕ್ತಪಡಿಸಿದ್ದರೂ ಹೈಕಮಾಂಡ್ ಅದಕ್ಕೆ ಸ್ವಲ್ಪ ಕಾಯಬೇಕು ಎಂದು ಪದೇಪದೇ ಹೇಳಿರುವುದು ಅವರಿಗೂ ಸರಿಹೋಗುತ್ತಿಲ್ಲ. ಹಾಗಾಗಿ, ಈ ಬಾರಿ ಹೈಕಮಾಂಡ್ ಮುಂದೆ ಒಕ್ಕಲಿಗ ಟ್ರಂಪ್ ಕಾರ್ಡ್ ಪ್ಲೇ ಮಾಡಲು ಡಿಕೆಶಿಯವರು ಮುಂದಾಗಿದ್ದಾರೆ ಎಂದು ಹೇಳಲಾಗಿದೆ. ಅದಕ್ಕಾಗಿಯೇ ನ. 20ರಂದು ರಾಜ್ಯ ಸಂಪುಟದಲ್ಲಿರುವ ತಮ್ಮ ಆಪ್ತ ಒಕ್ಕಲಿಗ ಸಚಿವರು ಹಾಗೂ ಕಾಂಗ್ರೆಸ್ ನಲ್ಲಿರುವ ತಮ್ಮ ಆಪ್ತ ನಾಯಕರನ್ನು ದೆಹಲಿಗೆ ಕಳುಹಿಸಿ ನಾಯಕತ್ವ ಬದಲಾವಣೆಗೆ ಒತ್ತಡ ಹೇರಲು ಮುಂದಾಗಿದ್ದಾರೆ ಎಂದು ತಿಳಿದು ಬಂದಿದೆ.

### » ದೆಹಲಿಗೆ ಹೋರಟವರು..?

ಚೆಲುವರಾಯಸ್ವಾಮಿ
ಮಾಗಡಿ ಬಾಲಕೃಷ್ಣ
ಇಕ್ಬಾಲ್ ಹುಸೇನ್
ಶಿವಗಂಗಾ ಬಸವರಾಜ್,
ಗುಬ್ಬಿ ಶ್ರೀನಿವಾಸ್
ರವಿ ಗಣಿಗ
ದಿನೇಶ್ ಗೂಳಿಗೌಡ
ಆನೇಕಲ್ ಶಿವಣ್ಣ
ಕುಣಿಗಲ್ ರಂಗನಾಥ್
ನೆಲಮಂಗಲ ಶ್ರೀನಿವಾಸ್

### ಅಧಿಕೃತ ಒಪ್ಪಂದಕ್ಕೆ ತಂತ್ರ

ಕಾಂಗ್ರೆಸ್ ನಾಯಕರು ದೆಹಲಿಯಲ್ಲಿ ಬೀಡುಬಿಟ್ಟಿರುವುದರಿಂದ ರಾಜ್ಯ ರಾಜಕೀಯ ಬೆಳವಣಿಗೆಗಳು ಈಗ ದೆಹಲಿಗೆ ವರ್ಗಾವಣೆಯಾಗಿವೆ. ನಾಯಕತ್ವ ಬದಲಾವಣೆ ಆಗದಿದ್ದರೆ, ಡಿಕೆಶಿವಕುಮಾರ್ (ಡಿಕೆಶಿ) ಅವರು ತಮ್ಮ ಸ್ಥಾನಮಾನವನ್ನು ಭದ್ರಪಡಿಸಿಕೊಳ್ಳಲು ಮತ್ತು 2028ರ ಸಿಎಂ ಸ್ಥಾನಕ್ಕೆ ಅಧಿಕೃತ ಒಪ್ಪಂದ ಮಾಡಿಕೊಳ್ಳಲು ಹಲವು ಕಾರ್ಯತಂತ್ರಗಳನ್ನು ರೂಪಿಸಿದ್ದಾರೆ. ಮುಂದಿನ ಮುಖ್ಯಮಂತ್ರಿ ಪಟ್ಟಕ್ಕೇರುವ ನಿಟ್ಟಿನಲ್ಲಿ ಅವರು ಹೈಕಮಾಂಡ್ ಮುಂದೆ ನಾಲ್ಕು ಪ್ರಮುಖ ಬೇಡಿಕೆಗಳನ್ನು ಇಡುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ.

### » ಇತಿಹಾಸ ಹೇಳುವುದು ಏನು?

ಭಾರತದ ರಾಜಕಾರಣ ಜಾತಿ ಆಧಾರಿತವಾದದ್ದು. ಕರ್ನಾಟಕದಲ್ಲಿ ಲಿಂಗಾಯತರು, ಒಕ್ಕಲಿಗರ ಕೃಪಾಕಟಾಕ್ಷ ಯಾವ ಪಕ್ಷದ ಮೇಲಿರುತ್ತದೋ ಆ ಪಕ್ಷ ಅಧಿಕಾರಕ್ಕೆ ಬಂದಿರುವುದು ಇತಿಹಾಸದಲ್ಲಿ ದಾಖಲಾಗಿದೆ. 2023ರ ಚುನಾವಣೆಯಲ್ಲಿ ಕಾಂಗ್ರೆಸ್ಸಿಗೆ ಉತ್ತರ ಕರ್ನಾಟಕದ ಲಿಂಗಾಯತ ಮತದಾರರ ಕೃಪಾಕಟಾಕ್ಷ ಸಿಕ್ಕಿತ್ತು. 2028ರ ಚುನಾವಣೆಯಲ್ಲಿ ಅದು ಸಿಗುತ್ತೆ ಅನ್ನೋ ಗ್ಯಾರಂಟಿಯಿಲ್ಲ. ಅದಕ್ಕೆ ಕಾರಣ ಹಲವಾರು ಇವೆ, ಅದು ಬೇರೆ ವಿಚಾರ. ಆದರೆ, ಹಳೇಮೈಸೂರು ಪ್ರಾಂತ್ಯದಲ್ಲಿ ಒಕ್ಕಲಿಗರ ಪ್ರಾಬಲ್ಯವಿದ್ದು ಆ ಸಮುದಾಯದ ಬೆಂಬಲ ಸಿಗಬೇಕು. ಹೈಕಮಾಂಡ್ ಗೆ ಈ ವಿಚಾರವನ್ನು ಮನದಟ್ಟು ಮಾಡಲು ಡಿಕೆಶಿ ಬಣ ನಿರ್ಧರಿಸಿರುವುದು ಕುತುಹಲಕ್ಕೆ ಕರಣವಾಗಿದೆ.



ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಶ್ರೀ HD ಕುಮಾರಸ್ವಾಮಿ ಅವರು ತಮ್ಮ ಕುಟುಂಬ ಸಮೇತ ಒಡಿಶಾದ ಪುರಿ ಶ್ರೀ ಜಗನ್ನಾಥ ದೇವಾಲಯಕ್ಕೆ ತೆರಳಿ ಭಗವಂತನ ದರ್ಶನ ಪಡೆದರು.

## ನೇಣು ಹಾಕಿದ ಸ್ಥಿತಿಯಲ್ಲಿ ಬಾಲಕಿ ಶವ ಪತ್ತೆ; ಕೊಲೆ ಶಂಕೆ

**ಮಲ್ಲಮ್ಮ ನುಡಿ ವಾರ್ತೆ**

**ಕಲಬುರಗಿ:** ಮನೆಯ ಮಲಗುವ ಕೋಣೆಯಲ್ಲಿ ನೇಣು ಹಾಕಿದ ಸ್ಥಿತಿಯಲ್ಲಿ ಬಾಲಕಿಯೊಬ್ಬಳ ಶವ ಪತ್ತೆಯಾಗಿರುವ ಘಟನೆ ಸಬ್-ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಲ್ಲಹಂಗರಗಾ ಗ್ರಾಮದಲ್ಲಿ ನಡೆದಿದೆ.

ಮಂಜುಳಾ ತಂದೆ ಗುಂಡೆರಾವ ನೀಲೂರ್ (17) ಎಂಬ ಬಾಲಕಿಯ ಶವ ನೇಣು ಹಾಕಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ನಡೆಯಲು ಬಾರದ ಮತ್ತು ದೈಹಿಕವಾಗಿ ಸದೃಢವಿಲ್ಲದ ಬಾಲಕಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಳ್ಳಲು ಸಾಧ್ಯವಿಲ್ಲ. ಬಾಲಕಿಯನ್ನು ಹೊಡೆದು ಕೊಲೆ ಮಾಡಿ ನೇಣು ಹಾಕಲಾಗಿದೆ ಎಂದು ಮೃತ ಬಾಲಕಿಯ ತಾಯಿ ವಿಮಲಾಬಾಯಿ ನೀಲೂರ್ ಅವರು ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಈ ಹಿಂದೆ ಹೊಲದ ಹಾದಿಯ ವಿಷಯಕ್ಕೆ ಕಲ್ಯಾಣಿ ತಂದೆ ಜಗದೀಶ, ಗುಂಡಪ್ಪ ತಂದೆ ಜಗದೀಶ ಮತ್ತು ಮಲ್ಲಿಕಾರ್ಜುನ ತಂದೆ ಜಗದೀಶ ಜಗಳ ತೆಗೆದಿದ್ದರೂ ಇವರೇ ತಮ್ಮ ಮಗಳನ್ನು ಹಳೆ ವೈಷ್ಯಮದಿಂದ ಹೊಡೆದು ಕೊಲೆ ಮಾಡಿ ನೇಣು ಹಾಕಿರಬಹುದು 2ನೇ ಪುಟನೋಡಿ

## 10 ಡಿಗ್ರಿ ಕುಸಿದ ತಾಪಮಾನ: ಥಂಡಿಗೆ ಜನ ಥಂಡಾ



**ಮಲ್ಲಮ್ಮ ನುಡಿ ವಾರ್ತೆ**

**ಬೀದರ್:** ಬೀದರ್ ಜಿಲ್ಲೆಯಲ್ಲಿ ಮಂಗಳವಾರ ಕನಿಷ್ಠ ತಾಪಮಾನ 10 ಡಿಗ್ರಿ ಸೆಲ್ಸಿಯಸ್ ಗೆ ಕುಸಿದಿದ್ದು, ಇದರೊಂದಿಗೆ ಚಳಿಯ ಪ್ರಮಾಣ ಇನ್ನಷ್ಟು ಹೆಚ್ಚಾಗಿದೆ.

ಪ್ರಸಕ್ತ ಸಾಲಿನಲ್ಲಿ ಅತಿ ಕಡಿಮೆ ತಾಪಮಾನ ದಾಖಲಾಗಿರುವ ದಾಖಲೆಯೂ ಬರೆದಿದೆ. ನಾಲ್ಕು ದಿನಗಳ ಹಿಂದೆಯಷ್ಟೇ ಜಿಲ್ಲೆಯ ಕನಿಷ್ಠ ತಾಪಮಾನ 12 ಡಿಗ್ರಿ ಸೆಲ್ಸಿಯಸ್ ಇತ್ತು.

ಇದಾದ ನಂತರ ತಾಪಮಾನ ಸತತವಾಗಿ ಇಳಿಮುಖವಾಗುತ್ತಿದೆ. ಎರಡು ದಿನಗಳ ಹಿಂದೆ 11 ಡಿಗ್ರಿ 2ನೇ ಪುಟನೋಡಿ

## ಜೀನ್ಸ್ ಫ್ಯಾಕ್ಟರಿ ಮಾಲೀಕರ ಸಂಕಷ್ಟಕ್ಕೆ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ : ಭರತ್‌ರೆಡ್ಡಿ



**ಮಲ್ಲಮ್ಮ ನುಡಿ ವಾರ್ತೆ**

**ಬಳ್ಳಾರಿ:** ಅನುಮತಿ ಸಮಸ್ಯೆಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಬಳ್ಳಾರಿ ಜೀನ್ಸ್ ಯೂನಿಟ್ ಮಾಲೀಕರ ಬೇಡಿಕೆಗೆ ರಾಜ್ಯ ಸರ್ಕಾರ ಸ್ಪಂದಿಸಿದೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಾರಾ ಭರತ್ ರೆಡ್ಡಿ, ಬಳ್ಳಾರಿಯ ಜೀನ್ಸ್ ಉತ್ಪಾದನಾ ಘಟಕಗಳ ಸಮಸ್ಯೆಗೆ ರಾಜ್ಯ ಸರ್ಕಾರ ಸ್ಪಂದಿಸಿ, ಕೈಗೊಂಡ ಪ್ರಮುಖ ನಿರ್ಣಯಗಳನ್ನು ವಿವರಿಸಿದರು.

ಸಿಇಟಿಪಿ ವ್ಯವಸ್ಥೆ ಹೊಂದಿರುವ ಘಟಕಗಳಿಗೆ ಪರಿಸರ ಇಲಾಖೆಯು ತಕ್ಷಣ ಅನುಮತಿ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಇದರಿಂದ ಜೀನ್ಸ್ ಉದ್ಯಮಗಳ ಭವಿಷ್ಯದ ಬಗ್ಗೆ ಆತಂಕದಲ್ಲಿದ್ದ ಜೀನ್ಸ್ ಘಟಕಗಳ ಮಾಲೀಕರಿಗೆ ನೆಮ್ಮದಿ ದೊರಕಿದೆ. ಇದಲ್ಲದೆ, ಬಳ್ಳಾರಿ ಜೀನ್ಸ್ ಘಟಕಗಳಿಗೆ ಆಗತ್ಯವಾದ CETP (Common Effluent Treatment Plant) ಸ್ಥಾಪನೆಗಾಗಿ ಸರ್ಕಾರ ದೊಡ್ಡಮಟ್ಟದ ಹಣಕಾಸು ಮಂಜೂರು ಮಾಡಿದೆ. KAIDB ವತಿಯಿಂದ 11 ಕೋಟಿ, ಮತ್ತು ಏಐಖಆಃ ಮೂಲಕ 11 ಕೋಟಿ, ಒಟ್ಟು 22 ಕೋಟಿ ರೂ. ಮಂಜೂರಾಗಿದ್ದು, ಅಇಖಿ ಪ್ಲಾಂಟ್ ನಿರ್ಮಾಣಕ್ಕೆ ಹಸಿರು ನಿಶಾನೆ ದೊರೆತಿದೆ ಎಂದು ಅವರು ವಿವರಿಸಿದರು.

ರಾಜ್ಯ ಸರ್ಕಾರದ ಈ ನಿರ್ಧಾರದಿಂದ ಬಳ್ಳಾರಿ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ 53 ಜೀನ್ಸ್ ಯೂನಿಟ್‌ಗಳ ಮಾಲೀಕರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ. ದೀರ್ಘಕಾಲದಿಂದ ಅನುಮತಿ ಹಾಗೂ ಪರಿಸರ ಸಂಬಂಧಿತ ಸಮಸ್ಯೆಗಳ ಕಾರಣ ಕಾರ್ಯಾಚರಣೆಯಲ್ಲಿ ಎದುರಿಸುತ್ತಿದ್ದ ಅಡಚಣೆಗಳಿಗೆ ಈ ನಿರ್ಧಾರ ಮಹತ್ವದ ಪರಿಹಾರವಾಗಿದೆ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಬಳ್ಳಾರಿ ಮಹಾನಗರಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಮಾಜಿ ಮಹಾಪೌರರು, ಹಾಲಿ ಸದಸ್ಯರೂ ಆದ ರಾಜೇಶ್ವರಿ ಸುಬ್ಬರಾಯುಡು, ಕಾಂಗ್ರೆಸ್ ಪಕ್ಷದ ಮುಖಂಡರಾದ ವೆಂಕಟೇಶ್ ಹೆಗಡೆ, ಚಾನಾಳ್ ಶೇಖರ್, ಈರನಗೌಡ, ಬೋಯಾಪಾಟಿ ವಿಷ್ಣುವರ್ಧನ್, ಜಿಆರ್‌ಎಲ್ ಸೀನ ಜೀನ್ ಘಟಕಗಳ 2ನೇ ಪುಟನೋಡಿ

## ಪ್ರತಿ ಟನ್ ಕಬ್ಬಿಗೆ 2,950ರೂ. ನಿಗದಿ : ಪ್ರತಿಭಟನೆ ಕೈ ಬಿಟ್ಟ ರೈತರು



ಬೀದರ್ : ಪ್ರತಿ ಟನ್ ಕಬ್ಬಿಗೆ 2,950 ರೂ. ನಿಗದಿಗೊಳಿಸಿರುವುದರಿಂದ ರೈತರು ಪ್ರತಿಭಟನೆಯನ್ನು ಕೈ ಬಿಟ್ಟಿದ್ದಾರೆ.

ನಗರದ ಅಂಬೇಡ್ಕರ್ ವೃತ್ತದಲ್ಲಿ ಸುಮಾರು 8 ದಿನಗಳಿಂದ ಮೈ ಕೊರೆಯುವ ಚಳಿಯಲ್ಲಿಯೇ ರೈತರು ಪ್ರತಿಭಟನೆಯನ್ನು ನಡೆಸುತ್ತಿದ್ದರು. ಗುರುವಾರ ಜಿಲ್ಲಾ ಉಸ್ತುವಾರಿ ಸಚಿವರ ಆದೇಶದ ಮೇರೆಗೆ ಜಿಲ್ಲಾಡಳಿತ ಪ್ರತಿ ಟನ್ ಕಬ್ಬಿಗೆ 2,950 ರೂ. ದರ ನಿಗದಿ ಮಾಡಲಾಗಿದೆ. ಇದರ ಬೆನ್ನಲ್ಲೆ ರೈತರು ಪ್ರತಿಭಟನೆಯನ್ನು ಹಿಂಪಡೆದುಕೊಂಡಿದ್ದಾರೆ.

ಈ ಹಿಂದೆ ಜಿಲ್ಲಾಡಳಿತ ಪ್ರತಿ ಟನ್ ಕಬ್ಬಿಗೆ 2,900 ರೂ. ದರ ನಿಗದಿಗೊಳಿಸಿತ್ತು. ಆದರೆ ಈ ದರವನ್ನು ಒಪ್ಪದ ರೈತರು ಅಹೋರಾತ್ರಿ ಧರಣಿ ಕೈಗೊಂಡಿದ್ದರು. ಉರುಳು ಸೇವೆ ಮಾಡುವ ಮೂಲಕ ಪ್ರತಿಭಟನೆ ನಡೆಸಿದ್ದರು. ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ, ಭೇಟಿ ನೀಡಿ ರೈತರ ಜೊತೆ ಸಮಾಲೋಚನೆ ನಡೆಸಿದ್ದರು.

ಈ ಕುರಿತು ಮಾತನಾಡಿದ ರೈತ ಮುಖಂಡ ಮಲ್ಲಿಕಾರ್ಜುನ್ ಸ್ವಾಮಿ, ಪ್ರತಿ ಟನ್ ಕಬ್ಬಿಗೆ 2,950 ರೂ. ಬೆಲೆ ನಿಗದಿ ಮಾಡಿದಕ್ಕಾಗಿ ನಮಗೆ ಹೆಚ್ಚಿನ ಸಂತೋಷವಿಲ್ಲ. ಕಾರಣ ನಾವು ಅದಕ್ಕಿಂತ ಹೆಚ್ಚಿನ ಬೇಡಿಕೆ ಇಟ್ಟಿದ್ದೆವು. ಆದರೆ ಬೇರೆ ಜಿಲ್ಲೆ, 2ನೇ ಪುಟನೋಡಿ

## ಬಾಗಿಲು ತೆರೆಯದ ಸೋಯಾ ಕೇಂದ್ರ, ಆತಂಕದಲ್ಲಿ ರೈತರು

(ವರದಿ: ಪರಮೇಶ ರಾಂಪುರೆ)

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಪಟ್ಟಣದಲ್ಲಿ ಎ.ಪಿ.ಎಮ್.ಸಿ ಮಾರ್ಕೆಟನಲ್ಲಿ ತೆರೆಯಲಾದ ಸೋಯಾ, ಉದ್ದು ಖರೀದಿ ಕೇಂದ್ರದಲ್ಲಿ ಕೇವಲ ಮೂರು ದಿನ ಮಾತ್ರ ಬೆಂಬಲ ಬೆಲೆಯಲ್ಲಿ ಸೋಯಾ, ಉದ್ದು ಖರದಿ ಮಾಡಲಾಗಿದು, ಲೋಡ್ ಖಾಲಿ ಆಗದ್ದೆ ಇರುವ ಕಾರಣ ನೀಡಿ ಖರೀದಿ ಕೇಂದ್ರದಲ್ಲಿ ಯಾವುದೇ ಬೆಳೆ ಖರೀದಿ ಮಾಡದೆ ಒಂದು ವಾರದಿಂದ ಮುಚ್ಚಿರುವುದು ರೈತರ ಆತಂಕ ಹೆಚ್ಚು ಮಾಡಿದೆ.

ಸರಕಾರ ರೈತರು ಬೆಳೆದೆ ಸೋಯಾ ಬೆಳೆಗೆ ಪ್ರತಿಕ್ವಿಂಟಲ್ ಸೋಯಾಬಿನಗೆ 5,328 ರೂ ಹಾಗೂ ಉದ್ದ 7,800 ರೂ, ಖರೀದಿ ಮಾಡುವ ಯೋಜನೆ ಅಡಿಯಲ್ಲಿ ಕಮಲನಗರ ಪಿ.ಕೆ.ಪಿ.ಎಸ್. ನಲ್ಲಿ ರೈತರು ಈಗಾಗಲೇ ನೋಂದಣಿ ಮಾಡಿ ತಮ್ಮ ಸರತಿಯಾಗಿ ಕಾದು ಕುಳಿತ್ತಿದ್ದಾರೆ.

ಆದ್ದರೆ ಒಂದು ವಾರದಿಂದ ಖರೀದಿ ಕೇಂದ್ರದ ಬಾಗಿಲು ಮುಚ್ಚಿರುವ ಕಾರಣ, ರೈತರಲ್ಲಿ ಆತಂಕ ಮಾಡುದೆ. ಸಾಲ ಸುಲಾ ಮಾಡಿ ಬೆಳೆದೆ ರೈತರ ಬೆಳೆಗೆ ವಿಲೆಯವಾರಿ ಸಮಸ್ಯೆ ನೆಪ ಹೇಳಿ ಖರೀದಿ ಸ್ಥಗಿತ ಮಾಡಿದ್ದರಿಂದ, ರೈತರು ಎಲ್ಲಿ ಬೆಳೆ ಮಾರಬೇಕೆಂದು ದಿಕ್ಕು ತೋಚದ ಪರಿಸ್ಥಿಯಲ್ಲಿ ಬಂದಿದ್ದಾರೆ. ತಾಲೂಕಿನ ಹಲವು ಕೇಂದ್ರದಲ್ಲಿ ಖರೀದಿ ಕೇಂದ್ರ ಇನ್ನೂ ಉದ್ಘಾಟನೆ ಕೂಡ ಮಾಡಿಲ್ಲಾ, ಕಳೆದ ವರ್ಷವೂ ನೋಂದಣಿಯಾಗಿದ ರೈತರ ಸೋಯಾ ಖರೀದಿ ಮಾಡಿಲ್ಲ, ಹೀಗೆ ರೈತರಿಗೆ ಅಧಿಕಾರಗಳಿಂದ 2ನೇ ಪುಟನೋಡಿ



ರೈತರ ಸಾಲ ಮಾಡಿ ಬೆಳೆದು ಬೆಳೆ, ಅತಿವೃಷ್ಟಿಯಿಂದ ನಾಶವಾಗಿ ತೀವ್ರ ಸಂಕಟದಲ್ಲಿ ಇದ್ದು, ಇದ್ದ ಅಲ್ಪಸ್ವಲ್ಪ ಬೆಳೆ ಬೆಂಬಲ ಬೆಲೆಗೆ ಖರೀದಿ ಕೇಂದ್ರಗಳಲ್ಲಿ ನೊಂದಣಿ ಮಾಡಿ ಮಾರಲು ಕಾದು ಕುಳ್ತಿರುವ ಈ ಸಂದರ್ಭದಲ್ಲಿ ಖರೀದಿ ಕೇಂದ್ರದಲ್ಲಿ ಸೋಯಾ ಖರೀದಿ ಮಾಡದೆ ಇರುವುದು ರೈತರ ಕಷ್ಟ ಮತ್ತೊಷ್ಟು ಹೆಚ್ಚಿಗೆ ಮಾಡಿತ್ತಿದೆ. ಆದಷ್ಟು ಬೇಗ ಕಮಲನಗರ ಖರದಿ ಕೇಂದ್ರ ದಲ್ಲಿ ಸೋಯಾ ಖರೀದಿ ಮಾಡಿ ರೈತರಿಗೆ ಆಸರೆ ಆಗಬೇಕು.

**ಪ್ರವೀಣ ಕುಲಕರ್ಣಿ,**
**ರೈತ ಸಂಘದ ತಾಲೂಕ ಅಧ್ಯಕ್ಷರು, ಕಮಲನಗರ**

ಬೆಂಬಲ ಬೆಲೆ ಯೋಜನೆ ಅಡಿ ರೈತರ ಬೆಳೆದ ಬೆಳೆ ನಂ.11 ಕ್ಕೆ ಖರೀದಿ ಮಾಡಲು ಪ್ರಾರಂಭ ಮಾಡಿದು, ಗೋದಾಮು ಭರ್ತಿಯಾಗಿ ಅನ್ಲೋಡಗಾಗಿ ಕಾಯಿತ್ತಿದ್ದೇವೆ, ಅನ್ಲೋಡ್ ಆದ ತಕ್ಷಣ ಮತ್ತೆ ಖರೀದಿ ಪ್ರಾರಂಭ ಮಾಡುತ್ತೇವೆ.

**ಶಾಂತಪ್ಪ ಬಿರಾದಾರ,**
**ಕಾರ್ಯದರ್ಶಿ ಪಿ.ಕೆ.ಪಿ.ಎಸ್. ಕಮಲನಗರ.**

## ಟಿಪ್ಪು ಸುಲ್ತಾನ್ ಜಯಂತಿ ಮೆರವಣಿಗೆ; ಕೆಕೆಆರ್ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ ಭಾಗಿ

## ಒಂದನೇ ಪುಟದಿಂದ

### ನೇಣು ಹಾಕಿದ ಸ್ಥಿತಿಯಲ್ಲಿ

ಎಂದು ಅವರು ಶಂಕೆ ವ್ಯಕ್ತಪಡಿಸಿದ್ದಾರೆ.

ಈಸಂಬಂಧಕಲ್ಯಾಣಿ,ಗುಂಡಪ್ಪ,ಮಲ್ಲಿಕಾರ್ಜುನವಿರುದ್ಧಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

### ಜೀನ್ಸ್ ಫ್ಯಾಕ್ಟರಿ ಮಾಲೀಕರ

ಮಾಲೀಕರಾದವೀರೇಂದ್ರಕುಮಾರ್,ಲೇಬಲ್‌ರಾಜು,ಮಲ್ಲಿಕಾರ್ಜುನಗೌಡ, ಮುರಳಿ, ವಿನಯ್, ದಾದಾ ಖಲಂದರ್, ರಾಖಿ, ಅಶೋಕ್, ಪೊಲೆಕ್ ಮಲ್ಲಿಕಾರ್ಜುನ್, ಮಲ್ಲಿಕಾರ್ಜುನಗೌಡ ಸೇರಿದಂತೆ ಉದ್ಯಮಿಗಳು ಉಪಸ್ಥಿತರಿದ್ದರು.

### ಪ್ರತಿ ಟನ್ ಕಬ್ಬಿಗೆ 2,950ರೂ.

ರಾಜ್ಯಗಳಿಂದಕಬ್ಬಿನಬೀಜತರಿಸಿಕೊಳ್ಳುತ್ತಿರುವನಮಗೆಇಲ್ಲಿಯೇಕಬ್ಬಿನ ಬೀಜದರೀಸರ್ಚ್‌ಸೆಂಟರ್‌ನಿರ್ಮಾಣಮಾಡುವುದಕ್ಕೆಭರವಸೆನೀಡಿದ್ದಾರೆ. ಹಾಗಾಗಿ ನಮ್ಮ ಪ್ರತಿಭಟನೆ ಹಿಂಪಡೆದಿದ್ದೇವೆ ಎಂದು ಹೇಳಿದ್ದಾರೆ.

### ಬಾಗಿಲುತೆರೆಯದಸೋಯಾಕೇಂದ್ರ

ತೊಂದರೆಯಾಗುತ್ತಿದೆ.ಸರಕಾರದ ಯೋಜನೆಗಳು ತಳ ಮಟ್ಟದ ರೈತರಿಗೆ ಅನುಕೂಲ ಮಾಡಲು ಕಾಳಜಿ ಇಲ್ಲದಂತೆ ತೋಚುತ್ತಿದೆ.

ಈ ಸಂಬಂಧ ಮೇಲೆ ಅಧಿಕಾರಿಗಳು ರೈತರ ಸಮಸ್ಯೆ ಮನಗೊಂಡು ಬೆಂಬಲಬೆಲೆ ಖರೀದಿಯನ್ನು ಯಶಸ್ವಿಯಾಗಿ ನಡೆಯುವಂತೆ ಮಾಡಿ ರೈತರಿಗೆ ನ್ಯಾಯ ಸಿಗುವಂತೆ ಮಾಡಬೇಕೆಂದು ರೈತರು ಒತ್ತಾಯಿಸಿದ್ದಾರೆ.

### 10 ಡಿಗ್ರಿ ಕುಸಿದ ತಾಪಮಾನ

ಸೆಲ್ಸಿಯಸ್ ಇದ್ದ ತಾಪಮಾನ, ಬುಧವಾರ ರಾತ್ರಿಯಿಂದ ಗುರುವಾರದ ವರೆಗೆ10 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿದೆ. ಭಾರಿ ಥಂಡಿಗೆ ಜನ ಅಕ್ಷರಶಃ ಥಂಡಾ ಹೊಡೆದಿದ್ದಾರೆ. 28 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ ದಾಖಲಾಗಿದೆ.

ಕಿರಿಯರಿಂದ ಹಿರಿಯರ ತನಕ ಎಲ್ಲಾ ವಯೋಮಾನದವರು ಸ್ವೆಟರ್, ಮಫ್ಲರ್, ಜಾಕೆಟ್ ಧರಿಸಿಕೊಂಡು ಓಡಾಡುವುದು ಸಾಮಾನ್ಯವಾಗಿದೆ. ಅಲ್ಲಲ್ಲಿ ಜನ ಗುಂಪುಗೂಡಿ ರಸ್ತೆಬದಿಯ ವಸ್ತುಗಳನ್ನು ಸುಟ್ಟು, ಮೈ ಕಾಯಿಸಿಕೊಳ್ಳುತ್ತಿದ್ದಾರೆ. ಸಂಜೆ ನಂತರ ಹೊರಗೆ ಜನರ ಓಡಾಟವೂ ಕಡಿಮೆಯಾಗಿದೆ.

ಬರುವ ಎರಡೂ ಮೂರು ದಿನಗಳಲ್ಲಿ ಉಷ್ಣಾಂಶ ಇನ್ನಷ್ಟು ಇಳಿಮುಖಗೊಳ್ಳಲಿದ್ದು, ಇದರೊಂದಿಗೆ ಶೀತ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಜನ ಬೆಚ್ಚನೆಯ ಉಡುಪು ಧರಿಸಿ ಓಡಾಡಬೇಕು. ವಯಸ್ಸಾದವರು, ಐದು ವರ್ಷದೊಳಗಿನ ಮಕ್ಕಳನ್ನು ಬೆಚ್ಚನೆಯ ಪರಿಸರದಲ್ಲಿ ಇಡಬೇಕೆಂದು ವೈದ್ಯರು ಸಲಹೆ ಮಾಡಿದ್ದಾರೆ. ಬೆಳಿಗ್ಗೆ ಏಳು ಗಂಟೆಯ ನಂತರ, ಸಂಜೆ ಆರು ಗಂಟೆಯೊಳಗೆ ವಾಯು ವಿಹಾರ ಮುಗಿಸಿಕೊಂಡು ಮನೆ ಸೇರಬೇಕೆಂದು ಹಿರಿಯ ನಾಗರಿಕರಿಗೆ ಸಲಹೆ ನೀಡಿದ್ದಾರೆ.

## ಎಲ್ಲ ಅಂಗನವಾಡಿ ಶಾಲಾ ಪೂರ್ವ ಚಟುವಟಿಕೆಗಳು ಅತ್ಯುತ್ತಮವಾಗಿ ನಡೆಯಲಿ

ರಾಯಚೂರು: ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಪ್ರಿತಮ್ ಬಿ.ಯಶವಂತ ಅವರು ರಾಯಚೂರು ಜಿಲ್ಲೆಗೆ ಇತ್ತೀಚೆಗೆ ಭೇಟಿ ನೀಡಿ, ಅಂಗನವಾಡಿಗಳಲ್ಲಿನ ಶೈಕ್ಷಣಿಕ ಸ್ಥಿತಿಗತಿ, ಐಸಿಡಿಎಸ್ ಮತ್ತು ಇತರೆ ಯೋಜನೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಮೊದಲಿಗೆ ರಾಯಚೂರು ಗ್ರಾಮೀಣ ಪ್ರದೇಶದ ಎಲೆಬಿಚ್ಚಾಲಿ ಗ್ರಾಮದ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಮಕ್ಕಳು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ನೀಡುವ ಸೌಕರ್ಯಗಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರಿಂದ ಮಾಹಿತಿ ಪಡೆದುಕೊಂಡು, ಕೇಂದ್ರದಲ್ಲಿ ಸಿದ್ಧಪಡಿಸಿದ್ದ ಆಹಾರದ ಗುಣಮಟ್ಟ ಪರಿಶೀಲಿಸಿದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ಶಾಲಾಪೂರ್ವ ಶಿಕ್ಷಣದ ಬಗ್ಗೆ ತರಬೇತಿ ನೀಡಲಾಗಿದೆಯೇ ಎಂದು ಪ್ರಶ್ನಿಸಿ ಅಂಗನವಾಡಿ ಕೇಂದ್ರಗಳಲ್ಲಿನ ಇಸಿಸಿ ಚಟುವಟಿಕೆಗಳ ಬಗ್ಗೆ ಪರಿಶೀಲಿಸಿದರು. ಅಂಗನವಾಡಿಗಳಲ್ಲಿನ 5 ರಿಂದ 6 ವರ್ಷದ ಮಕ್ಕಳಿಗೆ ಚಿತ್ರಕಲೆ ಬಿಡಿಸುವುದು, ಅಕ್ಷರ ಅಭ್ಯಾಸ ಮಾಡಿಸುವುದು ಮತ್ತು ವಾರದ ಚಟುವಟಿಕೆಗಳನ್ನು ನಡೆಸುವ ಪುಸ್ತಕಗಳನ್ನು ಪರಿಶೀಲಿಸಿ ಶಾಲಾ ಪೂರ್ವ ಶಿಕ್ಷಣದ ತರಬೇತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಂಗನವಾಡಿ ಕಟ್ಟಡವನ್ನು ಯಾವ ವರ್ಷದಲ್ಲಿ ನಿರ್ಮಾಣ ಮಾಡಲಾಗಿದೆ? ಘಟಕದ ವೆಚ್ಚ ಎಷ್ಟು? ಯಾವ ಯೋಜನೆಯಲ್ಲಿ ನಿರ್ಮಾಣ ಮಾಡಲಾಗಿದೆ? ಎಂದು ಕೇಳಿ ಕಟ್ಟಡದ ಗುಣಮಟ್ಟ ಹಾಗೂ ಅಲ್ಲಿನ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಿದರು.

ಬಳಿಕ ಅವರು ಹಂಚಿನಾಳ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದರು. ಮಕ್ಕಳಿಗೆ ನೀಡುವ ಮಿಲ್ಲೆಟ್ ಲಾಡುವಿನ ಗುಣಮಟ್ಟ ಮತ್ತು ಅದರ ರುಚಿಯನ್ನು ಪರಿಶೀಲಿಸಿದರು. ಕೇಂದ್ರದಲ್ಲಿ ಸೋಲಾರ್ ವಿದ್ಯುತ್ ಅಳವಡಿಸಿರುವುದನ್ನು ಗಮನಿಸಿ ಇದು ಉತ್ತಮವಾದ ಬೆಳವಣಿಗೆ ಆಗಿದ್ದು, ಈ ರೀತಿ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಸೋಲಾರ್ ವ್ಯವಸ್ಥೆ ಮಾಡಿಸುವ ಬಗ್ಗೆ ಗಮನ ಹರಿಸಿ ಎಂದು ತಿಳಿಸಿದರು.

ಬಳಿಕ ರಾಯಚೂರು ನಗರ ಯೋಜನೆಯ ಸಿಯಾತಲಾಬ್ ಬಡಾವಣೆಯ 02 ಅಂಗನವಾಡಿ ಕೇಂದ್ರಗಳಿಗೆ ಸಹ ದಿಢೀರ್ ಭೇಟಿ ನೀಡಿದರು. ಅಂಗನವಾಡಿ ಕೇಂದ್ರವು ಬಾಡಿಗೆ ಕಟ್ಟಡದಲ್ಲಿರುವುದನ್ನು ಗಮನಿಸಿ, ಈ ಕಟ್ಟಡಕ್ಕೆ ಎಷ್ಟು ಬಾಡಿಗೆ ನೀಡಲು ಅವಕಾಶವಿದೆ ಎಂದು ಕೇಳಿದರು. ಎರಡೂ ಕೇಂದ್ರಗಳಲ್ಲಿನ ಆಹಾರ ಧಾನ್ಯಗಳ ಬಗ್ಗೆ ಪರಿಶೀಲಿಸಿದರು. ಅಪೌಷ್ಟಿಕತೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಹೆಚ್ಚಿನ ಪೌಷ್ಟಿಕಾಂಶ ಹೊಂದಿರುವ ಆಹಾರವನ್ನು ಮಕ್ಕಳಿಗೆ ನೀಡಲು ಹಾಗೂ ಚಿಕಿತ್ಸೆಗಾಗಿ ಮಕ್ಕಳನ್ನು ಎನ್.ಆರ್.ಸಿ ಕೇಂದ್ರಕ್ಕೆ ಕಳುಹಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು. ಅಂಗನವಾಡಿ ಮಕ್ಕಳ ಶಾಲಾಪೂರ್ವ ಚಟುವಟಿಕೆಗಳ ಬಗ್ಗೆ ಕೇಳಿದರು. ಅಂಗನವಾಡಿಗಳಲ್ಲಿ ಪ್ರತಿ ದಿನ ನಡೆಯುವ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಮಕ್ಕಳು ಹಾಡಿನ ಮೂಲಕ ಪ್ರದರ್ಶಿಸಿದ್ದನ್ನು ಗಮನಿಸಿ ಸಂತಷ ವ್ಯಕ್ತಪಡಿಸಿದರು. ಕ್ರಿಯಾಶೀಲರಾಗಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಅಭಿನಂದಿಸಿದರು.

## ತಾನು ಬೋಧನೆ ಮಾಡಿದ ಶಿಷ್ಯ ವೃಂದಕ್ಕೆ ಗುರುವಿನಿಂದ ವಿಶೇಷ ಸನ್ಮಾನ
## ಗುರುವಿನಿಂದ ವಿನೂತನ ಶಿಷ್ಯವಂದನಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ



ಬೀದರ್:ತಾನು ಬೋಧನೆ ಮಾಡಿದ ವಿದ್ಯಾರ್ಥಿಗಳನ್ನು ಶಿಷ್ಯನೆಂದು ತಿಳಿದು ಅವರಿಂದಲೇ ಗುರುವಂದನೆ ರೂಪದಲ್ಲಿ ಗೌರವ-ಕಾಣಿಕೆ ಸ್ವೀಕರಿಸುವ ಇಂದಿನ ದಿನಮಾನ ಗಳಲ್ಲಿ, ಗುರುಗಳಾದವರು ಶಿಷ್ಯರನ್ನು ಹುಡುಕಿ ಅವರಿಗೆ ಗೌರವ ಸನ್ಮಾನವನ್ನು ನೀಡುತ್ತಿರುವುದು ನಿಜವಾಗಿಯೂ ವಿನೂತನ ಕ್ರಮವಾಗಿದ್ದು, ಗುರುಗಳಾದವರಿಗೆ ಅನುಕರಣೀಯವಾದ ಉದಾಹರಣೆಯಾಗಿದೆ ಎಂದು ಪಶು ವೈದ್ಯಕೀಯ ವಿಶ್ವ ವಿದ್ಯಾಲಯದ ನಿವೃತ್ತ ಉಪ ಹಣಕಾಸು ಅಧಿಕಾರಿ ವೀರಭದ್ರಪ್ಪ ಉಪ್ಪಿನ ರವರು ಅಭಿಪ್ರಾಯ ಪಟ್ಟರು. ಅವರು ಇತ್ತೀಚೆಗೆ ಬೀದರಿನ ಲಾವಣ್ಯ ಕನ್ವೆನ್ಷನ್ ಹಾಲನಲ್ಲಿ, ಭಾರತ ಸರಕಾರದ ಪಶು ಸಂಗೋಪನೆ ಇಲಾಖೆ ನವದೆಹಲಿಯ ಮಾಜಿ ಆಯುಕ್ತರು ಹಾಗೂ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾಲಯದ ವಿಶ್ರಾಂತ ಕುಲಪತಿ ಗಳಾದ ಪ್ರೊ ಸುರೇಶ್ ಎಸ್. ಹೊನ್ನಪ್ಪಗೊಳ ರವರ ಪ್ರಾಯೋಜಕತ್ವದಲ್ಲಿ ಆಯೋಜಿಸಲಾದ ಬೀದರ ಪಶು ವೈದ್ಯಕೀಯ ಮಹಾವಿದ್ಯಾಲಯದ ಪ್ರಥಮ ಬ್ಯಾಚಿನ ವಿನೂತನ ಶಿಷ್ಯ ವಂದನಾ- 2 ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿ, ಬೀದರ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ಇನ್ಸ್ಟಕ್ಟರ್ ಹುದ್ದೆಗೆ ಸೇರಿ, ಹಂತ ಹಂತವಾಗಿ ಪದೋನ್ನತಿ ಹೊಂದಿ ಚಿಕ್ಕವಯಸ್ಸಿನಲ್ಲಿಯೇ ವಿಶ್ವವಿದ್ಯಾಲಯದ ಕುಲಪತಿಗಳಾಗಿ ಸೇವೆ ಸಲ್ಲಿಸಿ, ಕೇಂದ್ರ ಸರಕಾರದ ಪಶು ಸಂಗೋಪನೆ ಇಲಾಖೆಯಲ್ಲಿ ಆಯುಕ್ತರಾಗಿ ಸೇವೆಗೈದು ವಯೋ ನಿವೃತ್ತಿ ಹೊಂದಿರುವ ಹೊನ್ನಪ್ಪ ಗೊಳ್ ರವರು ತಾವು ಬೋಧನೆ ಮಾಡಿರುವ ಹಳೆ ವಿದ್ಯಾರ್ಥಿಗಳಿಗೆ ಹುಡುಕಿ ಅವರಿಗೆ ವಿಶೇಷ ಸನ್ಮಾನ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಕೊಂಡಾಡಿದರು. ಶಿಷ್ಯ ವಂದನೆಯ ಪ್ರಾಯೋಜಕರಾದ ಸುರೇಶ್ ಎಸ್. ಹೊನ್ನಪ್ಪಗೋಳ್ರವರು ಮಾತನಾಡಿ, ವೃತ್ತಿಯಲ್ಲಿ ಶಿಕ್ಷಕನಾದ ನನಗೆ ಬೋಧನೆಯಿಂದ ಸಂತೃಪ್ತಿ ದೊರೆತಿದೆ.

ನನ್ನ ವಿದ್ಯಾರ್ಥಿಗಳು ಜಂಟಿ ನಿರ್ದೇಶಕರಂತಹ ಉನ್ನತ ಸರ್ಕಾರಿ ಹುದ್ದೆಯನ್ನು ನಿರ್ವಹಿಸಿ, ಯಾವುದೇ ಕಪ್ಪು ಚುಕ್ಕೆ ಇಲ್ಲದೆ ವಯೋನಿವೃತ್ತರಾಗಿರುವುದು ನನಗೆ ಖುಷಿಯಾಗಿದೆ. ರಾಜ್ಯ, ದೇಶ-ವಿದೇಶಗಳಲ್ಲಿ ನನ್ನ ವಿದ್ಯಾರ್ಥಿಗಳು ಉನ್ನತ ಹುದ್ದೆಗಳಲ್ಲಿರುವುದು ಹೆಚ್ಚಿನ ಸಂತಸ ತಂದಿದೆ ಎಂದರು. ನನಗೆ ಮಕ್ಕಳ ಭಾಗ್ಯವಿಲ್ಲದಿದ್ದರೂ ನನ್ನ ವಿದ್ಯಾರ್ಥಿಗಳನ್ನೇ ಮಕ್ಕಳೆಂದು ತಿಳಿದಿದ್ದೇನೆ ಎಂದು ಭಾವುಕರಾಗಿ ನುಡಿದರು.

1984-1989 ಅವಧಿಯಲ್ಲಿ ಬೀದರಿನಲ್ಲಿ ವ್ಯಾಸಂಗ ಮಾಡಿದ್ದ ಡಾಕ್ಟರ್ ರಾಘವೇಂದ್ರ ಪಟೇಲ, ಡಾ. ಎಸ ಎಸ ಪಾಟೀಲ, ಡಾ. ಬಿ ಎಸ ಕಿತ್ತೂರ, ಡಾ ಸಿರಾಜ ಡಿ ಔಟಿ, ಡಾ ವಿನೋದಕುಮಾರ ಕವಲೂರ ಹಾಗೂ ಕ್ಯಾಪ್ಟನ ಮೃತ್ಯುಂಜಯ ರವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ಉಪ್ಪಿನ್ ರವರು ಸ್ವಾಗತಗೀತೆ ಯನ್ನು ಹಾಡಿದರೆ, ಡಾಕ್ಟರ್ ಚನ್ನಪ್ಪ ಗೌಡ ಬಿರಾದಾರ ರವರು ನಿರೂಪಿಸಿದರು. ಕೃಷಿ ವಿಜ್ಞಾನ ಕೇಂದ್ರದ ಸಿದ್ದು ಮಣಗೆಯವರು ಸ್ವಾಗತಿಸಿದರು. ಕೊನೆಯಲ್ಲಿ ಡಾ. ಮಂಜುನಾಥ ಪಾಟೀಲ ರವರು ವಂದಿಸಿದರು.

ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥೆ ಡಾ. ಭವಾನಿ, ಕರ್ನಾಟಕ ಪಶು ವೈದ್ಯಕೀಯ ಸಂಘದ ಅಧ್ಯಕ್ಷರಾದ ಶಿವಶರಣಪ್ಪ ಯಲಗೋಡ, ಪಶುವೈದ್ಯರಾದ ಚಂದ್ರಕಾಂತ ಪಾಟೀಲ, ವಿಟಿಯು ಆಡಳಿತ ಮಂಡಳಿಯ ಸದಸ್ಯರಾದ ವೀರಶೆಟ್ಟಿ ಮಣಗೆ, ಪವಿವಿ ಯ ಮಾಜಿ ಸದಸ್ಯ ಸಮದ ಸಿದ್ದಿಕಿ, ಪವಿವಿ ಯ ಸಂಶೋಧನ ನಿರ್ದೇಶಕ ಡಾ. ಬಿ. ವಿ. ಶಿವಪ್ರಕಾಶ ಅತಿಥಿ ಗಳಾಗಿದ್ದರು. ಸಾವನ ಕುಮಾರ, ರಾಜು ದುಗಾನಿ, ಡಾ. ಮಲ್ಲಿನಾಥ, ಡಾ ಗಣಾಧೀಶ್ವರ್ ಮುಂತಾದವರು ಹಾಜರಿದ್ದರು.

## ಮಕ್ಕಳಲ್ಲಿ ಕಲಿಕಾ ಆಸಕ್ತಿ ಹುಟ್ಟಿಸಿ: ಉಪಕುಲಪತಿ ಡಾ.ಶಶಿಕಾಂತ

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ: ಶಿಕ್ಷಕರಾದವರೂ ವಿನೂತನ ಪ್ರಯೋಗಳನ್ನು ಅನುಸರಿಸಿ ಮಕ್ಕಳಲ್ಲಿ ಕಲಿಕಾ ಆಸಕ್ತಿ ಹುಟ್ಟಿಸುವ ಪ್ರಯತ್ನ ಮಾಡಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಶಶಿಕಾಂತ ಉಡಿಕೇರಿ ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ ವತಿಯಿಂದ ಗುರುವಾರ ಆಯೋಜಿಸಿದ್ದ ಕಲಿಕಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಮನಸ್ಸು ಹಸಿ ಮಣ್ಣು ಇದ್ದಂತೆ ಬೇಕಾದ ಮೂರ್ತಿ ತೆಗೆಯಬಹುದು. ಅಂತಹ ಮುಗ್ಧ ಮನಸ್ಸು ಹೊಂದಿರುವ ಮಕ್ಕಳಿಗೆ ಬಾಲ್ಯದಿಂದಲೇ ಮೌಲ್ಯಾಧಾರಿತ ಶಿಕ್ಷಣ ಕಲ್ಪಿಸಿದರೇ ಮುಂದೆ ಅವರು ದೇಶದ ಉತ್ತಮ ಪ್ರಜೆಯಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ. ಇಂದಿನ ಒತ್ತಡದ ವಿವಿಧ ಚಟುವಟಿಕೆಗಳ ಮಧ್ಯೆ ಶಿಕ್ಷಣದ ಮೌಲ್ಯ ಕುಸಿಯುತ್ತಿದೆ ಎಂದು ಆತಂಕ ವ್ಯಕ್ತ ಪಡಿಸಿದ ಅವರು, ಪ್ರಾಥಮಿಕ ಹಂತದ ಶಿಕ್ಷಣ ಮಕ್ಕಳ ಭವಿಷ್ಯ ನಿರ್ಧರಿಸುತ್ತದೆ.

ಹಾಗಾಗಿ ಶಿಕ್ಷಕರು ಹೊಸತನ್ನು ತಿಳಿದುಕೊಂಡು ಮಕ್ಕಳ ಬುದ್ಧಿಮಟ್ಟಕ್ಕೆ ತಕ್ಕಂತೆ ಬೋಧಿಸುವ ಕೆಲಸವಾದರೇ ಮಾತ್ರ ಮಕ್ಕಳಲ್ಲಿ ಕಲಿಯುವ ಆಸಕ್ತಿ ಹೆಚ್ಚುತ್ತದೆ. ರಾಷ್ಟ್ರೀಯ ಹಬ್ಬಗಳ ಮಹತ್ವ, ಮಹಾತ್ಮರ ಜೀವನ ಚರಿತ್ರೆ ಹೇಳಿಕೊಡುವುದರ ಜತೆಗೆ ಕ್ರೀಡೆಗೆ ಹೆಚ್ಚಿನ ಆಸಕ್ತಿ ನೀಡಿದರೇ ಮಕ್ಕಳು ಶಿಕ್ಷಣ ಕಲಿಕೆಗೆ ಹೆಚ್ಚು ಉತ್ಸಾಹ ತೋರುತ್ತಾರೆ ಎಂದು ತಿಳಿಸಿದರು.

> ಇಂದಿನ ಮಕ್ಕಳು ಸಾಕಷ್ಟು ಬುದ್ಧಿವಂತರಿದ್ದಾರೆ. ಆದರೆ ಹೃದಯ ವೈಶ್ಯಾಲತೆ ಕಡಿಮೆ ಆಗುತ್ತಿದೆ. ಶಿಕ್ಷಕರು ಕಾಲಕ್ಕೆ ತಕ್ಕಂತೆ ಬೋಧನಾ ಪದ್ಧತಿ ಅನುಸರಿಸಿ ಮಕ್ಕಳಿಗೆ ಜೀವನದ ಪಾಠ ಹೇಳಿಕೊಡುವ ಕೆಲಸ ಮಾಡಬೇಕು.
>
> **ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಸಾನ್ನಿಧ್ಯ ವಹಿಸಿದ್ದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಅತಿಯಾದ ಮೊಬೈಲ್ ಬಳಕೆಯಿಂದ ಮಕ್ಕಳಲ್ಲಿ ದೃಷ್ಟಿದೋಷ ಹೆಚ್ಚುತ್ತಿದೆ. ಹಾಗಾಗಿ ಮಕ್ಕಳನ್ನು ಮೊಬೈಲ್‌ನಿಂದ ಆದಷ್ಟು ದೂರ ಇಡುವ ಕೆಲಸ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಪ್ರಗತಿಪರ ಚಿಂತಕ ಸಿದ್ದಪ್ಪ ಮೂಲಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಲಬುರಗಿ ಕೇಂದ್ರಿಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಕಿರಣ ಗಾಜನೂರು ಅವರು ದಿಕ್ಸೂಚಿ ಮಾತುಗಳನ್ನು ಹೇಳಿದರು. ಕಲಬುರಗಿ ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಅರುಣ ಜೋಳದ ಕೂಡ್ಲಗಿ, ಡಾ.ಜ್ಯೋತಿ, ಡಾ.ದೇವಿಕಾ ವಿಷಯವಾರು ಸಂವಾದ ನಡೆಸಿ ಕೊಟ್ಟರು. ಜ್ಯೋತ್ಸಾ ಅಂಬೇವಾಡ್ಕರ್ ಯೋಗ ಶಿಕ್ಷಣ ಹೇಳಿಕೊಟ್ಟರು. ಈ ಸಂದರ್ಭದಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ರಾಘವೇಂದ್ರ ಭೈರಪ್ಪ, ಅನುದಾನಿತ ಪದವಿಪೂರ್ವ ಕಾಲೇಜುಗಳ ನೌಕರರ ಸಂಘದ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ್, ಆಡಳಿತಾಧಿಕಾರಿ ಮೋಹನ ರೆಡ್ಡಿ ಸೇರಿದಂತೆ ಹಲವರು ಇದ್ದರು. ಸವಿತಾ ಭೂರೆ, ಸುಧಾ ನಾಯಕ ವಚನ ಗಾಯನ ನಡೆಸಿ ಕೊಟ್ಟರು. ಪ್ರಾಚಾರ್ಯ ಬಸವರಾಜ ಮೊಳಕೀರೆ ಸ್ವಾಗತಿಸಿದರು. ಮಧುಕರ ಗಾಂವಕರ್ ನಿರೂಪಿಸಿದರು. ಬಾಲಾಜಿ ವಲ್ಲೂರೆ ವಂದಿಸಿದರು.

## ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ನೆರೆ ಹೊರೆಯವರ ಹಕ್ಕುಗಳ ಕುರಿತು ರಾಷ್ಟ್ರಾದ್ಯಂತ ಅಭಿಯಾನ: ಆಸಿಫೋದ್ದಿನ್




ಮಲ್ಲಮ್ಮ ನುಡಿ ವಾರ್ತೆ

**ಬೀದರ್ :** ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ಮಾದರಿ ನೆರೆಹೊರೆ, ಮಾದರಿ ಸಮಾಜ ಎಂಬ ಶೀರ್ಷಿಕೆಯಡಿಯಲ್ಲಿ ನೆರೆಹೊರೆಯವರ ಹಕ್ಕುಗಳ ರಾಷ್ಟ್ರೀಯ ಮಟ್ಟದ ಅಭಿಯಾನವನ್ನು ಇಂದಿನಿಂದ ನ.30ರ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಮಾತೆ ಇಸ್ಲಾಮಿ ಹಿಂದ್ ರಾಜ್ಯ ಸಲಹಾ ಮಂಡಳಿ ಸದಸ್ಯ ಮುಹಮ್ಮದ ಆಸಿಫೋದ್ದಿನ್ ತಿಳಿಸಿದರು.

ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಮಾಜದ ಮುಂದೆ ನೆರೆಹೊರೆಯವರ ಹಕ್ಕುಗಳ ಅತ್ಯುತ್ತಮ ಮಾದರಿಯನ್ನು ಪ್ರಸ್ತುತಪಡಿಸುವುದು, ಪರಸ್ಪರರ ಬಗ್ಗೆ ಕಾಳಜಿ, ಸಹಕಾರ, ಶಿಸ್ತು, ಶುಚಿತ್ವ ಮತ್ತಿತರ ಸಾಮಾಜಿಕ ಹೊಣೆಗಾರಿಕೆಗಳನ್ನು ನಿರ್ವಹಿಸಲು ಪ್ರೇರೇಪಿಸುವುದು, ನೆರೆಹೊರೆಯವರ ಮಧ್ಯೆ ಇರುವ ಅಂತರವನ್ನು ನೀಗಿಸಿ ಅವರ ಮಧ್ಯೆ ಸೌಹಾರ್ದತೆ ಸಂಬಂಧ ಬೆಳೆಯುವಂತೆ ಮಾಡುವುದು ಹಾಗೂ ದಾರಿಹೋಕರು, ಸಹೋದ್ಯೋಗಿಗಳು, ಪ್ರಯಾಣಿಕರು, ರಸ್ತೆಯ ನಿಯಮಗಳು, ವಾಹನ ಸಂಚಾರದ ನಿಯಮಗಳ ಬಗ್ಗೆ ಕಾಳಜಿ ಉಳ್ಳವರಾಗಿ ಮಾಡುವುದಾಗಿದೆ ಎಂದರು.

ನ. 30ರ ವರೆಗೆ ನಡೆಯಲಿರುವ ಈ ಅಭಿಯಾನದ ಪ್ರಯುಕ್ತ ಪ್ರವಚನ, ಮೊಹಲ್ಲಾ ಸಭೆಗಳು, ಕರಪತ್ರ ವಿತರಣೆ, ಕೌಟುಂಬಿಕ ಭೇಟಿ, ಸಾಂಸ್ಕೃತಿಕ ಕಾರ್ಯಕ್ರಮ, ಟ್ರಾಫಿಕ್ ನಿಯಮಗಳ ಜಾಗೃತಿ ಸಮಾವೇಶ ಹಾಗೂ ವಿದ್ಯಾರ್ಥಿ, ಯುವಕರ ರ‍್ಯಾಲಿ ಮುಂತಾದ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕಳೆದ 77 ವರ್ಷಗಳಿಂದ ಯಾವುದೇ ಪಕ್ಷದೊಂದಿಗೆ ಸಂಬಂದ ಇಲ್ಲದೆ ಸಮಾಜ ಸೇವೆ ಮಾಡುತ್ತಿರುವ ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ಇತ್ತಿಚೇಗೆ ಶಿವರುದ್ರ ಬೇಲಿಮಠ ಸ್ವಾಮಿಜಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿ, ಮನುಷ್ಯ ಚಂದ್ರನ ಬಳಿಗೆ ಹೋಗುತಿದ್ದಾನೆ ಆದರೆ ಪಕ್ಕದ ನೆರೆಹೊರಯವರ ಬಳಿ ಹೋಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು ಹೀಗಾಗಿ ನಮ್ಮ ರಾಷ್ಟ್ರ ಮಟ್ಟದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಎಂದು ಹೇಳಿದರು.

ಸಮಾಜದಲ್ಲಿ ಬದಲಾವಣೆ ತರುವ ಕೆಲಸಕ್ಕೆ ಜಮಾತೆ ಇಸ್ಲಾಮಿ ಹಿಂದ ಕೆಲಸ ಮಾಡುತ್ತಿದೆ ಇಲ್ಲಿ ಯಾವುದೇ ಒಂದು ಧರ್ಮಕ್ಕೆ ಸಿಮಿತಗೊಂಡಿಲ್ಲ. ಸಮಾಜದಲ್ಲಿ ಅನೇಕ ಶಕ್ತಿಗಳು ಒಡೆಯುವ ಕೆಲಸ ಮಾಡುತ್ತಿವೆ ಹೀಗಾಗಿ ಯುವಕರು, ಮಹಿಳೆಯರು, ಮಕ್ಕಳಿಗಾಗಿ ಪ್ರತ್ಯೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ ಎಂದು ಆಸಿಫೋದ್ದಿನ್ ತಿಳಿಸಿದರು.

ಜಮಾತೆ ಇಸ್ಲಾಮಿ ಹಿಂದ ಬೀದರಿನ ಸದಸ್ಯರಾದ ಮುಹಮ್ಮದ ನಿಝಾಮೋದ್ದಿನ್ ಮಾತನಾಡಿ, ರಾಷ್ಟ್ರ ಮಟ್ಟದಲ್ಲಿ ಈ ಅಭಿಯಾನ ಹಮ್ಮಿಕೊಂಡಿದ್ದು ಸಧ್ಯ ಹೆಸರಿಗೆ ಮಾತ್ರ ನೆರೆ ಹೊರೆಯವರು ಎಂದು ಹೇಳಲಾಗುತ್ತಿದೆ ಆದರೆ ಅವರ ಸುಖ ದುಖ, ಮಾನ ಮರ್ಯಾದೆ ಬಗ್ಗೆ ಕೇಳುವವರಿಲ್ಲ ಹೀಗಾಗಿ ನೆರೆ ಹೊರೆಯವರು ಸುಖ ದುಖದಲ್ಲಿ ಪಾಲ್ಗೋಳ್ಳುವುದಕ್ಕಾಗಿಯೇ ಜಾಗೃತಿ ಮೂಡಿಸುವುದೇ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದರು.

ನ. 21 ಹಾಗೂ 28 ರಂದು ಶುಕ್ರವಾರದ ಕಾರಣ ಎಲ್ಲ ಮಸಿದಿಗಳಲ್ಲಿ ಈ ಅಭಿಯಾನ ಕುರಿತು ಪ್ರವಚನಗಳು ನಡೆಯಲಿವೆ. ನಾಳೆ(ನ.22 ರಂದು) ಸಂಜೆ ನಗರದ ಜಾಮಿಯಾ ಮಸಿದಿಯಲ್ಲಿ ಸಂಜೆ 6.30ಕ್ಕೆ ವಿಶೇಷ ಕಾರ್ಯಕ್ರಮ ನಡೆಯಲಿದ್ದು ಜಮಾತೆ ಇಸ್ಲಾಮಿ ಹಿಂದ್ ರಾಷ್ಟ್ರೀಯ ಉಪಾಧ್ಯಕ್ಷರಾದ ಎಸ್ ಅಮಿವುಲ್ ಹಸನ್ ಭಾಷಣ ಮಾಡುವರು. ನ.23ರಂದು ಬೆಳಿಗ್ಗೆ ಸಿಐಓ ವತಿಯಿಂದ ರ‍್ಯಾಲಿ ನಡೆದು ಡಿಸೆಂಟ್ ಫಂಕ್ಷನ್ ಹಾಲನಲ್ಲಿ ಕಾರ್ಯಕ್ರಮ ನಡೆಯಲಿದೆ. ಅಂದು ರಾತ್ರಿ 8.30ಕ್ಕೆ ಇದಾರಾ ಅದಬ್ ಎ ಇಸ್ಲಾಮಿ ವತಿಯಿಂದ ಮುಷಾಯಿರಾ, ಜಿ.ಐ.ಓ. ಮತ್ತು ಸಿ.ಐ.ಓ. ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಡ್ರಾಯಿಂಗ್, ಗ್ರೇಟಿಂಗ್ ರ‍್ಡ, ಬೀದಿ ನಾಟಕ ವಿದ್ಯಾರ್ಥಿಗಳಿಂದ ಕಾರ್ಯಕ್ರಮಗಳು ಜರುಗಲಿದ್ದು ನ.29ರಂದು ಯುವಕರ ಕಾರ್ಯಕ್ರಮ ಆಟದ ಮೈದಾನ ಮತ್ತು ಜಿಮ್ ನಲ್ಲಿ ಜರುಗಲಿವೆ ನ.30ರಂದು 12 ಝೋನಗಳಲ್ಲಿ ದೇಶ ಬಾಂಧವರಿಗೆ ಕಾರ್ಯಕ್ರಮಗಳಿದ್ದು ಆಸ್ರಾ ಪಬ್ಲಿಕ್ ಸ್ಕೂಲ್, ಅಲ್ ಅಮೀನ ಕಾಲೇಜ್, ವಿಜ್ಡಮ್ ಕಾಲೇಜ, ಡಿವೈನ್ ಕಾಲೇಜುಗಳಲ್ಲಿ ಕಾರ್ಯಕ್ರಮಗಳು ನಡೆಯಲಿವೆ ಎಂದು ನಿಝಾಮುದ್ದಿನ್ ತಿಳಿಸಿದರು.

ಜಮಾತೆ ಇಸ್ಲಾಮಿ ಮಹಿಳಾ ವಿಭಾಗದ ಜಿಲ್ಲಾ ಸಂಚಾಲಕಿ ತೌಹೀದ್ ಸಿಂಧೆ ಮಾತನಾಡಿ, ಬೀದರ್ ನಗರದ ಪಕ್ಕದ ಗ್ರಾಮೀಣ ಭಾಗದಲ್ಲಿರುವ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದ ಅವರು, ಡಿಸೆಂಬರ್ 7ರಂದು ನಗರದ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಕುರಾನ್ ಪ್ರವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಅನುಪಮಾ ಮ್ಯಾಜ್ಹಿ ಸಂಪಾದಕರಾದ ಸಬೀಹಾ ಫಾತೀಮಾ, ತಸ್ಲಿಮಾ ಖಾನಂ, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ ಪ್ರತಿಮಾ ಬಹೇನ್‌ಜಿ ಸೇರಿದಂತೆ ಇನ್ನಿತರು ಪಾಲ್ಗೊಳ್ಳುವರು ಎಂದರು.

ಮಹಿಳಾ ವಿಭಾಗದ ಸಂಚಾಲಕಿ ಅಸ್ಮಾ ಸುಲ್ತಾನ ಮಾತನಾಡಿ, ಅಭಿಯಾನದಡಿ ಮನೆ ಮನೆಗೆ ಭೇಟಿ, ಪೊಲೀಸ್ ಠಾಣೆ ಹಾಗೂ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳ ಆರೋಗ್ಯ ವಿಚಾರಣೆ, ಸ್ಲಂ ಏರಿಯಾಗಳಲ್ಲಿ ವಾಸಿಸುವ ಜನರನ್ನು ಭೇಟಿ ಮಾಡುವುದಲ್ಲದೆ ನೆರೆ ಹೊರೆಯವರೊಂದಿಗೆ ಸೇರಿ ಗಿಡ ನೇಡುವ ಕಾರ್ಯಕ್ರಮ ಕೂಡ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಜಮಾತೆ ಇಸ್ಲಾಮಿ ಹಿಂದ್‌ನ ಸ್ಥಳೀಯ ಉಪಾಧ್ಯಕ್ಷ ಮಹಮ್ಮದ್ ಆರಿಫೋದ್ದಿನ್ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

ಕರ್ನಾಟಕ ಸರ್ಕಾರ

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಾದೇಶಿಕ ಅರಣ್ಯ ಉಪ ವಿಭಾಗ, ಕಲಬುರಗಿ**

**ಪ್ರಾದೇಶಿಕ ಅರಣ್ಯ ವಿಭಾಗ ಕಛೇರಿ,** ಎಸ್.ಬಿ. ದೇವಸ್ಥಾನ ರಸ್ತೆ, ಕಲಬುರಗಿ-585102, ದೂರವಾಣಿ ಸಂಖ್ಯೆ: 08472-256601, ಮಿಂಚಂಚೆ ವಿಳಾಸ : acfkalaburagit@gmail.com

ಸಂಖ್ಯೆ: ಸಅಸಂ/ಉವಿಕ/ಇ-ಟೆಂಡರ್/ಸಿಆರ್-/2025-26 ದಿನಾಂಕ : 19-11-2025

**:: ಅಲ್ಪಾವಧಿ ಟೆಂಡರ್ ಪ್ರಕಟಣೆ ::**

**(ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪೋರ್ಟಲ್ ನಡಿಯಲ್ಲಿ ಮಾತ್ರ)**

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ ಪ್ರಾದೇಶಿಕ ಅರಣ್ಯ ವಿಭಾಗ ಕಲಬುರಗಿ ರವರ ಕಛೇರಿಯಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಯಡಿ ಸಿವ್ವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪೋರ್ಟಲ್ ನಡಿಯಲ್ಲಿ **ಮೊದಲನೇ ಬಾರಿಗೆ** ಟೆಂಡರ್ ಅಹ್ವಾನಿಸಲಾಗಿದ್ದು, ವಿವರ ಈ ಕೆಳಗಿನಂತಿವೆ. ಕಾಮಗಾರಿಯ ವಿವರ : **ಕಲಬುರಗಿ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ ಪ್ರತ್ಯಕವಾಗಿ ಟೆಂಡರ್ ಅಹ್ವಾನಿಸಲಾಗಿದೆ.** 1) ಟೆಂಡರ್‌ಗಿಟ್ಟ ಮೊತ್ತ : ಕನಿಷ್ಠ 6,40,360, ಗರಿಷ್ಠ 11,07,000, 3) ತಾಂತ್ರಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **28-11-2025 ಅಪರಾಹ್ನ 4.00 ಗಂಟೆ ವರೆಗೆ,** 4) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ಕೊನೆಯ ದಿನಾಂಕ : **29-11-2025 ಅಪರಾಹ್ನ 04.30 ಗಂಟೆಯ ನಂತರ,** 5) ಆರ್ಥಿಕ ಬಿಡ್‌ಗಳನ್ನು ತೆರೆಯುವ ಕೊನೆಯ ದಿನಾಂಕ : **01-12-2025 ಅಪರಾಹ್ನ 04.00 ಗಂಟೆಯ ನಂತರ,** 6) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಾದೇಶಿಕ ಅರಣ್ಯ ಉಪ-ವಿಭಾಗ ಕಲಬುರಗಿ ಎಸ್.ಬಿ. ಟೆಂಪಲ್ ರೋಡ, ಕಲಬುರಗಿ, 7) ಅಂತರಜಾಲ ತಾಣದ ವಿಳಾಸ : https://kppp.karnataka.gov.in

**ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು**
**ಪ್ರಾದೇಶಿಕ ಅರಣ್ಯ ಉಪ ವಿಭಾಗ, ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/754/ಕೆ.ಎಸ್.ಎಂ.ಸಿ.&ಎ/2025-26

## ಯುವ ಶಕ್ತಿ ರಾಷ್ಟ್ರದ ಸೇವೆಗಾಗಿ ಸಮರ್ಪಿಸುತ್ತಿದೆ :ರಾಜ್ಯಪಾಲ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಎನ್.ಸಿ.ಸಿ ನಮಗೆ ಸ್ವಾವಲಂಬನೆ, ಶಿಸ್ತು ಮತ್ತು ರಾಷ್ಟ್ರಕ್ಕೆ ಸಮರ್ಪಣೆಯ ಪಾಠವನ್ನು ಕಲಿಸುವ ಮತ್ತು ಯುವಕರು ಭಾರತೀಯ ಸಶಸ್ತ್ರ ಪಡೆಗಳಿಗೆ ಸೇರಲು ಅನುಕೂಲಕರ ವಾತಾವರಣವನ್ನು ಒದಗಿಸುವ ಸಂಸ್ಥೆಯಾಗಿದೆ. ದೃಢಸಂಕಲ್ಪಬಲವಾಗಿದ್ದು, ಪ್ರಯತ್ನ ನಿರಂತರವಾಗಿದ್ದರೆ, ಯಾವುದೇ ಗುರಿ ದೂರವಿಲ್ಲ. ಎನ್.ಸಿ.ಸಿ "ಏಕತೆ ಮತ್ತು ಶಿಸ್ತು" ಧ್ಯೇಯವಾಕ್ಯದೊಂದಿಗೆ ಯುವಶಕ್ತಿಯನ್ನು ರಾಷ್ಟ್ರದ ಸೇವೆಗಾಗಿ ಸಮರ್ಪಿಸುತ್ತಿದೆ ಎಂದು ರಾಜ್ಯಪಾಲ ಥಾವಚಂದ್ ಗೆಹ್ಲೋಟ್ ಅವರು ತಿಳಿಸಿದರು. ಇಂದು ರಾಜಭವನದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಅಂತರ್ ನಿರ್ದೇಶನಾಲದ ಕ್ರೀಡಾ ಶೂಟಿಂನಲ್ಲಿ ಚಾಂಪಿಯಶಿಫ್ ಪಡೆದ ಕರ್ನಾಟಕಾ ಮತ್ತು ಗೋವಾ ತಂಡದ ಎನ್.ಸಿ.ಸಿ ಕೆಡೆಗಳ ಸನ್ಮಾನ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಎನ್.ಸಿ.ಸಿ ಕರ್ನಾಟಕ ಮತ್ತು ಗೋವಾದ ಎನ್.ಸಿ.ಸಿ ನಿರ್ದೇಶನಾಲಯದ ಎನ್.ಸಿ.ಸಿ ಕೆಡೆಟ್ ಶೂಟಿಂಗ್ ತಂಡವು ಅಂತರ-ನಿರ್ದೇಶನಾಲಯ ಕ್ರೀಡಾ ಶೂಟಿಂಗ್ ಚಾಂಪಿಯಶಿನಲ್ಲಿ ಅದ್ಭುತ ಪ್ರದರ್ಶನ ನೀಡಿ ಸತತ ಮೂರನೇ ಬಾರಿಗೆ ಶೂಟಿಂಗ್ ಚಾಂಪಿಯನ್ ಆಗಿ, ಸಂಸ್ಥೆಗೆ ಹಾಗೂ ರಾಜ್ಯ ಮತ್ತು ದೇಶಕ್ಕೆ ಕೀರ್ತಿ ತಂದಿರುವುದು ನಮಗೆ ಹೆಮ್ಮೆಯ ವಿಷಯವಾಗಿದೆ. ಈ ಸ್ಪರ್ಧೆಯಲ್ಲಿ ಎನ್.ಸಿ.ಸಿ ಕೆಡೆಗಳು ಪ್ರದರ್ಶಿಸಿದ ಕ್ರೀಡಾ ಮನೋಭಾವ, ಸೌಹಾರ್ದತೆ ಮತ್ತು ಸಂಪೂರ್ಣ ಪ್ರತಿಭೆ ನಮ್ಮ ದೇಶದ ಸಮುದಾಯಕ್ಕೆ ಸ್ಫೂರ್ತಿಯಾಗಿದೆ ಎಂದು ತಿಳಿಸಿದರು. ಎನ್.ಸಿ.ಸಿಯು ಯಾವುದೇ ಸವಾಲಿನ ಸಂದರ್ಭದಲ್ಲಿ ನಮ್ಮನ್ನು ದೃಢವಾಗಿ ನಿಲ್ಲಿಸುವ ಶಕ್ತಿ ಏಕತೆ, ಮತ್ತು ಶಿಸ್ತು ನಮ್ಮನ್ನು ಯಶಸ್ಸಿನ ಹಾದಿಯಲ್ಲಿ ನಡೆಯುವ ಪಾತ್ರವನ್ನು ವಹಿಸಿದೆ. ಈ ಯಶಸ್ಸು ಎಲ್ಲಾ ಯುವ ಕೆಡೆಗಳ ಶಿಸ್ತು, ಏಕಾಗ್ರತೆ, ನೈತಿಕತೆ, ಧೈರ್ಯ, ಕಠಿಣ ಪರಿಶ್ರಮ, ಸಮರ್ಪಣೆ ಮತ್ತು ದೇಶಭಕ್ತಿಯ ಜೀವಂತ ಉದಾಹರಣೆಯಾಗಿದೆ. ಈ ಗುಣಗಳನ್ನು ಪರಿಚಯಿಸುವ ಮೂಲಕ ಎನ್.ಸಿ.ಸಿ ಹೆಸರನ್ನು ಬೆಳಗಿಸಿದ್ದೀರಿ. ಇದಕ್ಕಾಗಿ ನಿಮ್ಮೆಲ್ಲರನ್ನು ನಾನು ಅಭಿನಂದಿಸುತ್ತೇನೆ ಮತ್ತು ಹಾರೈಸುತ್ತೇನೆ ಎಂದು ನುಡಿದರು.

## ಪುರಸಭೆ ಮುಖ್ಯಾಧಿಕಾರಿಯಾಗಿ ಗುಡ್ಡೆ ಅಧಿಕಾರ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ



**ಚಿಟಗುಪ್ಪ:** ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಅವರು ಕಳೆದ ಕೆಲವು ವರ್ಷಗಳಿಂದ ಪಟ್ಟಣದಲ್ಲಿ ಸಾರ್ವಜನಿಕರ ಹಾಗೂ ಸಿಬ್ಬಂದಿ ವರ್ಗದವರ ಮನ ಗೆದ್ದು ಒಳ್ಳೆಯ ಕಾರ್ಯನಿರ್ವಹಿಸಿ ಬುಧವಾರ ವರ್ಗಾವಣೆಗೊಂಡಿದ್ದಾರೆ. ಬಳ್ಳಾರಿ ಜಿಲ್ಲೆಯ ಸಂಡುರ್ ತಾಲೂಕಿನ ಕುರೆಕುಪ್ಪ ಪುರಸಭೆಯಿಂದ ವರ್ಗಾವಣೆಗೊಂಡು ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿಯಾಗಿ ಸತೀಶ ಗುಡ್ಡೆ ಬುಧವಾರ ಅಧಿಕಾರ ಸ್ವೀಕರಿಸಿದರು. ನಂತರ ಪತ್ರಕರ್ತರೊಂದಿಗೆ ಮಾತನಾಡಿ, ಈ ಹಿಂದೆ ನಾನು ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದೆ, ಮತ್ತೆ ನನಗೆ ಚಿಟಗುಪ್ಪ ಪಟ್ಟಣದ ನಾಗರಿಕರ ಸೇವೆ ಮಾಡಲು ಅವಕಾಶ ಸಿಕ್ಕಿದೆ, ಪಟ್ಟಣದ ಸರ್ವ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತೇನೆ. ಸ್ವಚ್ಛತೆಗೆ ಮೊದಲ ಆದ್ಯತೆ ನೀಡಿ, ಸುಂದರ ಚಿಟಗುಪ್ಪ ನಿರ್ಮಾಣ ಮಾಡುವುದೇ ನನ್ನ ಗುರಿ ಎಂದರು.

## ತೋಟಗಾರಿಕೆ ವಿವಿ ಸಂಸ್ಥಾಪನಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 17ನೇ ಸಂಸ್ಥಾಪನಾ ದಿನಾಚರಣೆ ನವೆಂಬರ 22 ರಂದು ಬೆಳಿಗ್ಗೆ 10.30 ಗಂಟೆಗೆ ತೋಟಗಾರಿಕೆ ವಿಶ್ವವಿದ್ಯಾಲಯ ಪ್ರೇಕ್ಷಾಗೃಹದಲ್ಲಿ ಹಮ್ಮಿಕೊಳ್ಳಲಾಗಿದೆ.

ಯು.ಎಸ್.ಎ ಟೆಕ್ಸಾಸ್ ತರಕಾರಿ ಮತ್ತು ಹಣ್ಣು ಅಭಿವೃದ್ಧಿ ಕೇಂದ್ರದ ನಿರ್ದೇಶಕ ಡಾ.ಭೀಮನಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಾಗೂ ತೋಟಗಾರಿಕೆ ಇಲಾಖೆಯ ನಿವೃತ್ತ ಹೆಚ್ಚುವರಿ ನಿರ್ದೇಶಕ ಡಾ.ಎಸ್.ವಿ.ಹಿತ್ತಲಮನಿ ಆಗಮಿಸುವರು. ಅತಿಥಿಗಳಾಗಿ ತೋಟಗಾರಿಕೆ ವಿವಿಯ ವ್ಯವಸ್ಥಾಪನಾ ಮಂಡಳಿಯ ಸದಸ್ಯರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಅತ್ಯುತ್ತಮ ಸಾಧನೆಗೈದ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳಿಗೆ, ವಿದ್ಯಾರ್ಥಿಗಳಿಗೆ ಮತ್ತು ನಿವೃತ್ತ ನೌಕರರಿಗೆ ಸನ್ಮಾನಿಸಲಾಗುತ್ತಿದೆ. ಅಲ್ಲದೇ ವಿಶ್ವವಿದ್ಯಾಲಯದಿಂದ ಬಿಡುಗಡೆಗೊಂಡ ತಳಿಗಳ ಮತ್ತು ತಾಂತ್ರಿಕತೆಗಳ ಪ್ರದರ್ಶನವನ್ನು ಸಹ ವ್ಯವಸ್ಥೆ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳು, ಅಧಿಕಾರಿಗಳು, ಮಹಾವಿದ್ಯಾಲಯದ ಡೀನ್‌ರವರು, ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಕಾರ್ಮಿಕ ಬಂಧುಗಳು ಭಾಗವಹಿಸಲಿದ್ದಾರೆ.

## ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ್ ಕೋಸಂಬೆ ಅವರು ಇದೇ ನವೆಂಬರ್ 21 ರಂದು ಬೆಳಿಗ್ಗೆ 7 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಲಬುರಗಿ ಜಿಲ್ಲೆಯ ವಸತಿ ನಿಲಯ, ಶಾಲೆ, ಅಂಗನವಾಡಿ, ಜಿಲ್ಲಾಸ್ಪತ್ರೆ, ಪೊಲೀಸ್ ಠಾಣೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡುವರು. ನಂತರ ಮಧ್ಯಾಹ್ನ 3 ಗಂಟೆಗೆ ಕಲಬುರಗಿಯಿಂದ ಬೀದರಿಗೆ ಪ್ರಯಾಣಿಸುವರು.

## ಮಹಾಪರಿನಿರ್ವಾಣ ದಿನದ ಅಂಗವಾಗಿ ಕಲಬುರಗಿ-ಮುಂಬೈ ಮಧ್ಯೆ ವಿಶೇಷ ರೈಲು ಸಂಚಾರ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** 2025ರ ಡಿಸೆಂಬರ್ 6ರಂದು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನದ ಅಂಗವಾಗಿ ಗೌರವ ಸಲ್ಲಿಸಲು ಮುಂಬೈ ಹೋಗುವ ಪ್ರಯಾಣಿಕರ ಅನುಕೂಲಕ್ಕಾಗಿ 2025ರ ಡಿಸೆಂಬರ್ 5 ಹಾಗೂ 7 ರಂದು ಕೇಂದ್ರ ರೈಲ್ವೆ ಇಲಾಖೆಯು ಕಲಬುರಗಿ ಹಾಗೂ ಮುಂಬೈ ನಡುವೆ ವಿಶೇಷ ರೈಲು ಓಡಿಸಲಿದೆ ಎಂದು ಸೋಲಾಪುರ ಕೇಂದ್ರ ರೈಲ್ವೆಯ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಲಬುರಗಿ–ಸಿ.ಎಸ್.ಎಮ್.ಟಿ.(CSMT)ಮುಂಬೈ ಕಾಯ್ದಿರಿಸದ ವಿಶೇಷ ರೈಲು (ರೈಲು ಸಂಖ್ಯೆ 01245) ಡಿಸೆಂಬರ್ 5ರಂದು (ಶುಕ್ರವಾರ) ಸಂಜೆ 6.30ಕ್ಕೆ ಕಲಬುರಗಿಯಿಂದ ಹೊರಟು ಮರುದಿನ ಬೆಳಿಗ್ಗೆ 08.20ಕ್ಕೆ ಸಿ.ಎಸ್.ಎಮ್.ಟಿ. (CSMT) ಮುಂಬೈಗೆ ಆಗಮಿಸಲಿದೆ. ಅದೇ ರೀತಿ (ರೈಲು ಸಂಖ್ಯೆ 01246 ವಿಶೇಷ ರೈಲುಗಳು) ಡಿಸೆಂಬರ್ 7 ರಂದು (ಭಾನುವಾರ) ಬೆಳಿಗ್ಗೆ 00:25ಕ್ಕೆ ಸಿ.ಎಸ್.ಎಮ್.ಟಿ (CSMT) ಮುಂಬೈನಿಂದ ಹೊರಟು ಅದೇ ದಿನ ಬೆಳಿಗ್ಗೆ 11.30ಕ್ಕೆ ಕಲಬುರಗಿಗೆ ಆಗಮಿಸಲಿದೆ. ಈ ವಿಶೇಷ ರೈಲು ಗಾಣಗಾಪುರ ರಸ್ತೆ, ಅಕ್ಕಲಕೋಟೆ ರಸ್ತೆ, ಸೋಲಾಪುರ, ಕುರ್ದುವಾಡಿ, ದೌಂಡ್, ಪುಣೆ, ಲೋನಾವಾಲ, ಕಲ್ಯಾಣ ಮತ್ತು ದಾದರ್ ಮಾರ್ಗವಾಗಿ ಸಂಚರಿಸಲಿದೆ.

ಸಾರ್ವಜನಿಕರು ಪ್ರಯಾಣಿಕರು ಟಿಕೇಟ್ ಪಡೆದು ಪ್ರಯಾಣಿಸಬೇಕು. ಈ ವಿಶೇಷ ರೈಲಿನ ವಿವರವಾದ ಸಮಯ ಮತ್ತು ನಿಲುಗಡೆಗಳಿಗಾಗಿ www.enquiry.indianrail.gov.in ಗೆ ಭೇಟಿ ನೀಡಿ ಅಥವಾ ಎನ್.ಟಿ.ಇ.ಎಸ್. (NTES) ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ ಸಂಪರ್ಕಿಸಬೇಕೆಂದು ಸೋಲಾಪುರ ವಿಭಾಗದ ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ (ಸೀನಿಯರ್ ಡಿಸಿಎಂ) ರಾದ ಯೋಗೇಶ್ ಪಾಟೀಲ್ ಅವರು ಪ್ರಯಾಣಿಕರಿಗೆ ಮನವಿ ಮಾಡಿದ್ದಾರೆ.

## ಬೀದಿ ನಾಯಿಗಳು ವಾಸವಿದ್ದಲ್ಲಿ ಮಾಹಿತಿ ನೀಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ರಿಟ್ ಅರ್ಜಿ ಸಂಖ್ಯೆ 5/2025ರಲ್ಲಿ ನೀಡಿರುವ ನಿರ್ದೇಶನದಂತೆ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್‌ನಿಲ್ದಾಣ, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಕಾಳಗಿ ಪಟ್ಟಣ ಪಂಚಾಯತ್‌ನ ಮುಖ್ಯಾಧಿಕಾರಿಗಳಿಗೆ ತಿಳಿಸಬೇಕೆಂದು ಕಾಳಗಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂದಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು.

ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುತ್ತದೆ. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಷೇರು ಮೊತ್ತವನ್ನು ಪಾವತಿಸಿದ ರಶೀದಿ ಸಲ್ಲಿಸಿ ಚೆಕ್ ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನಿಯೋಜಿತ ಆಳಂದ ತಾಲೂಕಿನ ನಿಂಬರ್ಗಾದ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಕ್ಕೆ ಷೇರು ಹಣ ಪಾವತಿಸಿದ ಅರ್ಹ ಸದಸ್ಯರಿಗೆ ಮರುಪಾವತಿಸಲು ಆದೇಶಿಸಿರುವ ಪ್ರಯುಕ್ತ ಇದೇ ನವೆಂಬರ್ 24 ರಂದು ಬೆಳಿಗ್ಗೆ 11.30 ರಿಂದ ಸಂಜೆ 4 ಗಂಟೆಯವರೆಗೆ ಅರ್ಹ ಸದಸ್ಯರು ಕಲಬುರಗಿ ಮತ್ತು ಯಾದಗಿರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ ನಿ. ಆಳಂದ ಶಾಖೆ–ಯ ಬ್ಯಾಂಕಿನಲ್ಲಿ ಷೇರು ಮೊತ್ತ ಪಾವತಿಸಿದ ರಶೀದಿ ಹಾಗೂ ತಮ್ಮ ಆಧಾರ್‌ಕಾರ್ಡ್ ಝೆರಾಕ್ಸ ಪ್ರತಿಯೊಂದಿಗೆ ಹಾಜರಾಗಿ ಚೆಕ್ ಪಡೆಯಬೇಕೆಂದು ಅಫಜಲಪುರ ಸಹಕಾರ ಅಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

## ಜವಾಹರ ನವೋದಯ ವಿದ್ಯಾಲಯದ 6ನೇ ತರಗತಿ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಪ್ರತಿ ವರ್ಷದಂತೆ ಈ ವರ್ಷವೂ 2026–27 ನೇ ಸಾಲಿಗಾಗಿ ಜವಾಹರ ನವೋದಯ ವಿದ್ಯಾಲಯದ 6ನೇ ತರಗತಿ ಪ್ರವೇಶಕ್ಕಾಗಿ 2025ರ ಡಿಸೆಂಬರ್ 13 ರಂದು ಪ್ರವೇಶ ಪರೀಕ್ಷೆ ನಡೆಯಲ್ಲಿದೆ ಎಂದು ತಾಡತೆಗನೂರ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ.

ಈ ತಾಡತೆಗನೂರು ನವೋದಯ ವಿದ್ಯಾಲಯಕ್ಕೆ ಒಳಪಡುವ ಆಳಂದ, ಅಫಜಲಪುರ, ಜೇವರ್ಗಿ, ಕಲಬುರ್ಗಿ ಉತ್ತರ ಮತ್ತು ಕಲಬುರಗಿ ದಕ್ಷಿಣ ತಾಲೂಕು ವ್ಯಾಪ್ತಿಯಲ್ಲಿ ಅರ್ಜಿ ಸಲ್ಲಿಸಿದ ಎಲ್ಲಾ ವಿದ್ಯಾರ್ಥಿಗಳು https://cbseitms.rcil.gov.in/nvs/Admin-Card/AdminCard ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ ತಮ್ಮ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಅವರು ಬೆಂಗಳೂರಿನಿಂದ ರೈಲಿನ ಮೂಲಕ ನವೆಂಬರ್ 21 ರಂದು ಶುಕ್ರವಾರ ಬೆಳಿಗ್ಗೆ 5.50 ಗಂಟೆಗೆ ಕಲಬುರಗಿಗೆ ಆಗಮಿಸುವರು.

ಅಂದು ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ಜಿಮ್ಸ್ ಆಸ್ಪತ್ರೆ ವತಿಯಿಂದ ಕಲಬುರಗಿ ಜಿಮ್ಸ್ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾದ 35ನೇ ವಾರ್ಷಿಕ ರಾಜ್ಯ ಕಚ್ಕಾನ್ ಸಮ್ಮೇಳನ–2025 (35th Annual state conference KACHCON-2025) ರ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

ನವೆಂಬರ್ 22 ರಂದು ಶನಿವಾರ ಮಧ್ಯಾಹ್ನ 12 ಗಂಟೆಗೆ ಕಲಬುರಗಿ ಎಂ.ಆರ್.ಎಂ.ಸಿ. ಅಡಿಟೋರಿಯಂದಲ್ಲಿ ಐ.ಎ.ಡಿ.ವಿ.ಎಲ್.

ಕರ್ನಾಟಕ ಶಾಖೆಯ ಕ್ಯುಟಿಕಾನ್ ಕರ್ನಾಟಕ–2025ರ 16ನೇ ವಾರ್ಷಿಕ ಸಮ್ಮೇಳನ (16th Annual Conference of IADVL Karnataka BranchCUTICONKARNATAKA-2025) ದಲ್ಲಿ ಭಾಗವಹಿಸುವರು. ನಂತರ ರಾತ್ರಿ 8.40 ಗಂಟೆಗೆ ಕಲಬುರಗಿಯಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ಬೀದಿ ನಾಯಿಗಳು ವಾಸವಿದ್ದಲ್ಲಿ ಮಾಹಿತಿ ನೀಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು,

ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ

ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಕಮಲಾಪುರ ಪಟ್ಟಣ ಪಂಚಾಯತಿಗೆ ತಿಳಿಸಬೇಕೆಂದು ಕಮಲಾಪುರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂದಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು.

ಸರ್ವೋಚ್ಛ ನ್ಯಾಯಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುತ್ತದೆ. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮವಹಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಬಳ್ಳಾರಿ: ಕಟ್ಟಡ ಬಾಡಿಗೆಗೆ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳ ಪುರುಷ ಹಾಗೂ ಮಹಿಳಾ 02 ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಹಾಗೂ ನಿರ್ವಹಣೆಗಾಗಿ ಲೋಕೋಪಯೋಗಿ ಇಲಾಖೆ ನಿಗದಿಪಡಿಸಿದ ಬಾಡಿಗೆಗೆ ಅನುಸಾರವಾಗಿ ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಕಟ್ಟಡ ನೀಡಲು ಇಚ್ಛಿಸುವ ಕಟ್ಟಡದ ಮಾಲೀಕರು ನಗರದ ಕಂಟೋನ್‌ಮೆಂಟ್ ಪ್ರದೇಶದ ಓ.ಪಿ ಸರ್ಕಲ್, ಎಲ್.ಎಲ್.ಸಿ ಕಾಲೋನಿ ಹತ್ತಿರದ ಡಿಸ್ನಿ ಪಂಕ್ಷನ್ ಹಾಲ್ ಎದುರುಗಡೆಯ 1ನೇ ಮಹಡಿಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392–294492 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಕ್ತರ ಕಾಮಧೇನು ಕಲ್ಪ ವೃಕ್ಷ ಬ್ರಹ್ಮಪುರ ವಾಸ ಶ್ರೀ ರೊಖಡೇಶ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಜಿಲ್ಲೆ ಅತ್ಯಂತ ಪವಿತ್ರ ಕ್ಷೇತ್ರಗಳನ್ನು ಹೊಂದಿರುವ ನಗರ. ಅಕ್ಷೋಭ್ಯರ ಜಯತೀರ್ಥರ ಮತ್ತು ರಘುನಾಥರ ಮೂಲವೃಂದಾವನ ಒಂದು ಕಡೆಯಾದರೆ ಮತ್ತೊಂದು ಕಡೆ ಮಾಧವತೀರ್ಥರ ಮೂಲ ಬೃಂದಾವನ. ಇಂತಹ ಜಿಲ್ಲೆಯಲ್ಲಿ ಬ್ರಹ್ಮಪುರದಲ್ಲಿ ಪೂರ್ವ ಕಡೆ ಮುಖ ಮಾಡಿ ನಿಂತ ಮುಖ್ಯಪ್ರಾಣನನೇ ಶ್ರೀ ರೋಖಡೇಶ.

ಈ ದೇವಸ್ಥಾನವು ಬಹಳ ಪ್ರಾಚಿನ, ಮತ್ತು ಜಾಗ್ರತ ವಾದ ದೇವಸ್ಥಾನಗಳಲ್ಲಿ ಒಂದಾಗಿದೆ. ಈ ದೇವಸ್ಥಾನವು ಸುಮಾರು ಎರಡು ನೂರು ಮೂರನೂರು ವರುಷಗಳ ಪುರಾತನವಾದ ದೇವಸ್ಥಾನವಾದರೂ ಯಾರಿಂದ ಪ್ರತಿಷ್ಠಾಪಿಸಲಾಗಿದೆ ಎಂದು ನಿಖರವಾದ ಮಾಹಿತಿ ದೊರೆತಿಲ್ಲ. ಈ ದೇವಸ್ಥಾನವೂ ಚಿಕ್ಕದಾಗಿದ್ದು ಮತ್ತು ಸ್ಥಳದ ಅಭಾವ ವಿದ್ದರೂ ಇಲ್ಲಿ ಸಾವಿರಾರು ಭಕ್ತರು ತಮ್ಮ ಬೇಡಿಕೆಗಳನ್ನು ಕೋರಿ ಸಿದ್ಧಿಸಿಕೊಂಡಿದ್ದು ಉಂಟು. ಭಕ್ತರು ಬೇಡಿದ ಇಷ್ಟಾರ್ಥಗಳನ್ನು ತ್ವರಿತದಲ್ಲಿ ಪೂರೈಸುವಂತ ಈ ಶ್ರೀ ರಾಮ ಭಂಟನಿಗೆ ರೊಖಡೇಶ ಎನ್ನುವುದು ಅನ್ವರ್ಥಕ ವಾಗಿದೆ.

ಮರಾಠಿ ಭಾಷೆಯಲ್ಲಿ ವ್ಯಾಪಾರ ವಹಿವಾಟುಗಲ್ಲಿ ಉಪಯೋಗಿಸುವ ರೋಖಡಾ ಎಂಬ ಶಬ್ದ ನಗದು ಎಂಬ ಅರ್ಥ ಕೊಡುತ್ತದೆ (ಉದ್ರಿ ಇಲ್ಲ.) ಅಂದರೆ ಭಕ್ತರು ಬೇಡಿದ ಇಷ್ಟಾರ್ಥಗಳನ್ನು ತ್ವರಿತದಲ್ಲಿ ಪೂರೈಸುವ ನಮ್ಮ ಸ್ವಾಮಿಯೇ ಶ್ರೀ ರೊಖಡೇಶ ಮೂರು ಅಡಿ ಎತ್ತರದ ಸಾಲಿಗ್ರಾಮ ಶಿಲೆಯಲ್ಲಿ ಮೂರ್ತಿವಂತನಾದ ರೋಖಡೇಶನನ್ನು ನೋಡುವುದೇ ಕಣ್ಣಿಗೆ ಒಂದು ದೊಡ್ಡ ಹಬ್ಬ. ಇಂತಹ ರೋಖಡೇಶನ ಸನ್ನಿಧಿಯಲ್ಲಿ ಪ್ರತಿವರ್ಷದಂತೆ ಕಾರ್ತಿಕೋತ್ಸವ ಸಮಾರೋಪ ಸಮಾರಂಭವನ್ನು ಈ ವರುಷದ ಛಟ್ಟಿ ಅಮಾವಾಸ್ಯೆಯಂದು ಅತೀ ವಿಜೃಂಭಣೆ ಯಿಂದ ಆಚರಿಸಲಾಗಿ ಅಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ವಿವಿಧ ಪಾರಾಯಣ ಮಂಡಳಿಗಳಿಂದ ವಿಷ್ಣು ಸಹಸ್ರನಾಮ, ಸುಂದರಕಾಂಡ, ವಾಯುಸ್ತುತಿ, ಮತ್ತು ವಿವಿಧ ಸ್ತೋತ್ರಗಳ ಪಾರಾಯಣ ಮತ್ತು ಪಂಡಿತ–ರಿಂದ ಪ್ರವಚನ, ತೀರ್ಥ ಪ್ರಸಾದ ಸಾಯಂಕಾಲದಲ್ಲಿ ದೀಪೋತ್ಸವ, ಮಂತ್ರ ಪುಷ್ಪ ತಾರತಮ್ಯ ಸಹಿತವಾದ ಭಜನೆ ಸಾಂಗೋಪಾಂಗವಾಗಿ ನೆರವೇರಿತು.

ಈ ಸಂದರ್ಭದಲ್ಲಿ ಪಂಡಿತರು, ದೇವಸ್ಥಾನದ ಅರ್ಚಕರಾದ ಸಮೀರ ಸಾವಳಗಿ, ಪವನ ಹರಿದಾಸ, ಜಯತೀರ್ಥ ಕುಲಕರ್ಣಿ, ಸುರೇಶ್ ಕುಲಕರ್ಣಿ, ಬಾಲಕೃಷ್ಣ ಲಾತೂರಕರ್, ಪ್ರಕಾಶ್ ಬಬಲಾದ, ಪ್ರಹ್ಲಾದ್ ಮುತ್ಕೋಡ್ ಮತ್ತು ರೋಖಡೇಶನ ಉತ್ಸವ ಸಮಿತಿಯ ಸಮಸ್ತ ಸದಸ್ಯ ಮಂಡಳಿ ಉಪಸ್ಥಿತರಿದ್ದರು.

## ಶಾಲಾ ಕಾಲೇಜು ಆಸ್ಪತ್ರೆ ಆವರಣದಲ್ಲಿನ ನಾಯಿಗಳನ್ನು ಶಾಶ್ವತ ಸ್ಥಳಾಂತರಿಸಿ ಜಿಲ್ಲಾಧಿಕಾರಿ



ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಸಾರ್ವಜನಿಕರು ಮತ್ತು ವಿಶೇಷವಾಗಿ ಮಕ್ಕಳಿಗೆ ತೊಂದರೆ ಉಂಟು ಮಾಡುತ್ತಿರುವ ಜಿಲ್ಲೆಯಾದ್ಯಂತ ನಗರ ಹಾಗೂ ಗ್ರಾಮೀಣ ಪ್ರದೇಶದ ಶಾಲಾ ಕಾಲೇಜು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಆವರಣ, ಕ್ರೀಡಾಂಗಣ, ವಸತಿ ನಿಲಯ, ಆಸ್ಪತ್ರೆ ಆವರಣದಲ್ಲಿನ ನಾಯಿಗಳನ್ನು ಖಾಯಂ ಆಗಿ ಸ್ಥಳಾಂತರಿಸಿ ಸಂತಾನಹರಣ ಚಿಕಿತ್ಸೆಯ ಲಸಿಕಾ ಕಾರ್ಯ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದರು.

ಇತ್ತೀಚೆಗೆ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಯಿಗಳ ಸ್ಥಳಾಂತರ ಮತ್ತು ಮತ್ತು ಜಾನುವಾರುಗಳನ್ನು ಗೋಶಾಲೆಗೆ ಸೇರಿಸುವ ಸಂಬಂಧ Suo Moto WP (Civil) No 5 of 2025 ದಿನಾಂಕ 07–11–2025ರ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಆದೇಶದಂತೆ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇನ್ನು ಬೀದಿ ಬದಿ ನಾಯಿಗಳನ್ನು ಎ.ಬಿ.ಸಿ.ಲಸಿಕೆ ನೀಡಿ ಅದೇ ಸ್ಥಳದಲ್ಲಿ ಬಿಡಬೇಕು ಎಂದರು.

ಇದಲ್ಲದೆ ರಾಜ್ಯ ಮತ್ತು ರಾಷ್ಟ್ರ ಹೆದ್ದಾರಿ ಸೇರಿದಂತೆ ರಸ್ತೆಗಳಲ್ಲಿ ಸುಗಮ ಸಂಚಾರಕ್ಕೆ ತೊಂದರೆಯಾಗಿರುವ ಬಿಡಾಡಿ ದನಗಳನ್ನು ಶಾಶ್ವತವಾಗಿ ಜಾನುವಾರುಗಳ ತಂಗುದಾಣ ಅಥವಾ ಗೋಶಾಲೆಗಳಿಗೆ ಸೇರಿಸಬೇಕು. ಈ ನಿಟ್ಟಿನಲ್ಲಿ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಜಿಲ್ಲೆಯ ಎಲ್ಲಾ ನಗರ, ಗ್ರಾಮೀಣ ಪ್ರದೇಶದಲ್ಲಿ ಇದನ್ನು ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ತರಬೇಕು ಎಂದರು.

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನವನ್ನು ಪಾಲಿಸಲು ನಗರ ಸ್ಥಳೀಯ ಸಂಸ್ಥೆ ಹಾಗೂ ಗ್ರಾಮೀಣ ಭಾಗದ ಎಲ್ಲಾ ಸಂಸ್ಥೆಯ ಮುಖ್ಯಸ್ಥರುಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಅದೇ ರೀತಿ ಶಿಕ್ಷಣ, ಆರೋಗ್ಯ, ಸಾರಿಗೆ, ರೈಲ್ವೆ, ಮಹಾನಗರ ಪಾಲಿಕೆ, ನಗರಾಭಿವೃದ್ಧಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಪೋಲಿಸ್ ಇಲಾಖೆ, ಲೋಕೋಪಯೋಗಿ ಇಲಾಖೆ, ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ವಿಶ್ವವಿದ್ಯಾಲಯ, ಪಶು ಸಂಗೋಪನೆ ಇಲಾಖೆಯ ಅಧಿಕಾರಿಗಳು ಸರ್ವೋಚ್ಚ ನ್ಯಾಯಾಲಯದ ಆದೇಶಗಳನ್ನು ಪಾಲಿಸಿ ವರದಿ ಸಲ್ಲಿಸುವಂತೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ, ಪಶುಪಾಲನಾ ಮತ್ತು ಪಶುವೈದ್ಯ ಇಲಾಖೆಯ ಉಪನಿರ್ದೇಶಕ ಡಾ.ಸಂಜಯ್ ರೆಡ್ಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರು ಹಾಜರಿದ್ದರು.

## ದತ್ತು ಮಾಸಾಚರಣೆ ಅಂಗವಾಗಿ ನಾಮಕರಣ ತೊಟ್ಟಿಲು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ. ನಾಲ್ಕು ಚಕ್ರ ಚಾರಿಟೇಬಲ್ ಟ್ರಸ್ಟ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಸಹಾಯವಾಣಿ–1098/112 ಮತ್ತು ಸರ್ಕಾರಿ ಹಾಗೂ ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳು. ಇವರ ಸಹಯೋಗದಲ್ಲಿ "ಮಕ್ಕಳ ದಿನಾಚರಣೆ" ಕಾರ್ಯಕ್ರಮವನ್ನು ಹಾಗೂ ಸರ್ಕಾರಿ ಅಮೂಲ್ಯ ಶಿಶುಗೃಹ ಸಂಸ್ಥೆಗೆ ಹೊಸದಾಗಿ ದಾಖಲಾಗಿರುವ ಮಕ್ಕಳನ್ನು ಸಾಂಪ್ರದಾಯಿಕವಾಗಿ "ನಾಮಕರಣ" (ತೊಟ್ಟಿಲು) ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಮಕ್ಕಳದ ದಿನಾಚರಣೆ ಸರ್ಕಾರಿ ಬಾಲಕಿಯರ ಬಾಲಮಂದಿರದಲ್ಲಿ ಇತ್ತೀಚಿಗೆ ನಡೆದ ಮಕ್ಕಳ ದಿನಾಚರಣೆ ಅಂಗವಾಗಿ ನಾಮಕರಣ ತೊಟ್ಟಿಲು ಕಾರ್ಯಕ್ರಮ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ನೇರವೇರಿಸಿದರು.

ಇದೆ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ, ಶರಣಬಸಪ್ಪ ಕ್ಯಾತನಾಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ವಿಶ್ವರಾಧ್ಯ ಕೆ.ಇಜೇರಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಂಜುಳಾ ವಿ. ಪಾಟೀಲ ,ನಾಲ್ಕು ಚಕ್ರ ಸಂಸ್ಥೆ ಅಧ್ಯಕ್ಷರಾದ ಮಾಲಾ ಕಣ್ಣಿ,ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ಮಕ್ಕಳ ಸಹಾಯವಾಣಿ, ಕಲಬುರಗಿ, ಕಚೇರಿಯ ಸಿಬ್ಬಂದಿಗಳು, ಸರ್ಕಾರಿ ಹಾಗೂ ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರು/ಮುಖ್ಯಸ್ಥರು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

## ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವ ಸಂಘದ ವತಿಯಿಂದ ಕನಕ ನಾಯಕ ಜನ್ಮ ದಿನಾಚರಣೆ ನವೆಂಬರ 23. ರಂದು

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಸಮಾಜ ಸುಧಾರಕ ಸಾಮಾಜಿಕ ಪರಿವರ್ತನಾ ಚಳುವಳಿಯ ನಾಯಕರಾದ ಕನಕ ನಾಯಕ ಜನ್ಮ ದಿನಾಚರಣೆಯನ್ನು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಘದ ವತಿಯಿಂದ ನವೆಂಬರ 23. ರಂದು ಆಳಂದ್ ತಾಲೂಕಿನ ಮುನ್ನೊಳ್ಳಿ ಗ್ರಾಮದಲ್ಲಿ ಹಳೆ ಕನಕ ಭವನ್ ಹತ್ತಿರ ಆಚರಿಸಲು ನಿರ್ಧರಿಸಲಾಗಿದೆ ಎಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಘದ ಅಧ್ಯಕ್ಷ ಉಮೇಶ್ ಪೂಜಾರಿ ಅವರು ತಿಳಿಸಿದ್ದಾರೆ.

ಉಮೇಶ್ ಪೂಜಾರಿ ಮಾತನಾಡಿ ಕನಕ ನಾಯಕರು ಸಮಾಜದ ಕನಸು ಕಂಡವರು ಸಮಾಜದಲ್ಲಿನ ಅಂಕುಡೊಂಕುಗಳನ್ನು ಓರೆ ಕೋರೆಗಳನ್ನು ತಿದ್ದಲು ಒಂದು ಹೋರಾಟವನ್ನು ರೂಪಿಸಿದವರು ಸಮಾಜದ ಶೋಷಿತ ಜನಾಂಗಗಳಿಗೆ ಸಮಾಜದ ಮುಖ್ಯ ವಾಹಿನಿಗೆ ತರಲು ಆ ವಿರಥವಾಗಿ ಶ್ರಮಿಸಿದ ಮಹಾನ್ ನಾಯಕ ಕನಕ ನಾಯಕರು ಈ ಹಿನ್ನೆಲೆಯಲ್ಲಿ ಅವರ ಜನ್ಮದಿನದ ಆಚರಣೆಯ ಪ್ರಯುಕ್ತವಾಗಿ ಸಂವಿಧಾನದ ವಿಧಿ 340 ಕುರಿತು ಒಂದು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಕನಕ ನಾಯಕರ ಹೋರಾಟದ ಆಶಯಗಳು ಮತ್ತು ಪ್ರಸ್ತುತ ಭಾರತ ಸಂವಿಧಾನದ ಆಶಯಗಳು ಒಂದೇ ಆಗಿವೆ ಆದ್ದರಿಂದಲೇ ಬಾಬಾ ಸಾಹೇಬರು ಭಾರತದ ಒಟ್ಟು ಶೋಷಿತರಿಗೆ ಮೂರು ವಿಧಿಗಳಡಿಯಲ್ಲಿ ಅವರ ಸಾಮಾಜಿಕ ಶೈಕ್ಷಣಿಕ ರಾಜಕೀಯ ಹಾಗೂ ಆರ್ಥಿಕ ಪ್ರಗತಿಗೆ ಅವಕಾಶವನ್ನು ಕಲ್ಪಿಸಿ ಕೊಟ್ಟಿದ್ದಾರೆ ಅಂದರೆ 340ನೇ ವಿಧಿ ಈ ದೇಶದ ಹಿಂದುಳಿದ ಜಾತಿಗಳ ಸಾಮಾಜಿಕ ಶೈಕ್ಷಣಿಕ ಉನ್ನತಿಗಾಗಿ ಸರ್ಕಾರಗಳು ಸೂಕ್ತವಾದ ಕ್ರಮ ಕೈಗೊಳ್ಳಲು ಸೂಚಿಸಿದರೆ.

341ನೇ ವಿಧಿ ಪರಿಶಿಷ್ಟ ಜಾತಿಗಳ ಸಾಮಾಜಿಕ ಶೈಕ್ಷಣಿಕ ಉನ್ನತಿಗೆ ಕ್ರಮ ಕೈಗೊಳ್ಳಲು ಆಳ್ವಿಕೆ ಮಾಡುವ ಸರ್ಕಾರಗಳಿಗೆ ಅವಕಾಶವನ್ನು ಕಲ್ಪಿಸಿಕೊಟ್ಟಿವೆ ಜೊತೆಗೆ 342ನೇ ವಿಧಿಯು ಪರಿಶಿಷ್ಟ ಪಂಗಡಗಳ ಸಾಮಾಜಿಕ ಶೈಕ್ಷಣಿಕ ಪ್ರಗತಿಗೆ ಆಳ್ವಿಕೆ ಮಾಡುವ ಸರ್ಕಾರಗಳು ಸೂಕ್ತವಾದ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿವೆ 341 ಹಾಗೂ 342ನೇ ವಿಧಿಗಳು ಬಹುತೇಕವಾಗಿ ಜಾರಿಗೊಳಿಸಲಾಗಿದೆ ಆದರೆ 340ನೇ ವಿಧಿಯನ್ನು ಜಾರಿಗೊಳಿಸಲು ಅಂದರೆ ಯಥಾವತ್ತಾಗಿ ಜಾರಿಗೊಳಿಸಲು ಆಳ್ವಿಕೆ ಮಾಡುವ ಸರ್ಕಾರಗಳು ಇವತ್ತಿಗೂ ಮುಂದೆ ಬರುತ್ತಿರುವ ಬರುತ್ತಿಲ್ಲ ಇದು ಈ ದೇಶದ ದೊಡ್ಡ ದುರಂತವೇ ಸರಿ ಬಾಬಾ ಸಾಹೇಬರು ತಮ್ಮ ಕಾನೂನು ಪದವಿಗೆ ರಾಜೀನಾಮೆ ನೀಡುವುದಕ್ಕೆ ವಿಧಿ ಅನುಷ್ಠಾನ ಗೊಳಿಸದಿದ್ದು ಒಂದು ಪ್ರಮುಖ ಕಾರಣವಾಗಿತ್ತು ಅವರ ನಂತರ ಕಾಕಾ ಕಲೆಲ್ಕರ್ ರವರ ನೇತೃತ್ವದಲ್ಲಿ ಮೊದಲ ಹಿಂದುಳಿದ ವರ್ಗಗಳ ಆಯೋಗವನ್ನು ಸ್ಥಾಪಿಸಲಾಯಿತು ಆದರೆ ಅದರ ಶಿಪಾರಸ್ಸುಗಳನ್ನು ಅನುಷ್ಠಾನಕ್ಕೆ ತರಲಾಗಲಿಲ್ಲ ಮುಂದೆ ಜನತಾ ಸರ್ಕಾರ 1979 ರಲ್ಲಿ ಬಿಪಿ ಮಂಡಲ್ ರವರ ನೇತೃತ್ವದಲ್ಲಿ ಎರಡನೇ ಹಿಂದುಳಿದ ವರ್ಗಗಳ ಆಯೋಗವನ್ನು ಸ್ಥಾಪಿಸಲಾಯಿತು



ಅದು 1980 ರಲ್ಲಿ ವರದಿ ನೀಡಿದ್ದರೂ ಸಹ ಸರ್ಕಾರಗಳು ಅದನ್ನು 1990 ರವರೆಗೆ ಜಾರಿಗೊಳಿಸಲು ಮುಂದಾಗಲಿಲ್ಲ 1990 ರ ದಶಕದಲ್ಲಿ ಮಾನ್ಯವರ್ ಕಾನ್ಸಿರಾಮ್ ರವರ ಹೋರಾಟದ ಪ್ರತಿಫಲವಾಗಿ ವಿಪಿ ಸಿಂಗ್ ಸರ್ಕಾರ ಮಂಡಲ್ ವರದಿಯನ್ನು ಜಾರಿಗೊಳಿಸಿತು ಆದರೆ ಅದು ವೈಜ್ಞಾನಿಕವಾಗಿ ಸಂವಿಧಾನದ ಆಶಯದಂತೆ ಯಥಾವತ್ತಾಗಿ ಜಾರಿಗೊಳಿಸಲು.

ಈ ದೇಶದ ಮನುವಾದಿಗಳು ಬಿಡಲಿಲ್ಲ ಆದ್ದರಿಂದ ಈ ದೇಶದ ಮೂರು ಸಾವಿರಕ್ಕೂ ಹೆಚ್ಚು ಅತಿ ಹಿಂದುಳಿದ ಜಾತಿಗಳ ಸಾಮಾಜಿಕ ಶೈಕ್ಷಣಿಕ ರಾಜಕೀಯ ಸ್ಥಿತಿಗತಿಗಳು ಗಮನಹರವಾದ ರೀತಿಯಲ್ಲಿ ಸುಧಾರಣೆ ಆಗಲೇ ಇಲ್ಲ ಹಾಗೂ ಸಂವಿಧಾನದ 340ನೇ ವಿಧಿ ಬಗ್ಗೆ ಯಾವ ಹಿಂದುಳಿದ ಜಾತಿಗಳ ನಾಯಕರುಗಳಿಗೆ ಸರಿಯಾದ ತಿಳುವಳಿಕೆಯು ಸಹ ಇಲ್ಲ ಆದ್ದರಿಂದಲೇ ಅವರು ಇಂದಿಗೂ ಶೋಷಿತ ಜೀವನವನ್ನು ನಡೆಸುತ್ತಿದ್ದಾರೆ ಎಲ್ಲಾ ಕಾರಣಗಳನ್ನು ಇಟ್ಟುಕೊಂಡು ಹಿಂದುಳಿದ ಜಾತಿಗಳಿಗೆ ಸಂವಿಧಾನ ದ ಆಸೆಗಳು 340ನೇ ವಿಧಿ ಇವುಗಳ ಬಗ್ಗೆ ಸರಿಯಾದ ತಿಳುವಳಿಕೆ ಅರಿವು ಮೂಡಿಸುವ ಉದ್ದೇಶದಿಂದ ಕನಕ ನಾಯಕರ ಜನ್ಮ ದಿನಾಚರಣೆದೊಂದು ಈ ಕುರಿತು ವಿಶೇಷ ಉಪನ್ಯಾಸವನ್ನು ಏರ್ಪಡಿಸಲು ನಿರ್ಧರಿಸಲಾಗಿದೆ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿಗೆ ಉದ್ಯೋಗ ಖಾತ್ರಿ
## ಕಾರ್ಮಿಕರ ಬಳಕೆ: ಪ್ರಸ್ತಾವಕ್ಕೆ ನಿರ್ಧಾರ




**ಮಲ್ಲಮ್ಮ ನುಡಿ ವಾರ್ತೆ**

**ಬೀದರ್:** ನ,ಮಹಾತ್ಮ ಗಾಂಧಿ ರಾಷ್ಟ್ರೀಯಗ್ರಾಮೀಣಉದ್ಯೋಗಖಾತ್ರಿ ಯೋಜನೆಯಡಿ ಕೃಷಿ ಕಾರ್ಯಕ್ಕೂ ಕಾರ್ಮಿಕರ ಬಳಕೆಗೆ ಅವಕಾಶ ಕಲ್ಪಿಸುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ತಾಲ್ಲೂಕಿನ ಮರಕಲ್ ಗ್ರಾಮ ಪಂಚಾಯಿತಿ ನಿರ್ಧರಿಸಿದೆ.

ಮರಕಲ್ ಗ್ರಾಮ ಪಂಚಾಯಿತಿ ಕಚೇರಿಯಲ್ಲಿಬುಧವಾರ ಏರ್ಪಡಿಸಿದ್ದ ವಿಶೇಷಗ್ರಾಮಸಭೆಯಲ್ಲಿ ಈ ಕುರಿತು ತೀರ್ಮಾನ ಕೈಗೊಳ್ಳಲಾಯಿತು.

ರೈತರಿಗೆಅನುಕೂಲವಾಗುವಂತೆಖಾತ್ರಿ ಕಾರ್ಮಿಕರಬಳಕೆಗೆಯೋಜನೆಯಡಿ ಅವಶ್ಯಕನಿಯಮಾವಳಿರೂಪಿಸಲು ಮನವಿ ಮಾಡಲಾಯಿತು.

ಸದ್ಯ ಕೃಷಿ ಕಾರ್ಯಗಳಿಗೆ ಕಾರ್ಮಿಕರಕೊರತೆಉಂಟಾಗುತ್ತಿದೆ. ಪರಿಸ್ಥಿತಿಹೀಗೆಯೇಮುಂದುವರಿದರೆ ಭವಿಷ್ಯದಲ್ಲಿ ಕೃಷಿ ಕಷ್ಟವಾಗಲಿದೆ ಎಂದುರೈತಮುಖಂಡಶಂಕರರಾವ್ ಪಾರಾ ಸಭೆಯ ಗಮನ ಸೆಳೆದರು.

ಖಾತ್ರಿ ಯೋಜನೆಯಡಿ ಬಿತ್ತುವುದು, ಕಳೆ ಕೀಳುವುದು, ರಾಶಿ ಮಾಡುವುದು ಮತ್ತಿತರ ಚಟುವಟಿಕೆಗೆ ಖಾತ್ರಿ ಕಾರ್ಮಿಕರ ಬಳಕೆಗೆ ಅವಕಾಶ ಕಲ್ಪಿಸಿದರೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಖಾತ್ರಿ ಕಾರ್ಮಿಕರ ಬಳಕೆ ಅವಕಾಶದಿಂದ ಕೃಷಿ ಕಾರ್ಯಕ್ಕೆ ಉತ್ತೇಜನ ನೀಡಿದಂತೆ ಆಗಲಿದೆ ಎಂದುತಿಳಿಸಿದರು.ಮುಖಂಡರಮೇಶ ಬುಯ್ಯಾ ಹಾಗೂ ಇತರರು ಇದಕ್ಕೆ ಬೆಂಬಲಿಸಿ, ಈ ಕುರಿತು ಕೇಂದ್ರ–ಕ್ಕೆ ಪ್ರಸ್ತಾವ ಸಲ್ಲಿಸುವ ನಿರ್ಣಯ ಕೈಗೊಂಡರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಈಶ್ವರಮ್ಮ ಬಿ. ಓಂಕಾರೆ, ಪಿಡಿಒ ಉಮೇಶ ಜಾಬಾ, ಕೃಷಿ ಅಧಿಕಾರಿ ಸಂತೋಷ್ ಪಾಟೀಲ ಮತ್ತಿತರರು ಇದ್ದರು.

ಇದೇ ವೇಳೆ ಭೂ ತಾಯಿ ರಕ್ಷಣೆ ಕಣ್ಗಾವಲು ಸಮಿತಿ ರಚನೆ ಮಾಡಲಾಯಿತು.

# ಬಾಕಿ ಇರುವ ಪ್ರಕರಣಗಳಿಗೆ ದಂಡದ ಮೊತ್ತ ಶೇ.50 ರಷ್ಟು ರಿಯಾಯಿತಿ ನೀಡಿದೆ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನವೆಂಬರ್ 21, ಸಾರಿಗೆ ಇಲಾಖೆಯ 1991–92 ರಿಂದ 2019–20ರ ಅವಧಿಯಲ್ಲಿ ಪ್ರಕರಣಗಳನ್ನು ದಾಖಲಾಗಿ ಪಾವತಿಗೆಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಕಾಲಾವಕಾಶ ನೀಡಲಾಗಿದೆ ಎಂದು ಯಾದಗಿರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಅವರು ತಿಳಿಸಿದ್ದಾರೆ.

ಸರ್ಕಾರದ ಅಧೀನ ಕಾರ್ಯದರ್ಶಿಗಳು (ಪ್ರ) ಸಾರಿಗೆ ಇಲಾಖೆ, ಬೆಂಗಳೂರು ಆದೇಶ ದಿನಾಂಕ: ಟಿಡಿ 27 ಟಿಡಿಒ2023 ಬೆಂಗಳೂರು 2025ರ ನವೆಂಬರ್ 20 ರನ್ವಯ, ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–20ರ ಅವಧಿಯಲ್ಲಿ ಪ್ರಕರಣಗಳನ್ನು ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಕಾಲಾವಕಾಶ ನೀಡಿ 2025ರ ನವೆಂಬರ್ 21 ರಿಂದ ಡಿಸೆಂಬರ್ 12ರ ವರೆಗೆ ಕಾಲಾವಕಾಶ ನೀಡಿ ಆದೇಶಿಸಲಾಗಿರುತ್ತದೆ.

ಸಾರ್ವಜನಿಕರ ಗಮನಕ್ಕೆ ಈ ಕಛೇರಿಯಲ್ಲಿ 1991–92 ರಿಂದ 2019–20ರ ಅವಧಿಯಲ್ಲಿ ದಾಖಲಾದ ಪ್ರಕರಣಗಳಿಗೆ ಸಂಬಂಧಿಸಿದಂತೆ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತವನ್ನು 2025ರ ನವೆಂಬರ್ 21 ರಿಂದ ಡಿಸೆಂಬರ್ 12ರ ವರೆಗೆ ಭರಿಸಿಕೊಂಡು ಪ್ರಕರಣಗಳನ್ನು ಮುಕ್ತಾಯಗೊಳಿಸಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳು ವಾಸವಿದ್ದಲ್ಲಿ ಮಾಹಿತಿ ನೀಡಲು ಸೂಚನೆ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನವೆಂಬರ್ 21, ) : ಕೆಂಭಾವಿ ಪುರಸಭೆ ವ್ಯಾಪ್ತಿಯಲ್ಲಿನ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳ, ಮುಖ್ಯಸ್ಥರಿಗೆ ಬೀದಿ ನಾಯಿಗಳು ವಾಸವಿದ್ದಲ್ಲಿ ಮಾಹಿತಿ ನೀಡಬೇಕು ಎಂದು ಕೆಂಭಾವಿ ಪುರಸಭೆಮುಖ್ಯಾಧಿಕಾರಿಯೂಸುಪಾ ಅವರು ತಿಳಿಸಿದ್ದಾರೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025ರ ದಿನಾಂಕ 07–11–2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಕೆಂಭಾವಿ ಪುರಸಭೆ ಮುಖ್ಯಾಧಿಕಾರಿಗಳಿಗೆ ತಿಳಿಸಬೇಕು.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ಕೆಂಭಾವಿ ಪುರಸಭೆದಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂದಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವುಗಳನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳನ್ನು ಹತ್ತಿ ಬಿಡಿಸಲು ಮತ್ತು ಕೃಷಿ ಸಂಬಂಧಿತ ಕೆಲಸಕ್ಕೆ ತೊಡಗಿಸಿಕೊಂಡ ಮಾಲೀಕರ ಮತ್ತು ವಾಹನ ಚಾಲಕರಿಗೆ ಎಚ್ಚರಿಕೆ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನ, : ಮಕ್ಕಳಿಗೆ ಕೂಲಿ ಕೆಲಸಕ್ಕೆ ಕಳುಹಿಸದೆ ಶಾಲೆಗೆ ಕಳುಹಿಸುವುದು ಪ್ರತಿಯೊಬ್ಬ ಪೋಷಕರ ಜವಾಬ್ದಾರಿಯಾಗಿದೆ ಎಂದು ಪಾಲಕ, ಪೋಷಕರು ಹಾಗೂ ಆಟೋ, ಟಂಟಂಗಳ ಚಾಲಕರಿಗೆ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ1986, ತಿದ್ದುಪಡಿ 2016"ರ ಕುರಿತು ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಹೇಳಿದರು.

ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಕಂದಕೂರು/ಎಲ್ಹೇರಿ ಗ್ರಾಮಗಳ ಮಾರ್ಗವಾಗಿ ಆಟೋ, ಟಂಟಂಗಳಲ್ಲಿ ಮಕ್ಕಳನ್ನು ಕೆಲಸಕ್ಕೆ ಕರೆದುಕೊಂಡು ಹೋಗುತ್ತಿದ್ದಾರೆಂಬ ಮಾಹಿತಿಯ ಮೇರೆಗೆ ಕಾರ್ಮಿಕ ಇಲಾಖೆಯಿಂದ ಹಠಾತ್ ದಾಳಿ/ತಪಾಸಣೆಯನ್ನು ಕೈಗೊಂಡು ಕೂಲಿ ಕೆಲಸಕ್ಕಾಗಿ ಆಟೋಗಳಲ್ಲಿ ತೆರಳಿದ್ದ ಸುಮಾರು 6ಕ್ಕೂ ಹೆಚ್ಚು ಮಕ್ಕಳನ್ನು ಶಾಲೆಗೆ ಹೋಗುವಂತೆ ತಿಳುವಳಿಕೆ ನೀಡಿ ಮರಳಿ ಸ್ವಗ್ರಾಮಕ್ಕೆ ಕಳುಹಿಸಲಾಯಿತು.



ಯಾದಗಿರಿ ಕಾರ್ಮಿಕ ನಿರೀಕ್ಷಕರಾದ ಶ್ರೀಮತಿ ಸಂಗೀತಾ ಹೊನ್ನೂರು ರವರು ಮಾತನಾಡಿ, ಕಾರ್ಮಿಕ ಇಲಾಖೆಯಿಂದ ನಿರಂತರವಾಗಿ ಜನ ಜಾಗೃತಿ, ಕಾನೂನು ಅರಿವು–ನೆರವು ಕಾರ್ಯಕ್ರಮ, ಬೀದಿನಾಟಕ, ಆಟೋ–ಪ್ರಚಾರ ಕಾರ್ಯಕ್ರಮಗಳನ್ನು ಏರ್ಪಡಿಸುವ ಮೂಲಕ ನಿರಂತರವಾಗಿ ಬಾಲ/ಕಿಶೋರ ಕಾರ್ಮಿಕ ಪದ್ಧತಿ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಇದರ ಹೊರತಾಗಿಯೂ ಆಟೋ/ಟಂಟಂಗಳ ಮೂಲಕ ಕೃಷಿ ಹಾಗೂ ಇನ್ನಿತರೆ ಕೆಲಸಗಳಿಗೆ ಮಕ್ಕಳನ್ನು ಕರೆದುಕೊಂಡು ಹೋಗುವ ವಾಹನಗಳ ಚಾಲಕರ ವಿರುದ್ಧ ಆರ್.ಟಿ.ಓ ಅಧಿಕಾರಿಗಳ ಮೂಲಕ ಪ್ರಕರಣ ದಾಖಲಿಸಲಾಗುವುದು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಮಕ್ಕಳನ್ನು ಕೆಲಸಕ್ಕೆ ಕರೆದುಕೊಂಡು ಹೋಗುತ್ತಿದ್ದ ಆಟೋ/ಟಂಟಂಗಳ ಮಾಲೀಕರ ವಿರುದ್ಧ ಪ್ರಕರಣವನ್ನು ಸಹ ದಾಖಲಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆಯ ನಿರೀಕ್ಷಕರಾದ ಅಯ್ಯಾಳಪ್ಪ, ಸಿಬ್ಬಂದಿ ಮಾಳಪ್ಪ ಪೂಜಾರಿ, ಡಾನ್ ಬಾಸ್ಕೋ

ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಪ್ರಾನ್ಸಿಸ್ ಶಾಭು, ಗೃಹ ರಕ್ಷಕ ದಳದ ಚಂದ್ರಶೇಖರ್ ಮುದ್ನಾಳ, ಕಾರ್ಮಿಕ ಇಲಾಖೆಯ ಬಾಲು ನಾಯಕ, ವೆಂಕಟೇಶ ಶಿವಾಂಗೆ , ಮಾರ್ಗದರ್ಶಿ ಸಂಸ್ಥೆಯ ಈಶಪ್ಪ ಚೂರಿ ಉಪಸ್ಥಿತರಿದ್ದರು.

# ಧರ್ಮ,ಸಂಸ್ಕೃತಿ,ಉಳುವಿಗೆ ಮಠ ಮಾನ್ಯಗಳ ಕೊಡುಗೆ ಅಪಾರ – ರಂಭಾಪುರಿ ಶ್ರೀಗಳು.

**ಮಲ್ಲಮ್ಮ ನುಡಿ ವಾರ್ತೆ**

**ಶಹಾಪುರ :** ನಮ್ಮ ಭಾರತೀಯ ಸಂಸ್ಕೃತಿ,ಧರ್ಮ,ಪರಂಪರೆಂಯನ್ನು ಉಳಿಸಿ,ಸಮಾಜದಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಈ ನಾಡಿಗೆ ಮಠಮಾನ್ಯಗಳ ಕೊಡುಗೆ ಅಪಾರವಾಗಿದೆ ಎಂದು ಬಾಳೆಹೊನ್ನೂರಿನ ರಂಭಾಪುರಿ ಮಠದ ಡಾ: ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಸಗರ ಗ್ರಾಮದ ನಾಗತಾಣ ಹಿರೇಮಠದಲ್ಲಿ ಆಯೋಜಿಸಿದ ಶ್ರೀ ಉದಯ ಮಾಂತೇಶ್ವರರ ಜಾತ್ರಾ ಮಹೋತ್ಸವ ಹಾಗೂ ಸೋಮೇಶ್ವರ ಶಿವಾಚಾರ್ಯ ಗುರು ಪಟ್ಟಾಧಿಕಾರ ದ್ವಾದಶ ವರ್ಧಂತಿ ಮಹೋತ್ಸವ ಮತ್ತು ನೂತನ ಕಟ್ಟಡ ಕಾಮಗಾರಿಗಳ



ಉದ್ಘಾಟನಾ ಜೊತೆಗೆ ಜನಜಾಗ್ರತಿ ಧರ್ಮ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮನುಕುಲದ ಉದ್ಧಾರಕ್ಕಾಗಿ ಸಮಾಜದಲ್ಲಿ ಧಾರ್ಮಿಕ,ನಂಬಿಕೆ,ಹಾಗೂ ಸುಸಂಸ್ಕೃತಿಯನ್ನು ಬಿತ್ತಿ,ನಾಡಿನ ಭಕ್ತರ ಬದುಕಿಗೆ ಬೆಳಕನ್ನು ನೀಡುತ್ತಿರುವ ಶ್ರೀ ಮಠದ ಪೂಜ್ಯ ಶ್ರೀ ಸೋಮೇಶ್ವರ ಶಿವಾಚಾರ್ಯರ ಕಾರ್ಯ ನಿಜಕ್ಕೂ ಶ್ಲಾಘನೀಯವಾದದ್ದು ಎಂದು ಅವರ ಕಾರ್ಯವೈಖರಿಯ ಕುರಿತು ಬಣ್ಣಿಸಿದರು.

ಶ್ರೀ ಮಠದ ಸೋಮೇಶ್ವರ ಶಿವಾಚಾರ್ಯರು ಮಾತನಾಡಿ ಸನಾತನ ಧರ್ಮ ಹಾಗೂ ಸನಾತನ ಸಂಸ್ಕೃತಿಯ ಧರ್ಮದ ಮೂಲ ತತ್ವಗಳು ನಿಸರ್ಗದ ನಿಯಮಕ್ಕೆ ಅನುಗುಣವಾಗಿವೆ,ಆದ್ದರಿಂದ ಹಿಂದೂ ಧರ್ಮವು ತನ್ನ ವೈಶಿಷ್ಟತೆಗಳಿಂದ ಕೂಡಿರುವುದರಿಂದ ಇದರ ಉಳಿವಿಗಾಗಿ ನಾವು ನೀವೆಲ್ಲರೂ ಶ್ರಮಿಸುವುದು ಅತ್ಯಗತ್ಯವಾಗಿದೆ ಎಂದು ನುಡಿದರು.

ಈ ಸಮಾರಂಭದ ವೇದಿಕೆಯ ಮೇಲೆ, ಎಮ್ಮಿಗನೂರು ಶ್ರೀಗಳು, ಅಲಮೇಲ ಶ್ರೀಗಳು,ಸಂಗೊಳ್ಳಿ ಶ್ರೀಗಳು,ಗುರುಮಠಕಲ್ ಶಾಸಕರಾದ ಶರಣಗೌಡ ಕಂದುಕುರ,ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಬಸನಗೌಡ ಮಾಲಿ ಪಾಟೀಲ್, ಮಹಾಂತಗೌಡ ಸುಬೇದಾರ,ಅಮೀನ್ ರೆಡ್ಡಿ ಮಲ್ಲೇದ,ತಾಲೂಕು ವೀರಶೈವ ಘಟಕ ಸಮಾಜದ ಅಧ್ಯಕ್ಷ ಸಿದ್ದು ಸಾಹು ಆರಬೋಳ,ಶಂಕರಪ್ಪ ಪಾಗದ ಸೇರಿದಂತೆ ಸಾವಿರಾರು ಗ್ರಾಮದ ಭಕ್ತರು ಹಾಜರಿದ್ದರು.

# ನಶಾಮುಕ್ತ ಭಾರತ ಅಭಿಯಾನ



**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನವೆಂಬರ್ 21, : ಯುವಕರ ಮೇಲೆ ಆರ್ಥಿಕವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಸಂಸ್ಕೃತಿಕವಾಗಿ ದೈಹಿಕ, ಹಾಗೂ ಮಾನಸಿಕವಾಗಿ ಪರಿಣಾಮ ಬೀರುವುದರ ಜೊತೆಗೆ ಸಮಾಜದ ಸ್ವಾಸ್ಥ್ಯವನ್ನು ಸಹ ಹದಗೆಡಿಸುವುದರಲ್ಲಿ ಸಂಶಯವಿಲ್ಲಾ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ್ ಬಿರಾದಾರ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಶಾಮುಕ್ತ ಭಾರತ ಅಭಿಯಾನ ಯೋಜನೆಯು ಪ್ರಾಂಭವಾಗಿ 5 ವರ್ಷಗಳು ಪೂರೈಸಿರುವ ಸ್ಮರ್ಣಾಥಕ ಕಾರ್ಯಕ್ರಮವನ್ನು ಉದ್ಘಾಟಿಸಿ ಪ್ರತಿಜ್ಞಾ ವಿಧಿ ಭೋದಿಸಿ ಅವರು ಮಾತನಾಡಿದರು. ಮಾದಕ ವ್ಯಸನಗಳು ಯುವಕರ ಮೇಲೆ ಆರ್ಥಿಕವಾಗಿ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಸಂಸ್ಕೃತಿಕವಾಗಿ ದೈಹಿಕ, ಹಾಗೂ ಮಾನಸಿಕವಾಗಿ ಪರಿಣಾಮ ಬೀರುವುದರ ಜೊತೆಗೆ ಸಮಾಜದ ಸ್ವಾಸ್ಥ್ಯವನ್ನು ಸಹ ಹದಗೆಡಿಸುವುದರಲ್ಲಿ ಸಂಶಯವಿಲ್ಲಾ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಜಿಲ್ಲಾ ಆರೋಗ್ಯಶಿಕ್ಷಣಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಆಶಾ ಕಾರ್ಯಕತೆ–ಯರು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನವೆಂಬರ್ 21, : ಯಾದಗಿರಿ ಜಿಲ್ಲೆಯ ಯಾದಗಿರಿ ನಗರದಲ್ಲಿ 2025ರ ಡಿಸೆಂಬರ್ 3 ಹಾಗೂ 4 ರಂದು ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕೆ ಕರ್ನಾಟಕ ಸರ್ಕಾರ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ

ಸಿದ್ದರಾಮಯ್ಯ ಅವರು, ಹಾಗೂ ಇತರೆ ಸಚಿವರು, ಗಣ್ಯರು ಮತ್ತು ಸರ್ಕಾರದ ಹಿರಿಯ ಅಧಿಕಾರಿಗಳು, ಸ್ಪರ್ಧಿಗಳು ಹಾಗೂ ಸಾರ್ವಜನಿಕರು ಜಿಲ್ಲೆಗೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಯುವಜನೋತ್ಸವಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಕುರಿತು ಕಾರ್ಯಕ್ರಮಕ್ಕೆ ಆಗಮಿಸುವ ಪತ್ರಿಕಾ ಮಾಧ್ಯಮದವರಿಗೆ ಪ್ರತ್ಯೇಕ ಆಸನದ

ವ್ಯವಸ್ಥೆಯನ್ನು ಕಲ್ಪಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು, ಪಾಸ್‌ಗಳ ವಿತರಣೆ ಹಾಗೂ ಊಟದ ವ್ಯವಸ್ಥೆಯನ್ನು ಮಾಡಲು ತಿಳಿಸಿದೆ. ಈ ಕಾರ್ಯಕ್ರಮವು ಒಂದು ರಾಜ್ಯಮಟ್ಟದ ಕಾರ್ಯಕ್ರಮವಾಗಿರುವುದರಿಂದ ನಿಮಗೆ ನಿಯೋಜಿತ ಜವಾಬ್ದಾರಿಯನ್ನು ವೈಯಕ್ತಿಕ ಗಮನ ಹರಿಸಿ, ನಿಮ್ಮ ಇಲಾಖೆಯ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು, ಅಚ್ಚುಕಟ್ಟಾಗಿ ನಿರ್ವಹಿಸುವುದು, ಕೈಗೊಂಡ ಕ್ರಮದ ಬಗ್ಗೆ ಮುಂದೆ ನಿಗದಿಪಡಿಸುವ ಸಭೆಯಲ್ಲಿ ವರದಿ ಸಲ್ಲಿಸಬೇಕು. ಜಿಲ್ಲೆಯಲ್ಲಿ ಜರುಗುವ ರಾಜ್ಯಮಟ್ಟದ ಯುವಜನೋತ್ಸವಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಪೂರ್ಣ ಸಹಕಾರ ನೀಡಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪಸ್ಮಾರ ಎಂಬುದು ಮೆದುಳಿನ ದೀರ್ಘಕಾಲದ ಅಸ್ವಸ್ಥತೆಯಾಗಿದ್ದು, ವೈದ್ಯಕೀಯ ಚಿಕಿತ್ಸೆ ಪರಿಣಾಮಕಾರಿ ಔಷಧಿ ನೀಡುವುದರಿಂದ ಮೂರ್ಛೆ ರೋಗ ಸಂಪೂರ್ಣವಾಗಿ ನಿಯಂತ್ರಣ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** : ನವೆಂಬರ್ 21, ಎಪಿಲೆಪ್ಸಿ ಅಥವಾ ಅಪಸ್ಮಾರ ಎಂಬುದು ಮೆದುಳಿನ ದೀರ್ಘಕಾಲದ ಅಸ್ವಸ್ಥತೆಯಾಗಿದ್ದು, ಸೂಕ್ತ ವೈದ್ಯಕೀಯ ಚಿಕಿತ್ಸೆಮತ್ತು ಪರಿಣಾಮಕಾರಿ ಔಷಧಿಗಳನ್ನು ನೀಡುವುದರಿಂದ ಮೂರ್ಛೆ ರೋಗವನ್ನು ಸಂಪೂರ್ಣವಾಗಿ ನಿಯಂತ್ರಿಸಬಹುದು ಎಂದು ಸೈಕೋಲೊಜಿಸ್ಟ್‌ರಾದ ಶ್ರೀಮತಿ ಶ್ರೀಲಕ್ಷ್ಮಿ ಅವರು ಹೇಳಿದರು.

ಯಾದಗಿರಿ ನಗರ ನ.20ರ ಗುರುವಾರ ರಂದು ಗಚ್ಚಿ ಬೌಲಿ. ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಅಪಸ್ಮಾರ ದಿನಾಚರಣೆ ಪ್ರಯುಕ್ತ ಯಾದಗಿರಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಯಿಮ್ಸ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೋಗ ಸಮಸ್ಯೆಗೆ ತುತ್ತಾದವರು ನಿಗದಿತ ಅವಧಿಯವರೆಗೆ ಕ್ರಮಬದ್ಧವಾಗಿ ಔಷಧಿ ತೆಗೆದುಕೊಳ್ಳಬೇಕಾಗುತ್ತದೆ. ಮೂರ್ಛೆ ರೋಗವನ್ನು ಆದಷ್ಟು ಬೇಗ ಪತ್ತೆ ಹಚ್ಚಿ ಚಿಕಿತ್ಸೆ ಆರಂಭಿಸುವುದರಿಂದ ಮೆದುಳಿಗೆ ಹೆಚ್ಚಿನ ಹಾನಿಯಾಗದಂತೆ ತಡೆಯಬಹುದು. ಇದಲ್ಲದೆ ಸಾಕಷ್ಟು ನಿದ್ದೆ ಮಾಡುವ ಮೂಲಕ, ಕೆಫೀನ್, ಎನರ್ಜಿ ಡ್ರಿಂಕ್ ಇತ್ಯಾದಿ ಆಹಾರಗಳನ್ನು ತಪ್ಪಿಸುವ ಮೂಲಕ, ಸಾಕಷ್ಟು ಪ್ರಮಾಣದಲ್ಲಿ ನೀರನ್ನು ಕುಡಿಯುವ ಮೂಲಕ ಮೂರ್ಛೆ ರೋಗವನ್ನು ತಡೆಗಟ್ಟಬಹುದು ಎಂದು




ತಿಳಿಸಿದರು.

ಶುಶ್ರೂಷಕ ಅಧಿಕಾರಿಗಳಾದ ಸಿದ್ದಾರೂಢ ಅವರು ಮಾತನಾಡಿ, ಅಪಸ್ಮಾರ ರೋಗಿಗಳಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ, ಸುಧಾರಿತ ಆರೋಗ್ಯ ಸೇವೆ, ಮಾನಸಿಕ ಆರೋಗ್ಯಕ್ಕೆ ಬೆಂಬಲವನ್ನು ನೀಡುವಲ್ಲಿ ಈ ಆಚರಣೆಯು ನಿರ್ಣಾಯಕ ಪಾತ್ರ ವಹಿಸುತ್ತದೆ. ಅಷ್ಟೇ ಅಲ್ಲದೆ ಈ ದಿನ ಅಪಸ್ಮಾರ ಕಾಯಿಲೆ, ಅದರ ರೋಗನಿರ್ಣಯ ಮತ್ತು ಚಿಕಿತ್ಸೆಯ ಬಗ್ಗೆ ಜಾಗೃತಿಯನ್ನು ಮೂಡಿಸಲಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಸಂಯೋಜಕರಾದ ಶ್ರೀಮತಿ ನಾಗರತ್ನ ಅವರು ಮಾತನಾಡಿ, ರೋಗ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವುದು ಬಹಳ ಮುಖ್ಯವಾಗಿದೆ. ಆದರೆ ಹೆಚ್ಚಿನವರು ಈ ಮೂರ್ಛೆ ರೋಗವನ್ನು ಶಾಪವೆಂದು ನಂಬುತ್ತಾರೆ. ಹೀಗಾಗಿ ಈ ರೋಗದ ಬಗ್ಗೆ

ಇರುವ ಜನರ ತಪ್ಪು ಕಲ್ಪನೆಗಳನ್ನು ತೊಡೆದು ಹಾಕಲು ಮತ್ತು ಅಪಸ್ಮಾರದ ಬಗ್ಗೆ ಜಾಗೃತಿ ಮೂಡಿಸಲ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಅಪಸ್ಮಾರ ಅಥವಾ ಮೂರ್ಛೆ ರೋಗ ಎಂಬುದು ಮೆದುಳಿಗೆ ಸಂಬಂಧಪಟ್ಟ ನರವೈಜ್ಞಾನಿಕ ಕಾಯಿಲೆಯಾಗಿದೆ. ಈ ರೋಗ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವುದು ಬಹಳ ಮುಖ್ಯವಾಗಿದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಮೇಲ್ವಿಚಾರಕರು ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರದ ಕಲಾ ಜಾಥಾಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

**ರಾಯಚೂರು :** ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ,ಗೃಹಲಕ್ಷ್ಮಿ,ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆ ಕುರಿತಂತೆ ಎಲ್ಇಡಿ ವಾಹನದ ಮೂಲಕ ಕಿರುಚಿತ್ರಗಳ ಪ್ರದರ್ಶನ, ಸಂಗೀತ, ಬೀದಿ ನಾಟಕದಿಂದ ಜನಸಾಮಾನ್ಯರಿಗೆ ಮಾಹಿತಿ ಹಾಗೂ ಪ್ರಚಾರ ನೀಡಲು ಹಮ್ಮಿಕೊಂಡಿರುವ ಕಲಾ ಜಾಥಾ ಕಾರ್ಯಕ್ರಮಕ್ಕೆ ನವೆಂಬರ್ 20ರಂದು ಚಾಲನೆ ಸಿಕ್ಕಿತು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜಿಲ್ಲಾಮಟ್ಟದ ಸಮಿತಿಯ ಉಪಾಧ್ಯಕ್ಷರಾದ ನಾಗೇಂದ್ರ ಮಟಮಾರಿ,

ಹನುಮಂತಪ್ಪ ಜಾಲಿಬೆಂಚಿ ಹಾಗೂ ತಾಲೂಕುಮಟ್ಟದ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ ಅವರು ಹಸಿರು ನಿಶಾನೆ ತೋರುವ ಮೂಲಕ ಕಲಾ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಹನುಮಂತಪ್ಪ ಜಾಲಿಬೆಂಚಿ ಅವರು ಮಾತನಾಡಿ, ಜನತೆಗೆ ಮಾತು ನೀಡಿದಂತೆ ರಾಜ್ಯ ಸರ್ಕಾರವು ವಾರ್ಷಿಕವಾಗಿ 52.000 ಕೋಟಿ ರೂ ಬಳಕೆ ಮಾಡಿ ಎಲ್ಲ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಬದ್ಧತೆಯನ್ನು ಉಳಿಸಿಕೊಂಡಿದೆ.

ಈ ಯೋಜನೆಗಳಿಂದ ರಾಜ್ಯದ ಜನತೆಗೆ ಸಾಕಷ್ಟು ಅನುಕೂಲವಾಗಿದೆ. ಈ ಬಗ್ಗೆ ಪ್ರಚಾರ ಕಾರ್ಯಕ್ರಮಗಳು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಯಬೇಕು ಎಂದರು.

ನಾಗೇಂದ್ರ ಮಟಮಾರಿ ಅವರು ಮಾತನಾಡಿ, ರಾಜ್ಯದ 7 ಕೋಟಿ ಜನರಿಗೆ ಗ್ಯಾರಂಟಿ ಯೋಜನೆಗಳು ಬದುಕು ನೀಡಿದೆ.

ರಾಜ್ಯದ ಶೇ.96ರಷ್ಟು ಜನ ಒಂದಲ್ಲಾ ಒಂದು ರೀತಿಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದಾರೆ. ಈ ಮಾಹಿತಿಯು ಜಿಲ್ಲೆಯ ಪ್ರತಿ ಮನೆಮನೆ ಬಾಗಿಲಿಗೆ ಹೋಗಬೇಕು ಎಂದು ತಿಳಿಸಿದರು.

ಪವನ್ ಕಿಶೋರ್ ಪಾಟೀಲ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ರಾಯಚೂರು ಜಿಲ್ಲೆಯಲ್ಲಿ ಸಹ ಅಚ್ಚುಕಟ್ಟಾಗಿ ಅನುಷ್ಠಾನವಾಗುತ್ತಿವೆ. ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದಲ್ಲಿ ಇಡೀ ರಾಜ್ಯದಲ್ಲಿಯೇ ರಾಯಚೂರು ಜಿಲ್ಲೆಗೆ 5ನೇ ಸ್ಥಾನ ಲಭಿಸಿದೆ

. ಯುವನಿಧಿ ಅನುಷ್ಠಾನದಲ್ಲಿ ಇಡೀ ರಾಜ್ಯದಲ್ಲಿಯೇ ನಾವು 3ನೇ ಸ್ಥಾನದಲ್ಲಿದ್ದೇವೆ.

ಕಲಾ ಜಾಥಾ ತಂಡದಲ್ಲಿರುವ ಎಲ್ಲರೂ ಪ್ರಚಾರ ರಾಯಭಾರಿಗಳು ನಾವು ಎಂದು ಭಾವಿಸಿ ಜಿಲ್ಲೆಯಲ್ಲಿ ಪ್ರಚಾರ ಕಾರ್ಯವನ್ನು ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಸಲಹೆ ಮಾಡಿದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ ಅವರು ಮಾತನಾಡಿ, ಅರ್ಹ ಪ್ರತಿಯೊಬ್ಬರು ಸಹ ಈ ಪಂಚ ಗ್ಯಾರಂಟಿ ಯೋಜನೆಗಳ ಪಾಲುದಾರರಾಗುವ ನಿಟ್ಟಿನಲ್ಲಿ ವಾರ್ತಾ ಇಲಾಖೆಯಿಂದ ಪ್ರಚಾರ ಕಾರ್ಯಗಳು ವ್ಯವಸ್ಥಿತವಾಗಿ ನಡೆಯಬೇಕು ಎಂದು ತಿಳಿಸಿದರು.

ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಅವರು ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಈ ವೇಳೆ ವಾರ್ತಾ ಇಲಾಖೆಯ ಪ್ರಕಾಶ,

ಅಪ್ರೆಂಟಿಸ್ ತರಬೇತುದಾರ ಲವ, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಕಲಾವಿದರು ಇದ್ದರು.

## ಸರ್ದಾರ್ ವಲ್ಲಭಭಾಯಿ ಪಟೇಲ್ ಜನ್ಮದಿನಾಚರಣೆ

# ರಾಯಚೂರಲ್ಲಿ ಶಿಸ್ತುಬದ್ಧವಾಗಿ ನಡೆದ ಜಿಲ್ಲಾಮಟ್ಟದ ಏಕತಾ ಕಾಲ್ನಡಿಗೆ ಯಾತ್ರೆ




ಮಲ್ಲಮ್ಮ ನುಡಿ ವಾರ್ತೆ

**ರಾಯಚೂರು :** ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಮೇರಾ ಯುವ ಭಾರತ, ರಾಷ್ಟ್ರೀಯ ಸೇವಾ ಯೋಜನೆ, ರೋಟರಿ ಕ್ಲಬ್ ಕೃಷ್ಣ ತುಂಗೆ, ಎನ್‌ಸಿಸಿ ಮತ್ತು ಭಾರತ ಸೇವಾ ದಳದ ಸಂಯುಕ್ತಾಶ್ರಯದಲ್ಲಿ ನವೆಂಬರ್ 20ರಂದು ರಾಯಚೂರು ನಗರದಲ್ಲಿ ಜಿಲ್ಲಾಮಟ್ಟದ ಏಕತಾ ಯಾತ್ರೆ ಶಿಸ್ತುಬದ್ಧವಾಗಿ ನಡೆಯಿತು.

ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಜನ್ಮದಿನದ ನಿಮಿತ್ತ ನಡೆದ ಜಿಲ್ಲಾಮಟ್ಟದ ಏಕತಾ ಕಾಲ್ನಡಿಗೆ ಯಾತ್ರೆಯು ಬೆಳಗ್ಗೆ 9 ಗಂಟೆಗೆ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾಗಿ, ಶ್ರೀಬಸವೇಶ್ವರ ವೃತ್ತ, ಗಾಂಧಿ ಚೌಕ್, ಚಂದ್ರಮೌಳೇಶ್ವರ ಸರ್ಕಲ್ ವೃತ್ತದ ಮೂಲಕ ಸಾಗಿ ಶ್ರೀ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತಕ್ಕೆ ಬಂದು ಮುಕ್ತಾಯವಾಯಿತು.

ಶ್ರೀ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ನಡೆದ ವೇದಿಕೆಯ ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯರಾದ ಲೆಹರ್ ಸಿಂಗ್ ಸಿರೋಯಾ ಅವರು ಕಾರ್ಯಕ್ರಮದಲ್ಲಿ ಮಾತನಾಡಿ, ಭಾರತ ದೇಶದ ಏಕೀಕರಣದ ಹೋರಾಟದಲ್ಲಿ ಮಹತ್ವದ ಪಾತ್ರ ವಹಿಸಿದ ಶ್ರೀ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ದೇಶಪ್ರೇಮ, ಸಂಘಟನಾತ್ಮಕ ಗುಣಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಮಹಾಗನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ತಾಲೂಕುಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಆಗಿರುವ ರೋಟರಿ ಕ್ಲಬ್ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ಭಾರತ ಸೇವಾದಳದ ತಾಲೂಕಾಧ್ಯಕ್ಷರಾದ ವಿರುಪಾಕ್ಷಪ್ಪ ಕ್ಯಾದಿಗೇರಿ, ಮುಖಂಡರಾದ

ವೀರನಗೌಡ ಪಾಟೀಲ, ಯು ನರಸರೆಡ್ಡಿ, ಶಂಕರರೆಡ್ಡಿ, ಸಂತೋಷ ರಾಜಗುರು, ಗೌತಮ ರೆಡ್ಡಿ, ವಿಜಯಕುಮಾರ ಸಜ್ಜನ, ವಿದ್ಯಾಸಾಗರ ಚಿಮಣಗೇರಿ ಸೇರಿದಂತೆ ಇನ್ನಿತರರು ಇದ್ದರು. ವಿವಿಧ ಸಂಘ ಸಂಸ್ಥೆಗಳ ಪ್ರಮುಖರು ಮತ್ತು ವಿವಿಧ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಜಾಥಾದಲ್ಲಿ ಭಾಗಿಯಾಗಿದ್ದರು.

# ಬೀದಿನಾಯಿಗಳು ವಾಸವಿದ್ದಲ್ಲಿ ಪರಿಶೀಲಿಸಿ ಲೆಕ್ಕ ನೀಡಲು ಪಾಲಿಕೆಯ ಆಯುಕ್ತರ ಸೂಚನೆ

ರಾಯಚೂರು: ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು,ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಆವರಣದಲ್ಲಿ ಯಾವುದೇ ಬೀದಿನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮಹಾನಗರ ಪಾಲಿಕೆಯ ಪರಿಸರ ಅಭಿಯಂತರರು ಆರೋಗ್ಯ ಶಾಖೆಯ ಮುಖ್ಯಸ್ಥರಿಗೆ ತಿಳಿಸಬೇಕು.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂಪ್ರೇರಿತ ರಿಟ್ ಅರ್ಜಿ ಸಂ-ಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ಈ ಕ್ರಮ ವಹಿಸಬೇಕಿದ್ದು, ಎಲ್ಲಾ ಸಂಸ್ಥೆಗಳ ಮುಖ್ಯಸ್ಥರು ಈ ಬಗ್ಗೆ ಗಮನ ಹರಿಸಬೇಕು.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು. ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನುಕ್ರಮ ವಹಿಸಲಾಗುವುದು ಎಂದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳ, ಕ್ರೀಡಾ ಸಂಕೀರ್ಣಗಳ, ಬಸ್ ನಿಲ್ದಾಣಗಳ, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ಮಹಾನಗರ ಪಾಲಿಕೆಯ ಆಯುಕ್ತರು ಸೂಚನೆ ನೀಡಿದ್ದಾರೆ.

# ಫೆಡರಲ್ ಶಿಕ್ಷಣ ಸಂಸ್ಥೆಯಿಂದ ಅಂಧತ್ವವುಳ್ಳ ಮಕ್ಕಳಿಗೆ ದಿನನಿತ್ಯ ಬಳಕೆ ವಸ್ತುಗಳು ವಿತರಣೆ




ಮಲ್ಲಮ್ಮ ನುಡಿ ವಾರ್ತೆ

**ರಾಯಚೂರು:** ನಗರ ಹೊರಹೊಲೆಯ ಯರಮರಸನಲ್ಲಿ ಇರುವ ಫೆಡರಲ್ ಶಿಕ್ಷಣ ಸಮೂಹಗಳ ವತಿಯಿಂದ ದಿ. 19ರಂದು ಮಾಣಿಕ್ ಪ್ರಭು ದೇವಸ್ಥಾನದ ಅಂಧತ್ವವುಳ್ಳ ಶಾಲಾ ಮಕ್ಕಳಿಗೆ ದಿನನಿತ್ಯ ಉಪಯೋಗಿಸುವ ವಸ್ತುಗಳ ಕಿಟ್‌ನ್ನು ವಿತರಿಸಲಾಯಿತು.

ಈ ಸಂಧರ್ಭದಲ್ಲಿ ಅಂಧತ್ವವುಳ್ಳ ಮಕ್ಕಳಿಗೆ ಮುಖ್ಯಗುರುಗಳಾದ.ರೇಖಾ ರವರು ಅಂಧತ್ವ ಮಕ್ಕಳ್ಳಲ್ಲಿ ಅಡಗಿರುವ ಪ್ರತಿಭೆ ಸಾಮನ್ಯ ಮಕ್ಕಳಿಗಿಂತ ಭಿನ್ನವಾಗಿದ್ದು ಕಂಡುಬರುತ್ತದೆ. ಈಗಾಗಿ ಸಾಮನ್ಯ ಮಕ್ಕಳನ್ನು ಈ ಮಕ್ಕಳಿಗೆ ಹೋಲಿಸಿದಲ್ಲಿ ಸಂಪೂರ್ಣ ಪ್ರತಿಭೆ ಮತ್ತು ಚುರುಕುತನ ವ್ಯತ್ಯಸವಾಗಿ ಆಡುವಾದಗಲಿ, ಬರೆಯುವುದಾಗಲಿ, ಓದುವದಾಗಲಿ, ಕ್ರೀಡೆಯಲ್ಲಿಯಾಗಲಿ, ಸಾಮನ್ಯಸ್ಪರ್ದೆಗಳಲ್ಲಿ ಮುಂದಾಳತ್ವ ವಹಿಸಿರುವುದಕ್ಕೆ ಮನಸ್ಸಿನ ಏಕಾಗ್ರತೆಯೇ ಕಾರಣವೆಂದು ತಿಳಿಸಿದರು. ಸಂಸ್ಥೆಯ ಅಧ್ಯಕ್ಷರಾದ ಮೊಹ್ಮದ್ ಅಬ್ದುಲ್ ಹೈ ಫೀ-ರೋಜ್ ಮಾತನಾಡಿ, ಸಂಸ್ಥೆಯು ಕೈಗೊಂಡ ಈ ಕಾರ್ಯಕ್ರಮವನ್ನು ಪ್ರಶಂಸಿದರು, ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ಹಾಗೂ ಶಾಲಾ ಮುಖ್ಯಗುರುಗಳು ಈ ಒಂದು ಕಾರ್ಯಕ್ರಮ ನಮ್ಮ ಶಾಲಾ ಮಕ್ಕಳಿಗೆ ತಮ್ಮ ತನು, ಮನದಿಂದ ನೀಡಿದ ದಿನನಿತ್ಯ ಉಪಯೋಗಿಸುವ ವಸ್ತುಗಳು ಹಂಚಿಕೊಂಡಿರುವುದು ನಮಗೆ ಸಂತಸ ಮೂಡಿದೆ ಎಂದರು. ಅಂಧತ್ವವುಳ್ಳ ಮಕ್ಕಳ್ಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಕೊಂಡಡಿದಾರು. ಕೊನೆಗೆ ಸಂಸ್ಥೆಯ ಶಿಕ್ಷಕರಾದ ಕಿರಣ್ ವಂದನಾರ್ಪಣೆಯನ್ನು ನೆರವೇರಿಸಿದರು. ಹಾಗೂ ಫೆಡರಲ್ ಪಬ್ಲಿಕ್ ಶಾಲೆಯ ಸಹ ಶಿಕ್ಷಕಿಯರು-ಭೋದಕೇತ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು,

# ಸರಕಾರಿ ಶಾಲೆಗಳ ವಿಲೀನ ಕ್ರಮವನ್ನು ನಿಲ್ಲಿಸಿ ಶಿಕ್ಷಕರ ನೇಮಕಾತಿ ತ್ವರಿತಗೊಳಿಸಬೇಕು: ವಿದ್ಯಾ ಪಾಟೀಲ್



ರಾಯಚೂರು: ಕೆ.ಪಿ.ಎಸ್. ಹಾಗೂ ಮ್ಯಾಗ್ನೆಟ್ ಶಾಲೆಗಳ ಗುರಿತಿಸುವಿಕೆಯನ್ನು ನಿಲ್ಲಿಸಿ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿಮಾಡಿ ಗುಣಮಟ್ಟ ಶಿಕ್ಷಣವನ್ನು ಹೆಚ್ಚಿಸಬೇಕಾಗಿದೆ.

ಎಂದು ಸರಕಾರಿ ಶಾಲೆ ಅಭಿವೃದ್ಧಿ ವೇದಿಕೆ ಮುಖಂಡರಾದ ವಿದ್ಯಾಪಾಟೀಲ್ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯ ನಡೆಸಿ ಮಾತನಾಡಿದ ಅವರು, ಈಗಾಗಲೇ ಸರಕಾರ ಕೆ.ಪಿ.ಎಸ್. ಹಾಗೂ ಮ್ಯಾಗ್ನೆಟ್ ಶಾಲೆಗಳ ಹೆಸರಿನಲ್ಲಿ ಸರಕಾರಿ ಶಾಲೆಗಳನ್ನು ವಿಲೀನಗೊಳಿಸುವ ಹುನ್ನಾರ ನಡೆಸುತ್ತಿದೆ, ಕಲ್ಯಾಣ ಕರ್ನಾಟಕ ಮಂಡಳಿಯಿಂದ 200 ಕೆಪಿಎಸ್ ಶಾಲೆಗಳನ್ನು ಪ್ರಾರಂಭಿಸಲು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಕರ್ನಾಟಕ ಸರಕಾರ ಕಲ್ಯಾಣ ಕರ್ನಾಟಕದ 6 ಜಿಲ್ಲೆಗಳಲ್ಲಿ 84 ಶಾಲೆಗಳನ್ನು ಮಂಜೂರು ಮಾಡಿ ಜಿಲ್ಲಾವಾರು ಶಾಲೆಗಳನ್ನು ಗುರುತಿಸಿದೆ. ಈಗಾಗಲೇ ರಾಜ್ಯದಲ್ಲಿ 700 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲು ಸಜ್ಜುಗೊಂಡಿದೆ. ವಿಲೀನ ಪ್ರಕ್ರಿಯೆಗೆ ಒಳಪಟ್ಟರೇ ಸುಮಾರು 25 ಸಾವಿರ ದಿಂದ 26 ಸಾವಿರ ಶಾಲೆಗಳು ಮುಚ್ಚುವ ಭೀತಿಯಿದೆ. ಈಗಾಗಲೇ ಪ್ರಾಯೋಗಿಕವಾಗಿ ಚನ್ನಪಟ್ಟಣ, ಚಿಕ್ಕಬಳ್ಳಾಪೂರು ಜಿಲ್ಲೆಗಳಲ್ಲಿ ಕೆ.ಪಿ.ಎಸ್. ಶಾಲೆಗಳ ಪಕ್ಕದಲ್ಲಿರುವ ಶಾಲೆಗಳನ್ನು ಗುರುತಿಸುವ ಪ್ರಕ್ರಿಯೆ ಪ್ರಾರಂಭವಾಗಿದೆ. ” ಇದೇ ರೀತಿ ಇಡೀ ರಾಜ್ಯದಲ್ಲಿ ಗುರುತಿಸಿ ವಿಲೀನಗೊಳಿಸಿದರೇ ರಾಜ್ಯದಲ್ಲಿರುವ ಅರ್ಧ ಶಾಲೆಗಳು ಮುಚ್ಚುತ್ತವೆ. ಈ ಹಿನ್ನೆಲೆಯಲ್ಲಿ ಸರಕಾರಿ ಶಾಲೆಯ ಅಭಿವೃದ್ಧಿ ಸಮಿತಿಯಿಂದ ಸರಕಾರಿ ಶಾಲೆ ವಿಲೀನಗೊಳಿಸಲು ಗುರುತಿಸುತ್ತಿರುವ ಪ್ರಕ್ರಿಯೆಯನ್ನು ಕೈಬಿಡಲು ಈಗಾಗಲೇ ಸರಕಾರ-ಕ್ಕೆ ಮನವಿಯನ್ನು ಸಲ್ಲಿಸಲಾಗಿದೆ. ಸರಕಾರಿ ಶಾಲೆಗಳನ್ನು ಬಲವರ್ಧನೆಗೊಳಿಸಲು ಸಮಿತಿಯು ಈ ಕೆಳಕಂಡ ಬೇಡಿಕೆಗಳನ್ನು ಸರಕಾರ ಗಮನಕ್ಕೆ ತರುತ್ತಾ ಜನವರಿ ಮೊದಲನೇ ವಾರದೊಳಗಡೆ ಈ ಬೇಡಿಕೆಗಳು ಇಡೇರಿಕೆಯಾಗದಿದ್ದರೇ ಹೋರಾಟ ಅನಿವಾರ್ಯವಾಗುತ್ತದೆ. ಬೇಡಿಕೆ ಇಡೇರದೇ ಪಕ್ಷದಲ್ಲಿ ಬಸವ ಕಲ್ಯಾಣದಿಂದ ಗುಲ್ಬರ್ಗಾದವರೆಗೆ ಪಾದಯಾತ್ರೆ ಮೂಲಕ ಜನವರಿ 25 ರಂದು ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಬೇಡಿಕೆಗಳು:

1) ಕೆ.ಪಿ.ಎಸ್/ಮ್ಯಾಗ್ನೆಟ್ ಶಾಲೆ ಹೆಸರಲ್ಲಿ ಗುರುತಿಸುವ ವಿಲಿನ ಪ್ರಕ್ರಿಯೆ ತಕ್ಷಣ ನಿಲ್ಲಿಸಬೇಕು

2) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತಕ್ಷಣ ತುಂಬಬೇಕು.

3) ಪ್ರತಿ ಶಾಲೆಗೆ ಒಬ್ಬ ಪರಿಚಾರಕರನ್ನು ನೇಮಿಸಬೇಕು.

4) ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಮೂಲ ಸೌಲಭ್ಯಗಳನ್ನು ನೀಡಬೇಕು.

5) ಕಲ್ಯಾಣ ಕರ್ನಾಟಕದ ಭಾಗದಲ್ಲಿ ಶಿಕ್ಷಕರನ್ನು ನೇಮಿಸುವಾಗ ಕಲ್ಯಾಣ ಕರ್ನಾಟಕದ ಪ್ರಾಧಿಕಾರ ರಚಿಸಿ ಅದರಮೂಲಕ ಶಿಕ್ಷಕರನ್ನು ಭರ್ತಿಮಾಡಬೇಕು. ಆಯ್ಕೆಯಾದ ಶಿಕ್ಷಕರು ಈ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಮಾತ್ರ ವರ್ಗಾವಣೆಗೆ ಅವಕಾಶವಿರಬೇಕು. ಈ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹೋರಾಟ ರೂಪಿಸಲಾಗುವುದೆಂದರು ಪತ್ರಿಕಾಗೋಷ್ಠಿಯಲ್ಲಿ ಭಾಗಿಯಾಗಿದ್ದರು.

# ನ. 22 ರಂದು ಸಂಗೀತ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

**ರಾಯಚೂರು:** ವಚನಸಿರಿ ಪಂ. ಅಂಬಯ್ಯನುಲಿ ಸಂಗೀತ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ದಿ.22 ರಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಸಂಸ್ಥೆಯ 3ನೇ ವಾರ್ಷಿಕೋತ್ಸವದ ಪ್ರಯುಕ್ತ ರಾಯಚೂರು ಸಂಗೀತ ಉತ್ಸವ ಹಾಗೂ ನುಲಿ ಸಿರಿ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಗೌರವಧ್ಯಕ್ಷರಾದ ಅಂಬಯ್ಯನುಲಿ ಅವರು ಹೇಳಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಕಾರ್ಯಕ್ರಮದ ದಿವ್ಯಾ ಸನ್ನಿದ್ಯಾವನ್ನು ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ಅಭಿನವರಾಚೋಟಿವೀರ ಶಿವಾಚಾರ್ಯ ಮಹಾಸ್ವಾಮಿಗಳು, ಡಾ. ಕಲ್ಲಯ್ಯಜ್ಜನ ಅವರು ವಹಿಸಲಿದ್ದಾರೆ. ಸಾಯಿ ಕಿರಣ ಆದೋನಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಹಿರಿಯ ಸಾಹಿತಿ ನಾಡೋಜ ಕುಂ. ವೀರಭದ್ರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಸಚಿವ ಎನ್ ಎಸ್ ಬೋಸರಾಜು, ಸಂಸದ ಜಿ. ಕುಮಾರ ನಾಯಕ, ಶಾಸಕರು ಡಾ. ಶಿವರಾಜ ಪಾಟೀಲ್, ಶಾಸಕ ಬಸನಗೌಡ ದದ್ದಲ್ ಅವರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ ಎಂದರು. ಇಂದಿನ ಯುವಕರಿಗೆ ಸಂಗೀತ ಉತ್ಸವ ತುಂಬುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಸಂಗೀತ ಉತ್ಸವ ಕಾರ್ಯಕ್ರಮದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಿರ್ವಹಿಸಲಾಗುತ್ತಿದೆ. ಶಿಕ್ಷಣ ಕ್ಷೇತ್ರ ಹಾಗೂ ಮಾಧ್ಯಮ ಕ್ಷೇತ್ರ ಸೇರಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಒಟ್ಟು 23 ನುಲಿ ಸಿರಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ಸಂಗೀತ ಉತ್ಸವದಲ್ಲಿ ಹಿಂದೂಸ್ತಾನ್, ಸುಗಮ ಸಂಗೀತ, ವಚನ ನೃತ್ಯ ಸೇರಿ ಕಾರ್ಯಕ್ರಮ ನಡೆಯಲಿದೆ ಎಂದರು.

# 46ನೆಯ ಶರಣ ಕಮ್ಮಟ ಅನುಭವ ಮಂಟಪ ಉತ್ಸವ ನಿಮಿತ್ಯ ಯೋಗ ಶಿಬಿರ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

**ಬಸವಕಲ್ಯಾಣ :** ನ. ಇಲ್ಲಿನ ಅಕ್ಕ ಮಹಾದೇವಿ ಮಹಿಳಾ ಕಾಲೇಜಿನ ಆವರಣದಲ್ಲಿ 46ನೆಯ ಶರಣ ಕಮ್ಮಟ ಹಾಗೂ ಅನುಭವ ಮಂಟಪ ಉತ್ಸವ ನಿಮಿತ್ಯ ಯೋಗ ಶಿಬಿರವನ್ನು ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಉದ್ಘಾಟನ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು ಸರ್ವ ರೋಗಕ್ಕು ಯೋಗ. ಧ್ಯಾನವೇ ದಿವ್ಯೌಷಧವಾಗಿದೆ ಎಂದು ಹೇಳಿದರು. ವಿಜಯಕುಮಾರ ಮಂಠಾಳೆ ಕಾರ್ಯಕ್ರಮವನ್ನು ದ್ಘಾಟಿಸಿದರು. ಡಾ. ಜಿ. ಎಸ್. ಭುರಳೆ ಬಸವ ಗುರು ಪೂಜೆ ನೆರವೇರಿಸಿದರು. ಯೋಗ ಗುರು ಮಹಾಲಿಂಗ ಸ್ವಾಮೀಜಿ ಯೋಗ ಶಿಬಿರ ನಡೆಸಿ ಕೊಟ್ಟರು. ಈ ಸಂದರ್ಭದಲ್ಲಿ ಅನುಭವ ಮಂಟಪದ ಪೂಜ್ಯಶ್ರೀ ಬಸವ ದೇವರು. ಸೂರ್ಯಕಾಂತ ಪಾಟೀಲ. ಸಂಜೀವಕುಮಾರ ನಡುಕರ. ರಾಜಕುಮಾರ ಬಿರಾದಾರ. ಅಮರೇಶ್ವರ ಸ್ವಾಮಿಜಿ. ಶಿವಕುಮಾರ ಓಕಳಿ. ವಿಜಯಕುಮಾರ ಪಟ್ನೆ. ರವೀಂದ್ರ ಕೊಳಕೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.






ಬಸವಕಲ್ಯಾಣ :- ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ಇತ್ತೀಚೆಗೆ ಆಗಮಿಸಿದ ರಾಜ್ಯ ಹೂಗಾರ ಸಮಾಜದ ಅಧ್ಯಕ್ಷರಾದ ಶಂಕರ ಹೂಗಾರ ಅವರಿಗೆ ಕನ್ನಡ ಸಾಹಿತ್ಯ ಪರಿಷತ್ ನಿಕಟ ಪೂರ್ವ ಗೌರವ ಕಾರ್ಯದರ್ಶಿಗಳಾದ ಡಾ. ಶರಣಪ್ಪ ಗದಲೇಗಾಂವ ಅವರು ಸನ್ಮಾನಿಸಿದರು.ಈ ಸಂದರ್ಭದಲ್ಲಿ ಜಿಲ್ಲೆಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಜಿಲ್ಲೆಯಾದ್ಯಂತ ನ.24 ರಿಂದ ಡಿ.9 ರವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ: ಸಿಇಓ ಗಿರೀಶ

ಮಲ್ಲಮ್ಮ ನುಡಿ ವಾರ್ತೆ

**ಬೀದರ:** ನ, ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ ನ.24 ರಿಂದ ಡಿ.9 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಆಂದೋಲನವನ್ನು ಯಶಸ್ವಿಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಸೂಚಿಸಿದರು.

ಅವರು ಗುರುವಾರ ಸಂಜೆ ಜಿಲ್ಲಾ ಪಂಚಾಯತ ಕಾರ್ಯಾಲಯದಲ್ಲಿ ಕುಷ್ಠರೋಗ ಪತ್ತೆಹಚ್ಚುವ ಆಂದೋಲನದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದಲ್ಲಿ ಯಾವುದೇ ವ್ಯಕ್ತಿಗಳಿಗೆ ಕುಷ್ಠರೋಗ ಲಕ್ಷಣಗಳಾದ ಸ್ಪರ್ಶ ಜ್ಞಾನ ನೋವು ನವೆ ಇಲ್ಲದ ತಿಳಿ ಬಿಳಿ ತಾಮ್ರ ಬಣ್ಣದ ಮಚ್ಚೆಗಳು, ಕೈ ಕಾಲು ಜೋಮು ಉಂಟಾಗುವುದು, ಮಚ್ಚೆಯ ಜಾಗದಲ್ಲಿ ಕೂದಲುಗಳು ಉದುರುವಿಕೆ ಇವು ಕುಷ್ಠರೋಗದ ಲಕ್ಷಣಗಳಾಗಿವೆ ಇದು ಒಂದು ನರ ಮತ್ತು ಚರ್ಮದ ಕಾಯಿಲೆಯಾಗಿದು ಕುಷ್ಠರೋಗದಿಂದ ಉಂಟಾಗುವ ಅಂಗವಿಕಲತೆಗಳ ಬಗ್ಗೆ ನೆರೆ-ಹೊರೆ ವ್ಯಕ್ತಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, ಅವಶ್ಯಕ ಚಿಕಿತ್ಸೆ ನೀಡುವಾಗ ಬೇಧ-ಬಾವ ಮಾಡದೇ ಗೌರವಯುತವಾಗಿ ಉಪಚರಿಸಿ, ರೋಗಿ ಗುಣಮುಖ ಹೊಂದಲು ಸಹಕರಿಸಿ ಸಮಾಜದಲ್ಲಿ ರೋಗದ ಬಗ್ಗೆ ಸೂಕ್ತ ತಿಳುವಳಿಕೆ ನೀಡಿ ಪ್ರಾರಂಭದ ಹಂತದಲ್ಲೆ ರೋಗ ಪತ್ತೆ ಮಾಡಿ ಬಹು ಔಷಧಿ ಚಿಕಿತ್ಸೆ ಪಡೆಯುವುದರಿಂದ ಸಂಪೂರ್ಣವಾಗಿ ಗುಣವುಮುಖರಾಗುವುದಲ್ಲದೆ, ಮುಂದಾಗಬಹುದಾದ ವಿಕಲಾಂಗತೆಯನ್ನು ಕೂಡ ತಡೆಗಟ್ಟಬಹುದು, ಇದಕ್ಕೆಲ್ಲಾ ಮಿಗಿಲಾಗಿ ಸಮಾಜದಲ್ಲಿರುವ ನಾವೆಲ್ಲರು ಒಗ್ಗಟ್ಟಾಗಿ ಈ ದಿಸೆಯಲ್ಲಿ ಕೆಲಸ ಮಾಡಿದರೆ ಗಾಂಧೀಜಿಯವರ ಕನಸು "ಕುಷ್ಠರೋಗ ಮುಕ್ತ ಭಾರತವನ್ನು" ನಿರ್ಮಿಸಬಹುದಾಗಿದೆ ಎಂದರು.

ಬೀದರ ಜಿಲ್ಲ್ಯಾದ್ಯಂತ ಕುಷ್ಠರೋಗ ಪ್ರಕರಣ ಪತ್ತೆಹಚ್ಚುವ ಅಂದೋಲನ್‌ದಲ್ಲಿ ಒಟ್ಟು 564 ತಂಡಗಳಿದ್ದು, ಇದರಲ್ಲಿ 1128 ಸದಸ್ಯರಿರುತ್ತಾರೆ. 56 ಮೇಲ್ವಿಚಾರಕರು ಕೆಲಸ ನಿರ್ವಹಿಸಲ್ಲಿದ್ದು, ಒಟ್ಟು 158005 ಮನೆಗಳಿಗೆ ಬೇಟಿ ನೀಡಿ 839128 ಜನರಿಗೆ ಪರೀಕ್ಷೆ ಮಾಡಲಿದಾರೆ. ಪ್ರತಿ ತಂಡಗಳ ಒಬ್ಬ ಮಹಿಳಾ ಮತ್ತು ಪುರುಷ ಸದಸ್ಯರುತ್ತಾರೆ. ಬೀದರ ಜಿಲ್ಲೆಯಲ್ಲಿ 66 ಕುಷ್ಠರೋಗಿಗಳು ಬಹು ಔಷಧಿ ಚಿಕಿತ್ಸೆ ಪಡೆಯುತ್ತಿದ್ದಾರೆಂದರು.

ಕುಷ್ಠರೋಗವು ಒಂದು ಸಾಂಕ್ರಾಮಿಕ ರೋಗ, ಇದು ಯಾವುದೇ ಶಾಪ ಪಾಪ ದಿಂದ ಬರುವುದಿಲ್ಲ ಈ ಕಾಯಿಲೆ ಮೈಕೋ ಬ್ಯಾಕ್ಟೀರಿಯಾ ಲೆಪ್ರೆ ಎಂಬ ರೋಗಾಣುವಿನಿಂದ ಬರುತ್ತದೆ ,ಈ ಬ್ಯಾಕ್ಟೀರಿಯಾಗಳು ಬಹು ಔಷಧಿ ಚಿಕಿತ್ಸೆ ಪಡೆಯದೇ ಇದ್ದ ಸೋಂಕಿತ ವ್ಯಕ್ತಿ ಸೀನಿದಾಗ ಕೆಮ್ಮಿದಾಗ ಹೊರಬರುವ ತುಂತುರ ಹನಿಗಳ ಮೂಲಕ ರೋಗಾಣುಗಳು ಗಾಳಿಯಲ್ಲಿ ಸೇರಿಕೊಂಡು ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಈ ಕಾಯಿಲೆಯಿಂದ ಹೆದರ ಬೇಕಾಗುವುದಿಲ್ಲಾ. ಅದನು ಗುಪ್ತವಾಗಿಡದೆ ತಮ್ಮ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾದಿಕಾರಿಗಳ ಗಮನಕ್ಕೆ ತಂದು, ಪ್ರಾರಂಭಿಕ ಹಂತದಲ್ಲೆ ಪತ್ತೆ ಹಚ್ಚಿ ಬಹು ಔಷಧಿಂದ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ.

# ನ.26ರಂದು ಭೂಮಿ ವಸತಿ ಹಕ್ಕಿಗಾಗಿ ಬೆಂಗಳೂರು ಚಲೋ



ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ,ನ:** ಬಡವರಿಗೆ ಭೂಮಿ–ವಸತಿ ಹಕ್ಕುಗಳನ್ನು ಖಚಿತಪಡಿಸಲು ನವೆಂಬರ್ 26ರಂದು 'ಬೆಂಗಳೂರು ಚಲೋ' ಹೋರಾಟವನ್ನು ಹಮ್ಮಿಕೊಂಡಿರುವುದಾಗಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ರಾಜ್ಯ ಅಧ್ಯಕ್ಷ ಕ–ರಿಯಪ್ಪ ಗುಡಿಮನಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಇಂದು ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರಿಯಪ್ಪ ಗುಡಿಮನಿ, "ಅಲೆಸಿದ್ದು ಸಾಕು ಬಡವರಿಗೆ ಭೂಮಿ ಮಂಜೂರಾತಿ ಆಗಲೇಬೇಕು" ಎಂದು ರಾಜ್ಯದ ಬಗರ್‌ಹುಕುಂ, ಸಾಗುವಳಿ

ಮತ್ತು ವಸತಿ ಹಕ್ಕುಗಳಿಂದ ವಂಚಿತರಾದ ಸಾವಿರಾರು ಕುಟುಂಬಗಳ ಸಮಸ್ಯೆಗಳನ್ನು ಶಾಶ್ವತವಾಗಿ ಬಗೆಹರಿಸಲು 'ಒನ್ ಟೈಮ್ ಸೆಟಲ್‌ಮೆಂಟ್' ನೀತಿಯನ್ನು ತಕ್ಷಣ ಜಾರಿಗೆ ತರಬೇಕೆಂದು ಕರಿಯಪ್ಪ ಗುಡಿಮನಿ ಸರ್ಕಾರಕ್ಕೆ ಮನವಿ ಮಾಡಿದರು.

ಉಳುವವರಿಗೆ ಭೂಮಿ' ನಿನಾದದೊಂದಿಗೆ ಮಾತನಾಡಿದ ಅವರು, ದೇಶ ಸ್ವಾತಂತ್ರ್ಯ ಬಂದು 79ವರ್ಷಗಳು ಕಳೆದರೂ ಕೋಟ್ಯಾಂತರ ಬಡ ಕುಟುಂಬಗಳಿಗೆ ಉಳುಮೆಗೆ ಜಮೀನಿಲ್ಲ, ವಾಸಿಸಲು ಮನೆಯಿಲ್ಲ, ಸತ್ತ ಮೇಲೂ ಹೂಳಲು ಜಾಗವಿಲ್ಲ ಎಂಬ ದುಃಸ್ಥಿತಿ ಇನ್ನೂ ಮುಂದುವರೆದಿದೆ ಎಂದು ಅವರು ವಿಷಾದಿಸಿದರು.

ಭೂಮಿಯ ಬಹುಪಾಲು ಬಲಾಢ್ಯರು ಮತ್ತು ಕೈಗಾರಿಕಾ ಕಂಪನಿಗಳ ಕೈಗೆ ಹ–ರಿದು ಹೋಗುತ್ತಿದೆ ಎಂದು ಗುಡಿಮನಿ ಆರೋಪಿಸಿದರು. ಭೂ ಕಾಯ್ದೆ ತಿದ್ದುಪಡಿ ಕೃಷಿಯೇತರರಿಗೆ ಭೂಮಿ ನೀಡಿರುವುದು ಬಡವರ ಹಿತಕ್ಕೆ ವಿರುದ್ಧವಾಗಿದೆ ಎಂದರು. ಮೂಲಕ ಖರೀದಿಸಲು ಅವಕಾಶ

ದೇಶದ ರಾಜ್ಯದ ಕಾಂಗ್ರೆಸ್ ಸರ್ಕಾರ ಮತ್ತು ಕೇಂದ್ರದ ಬಿಜೆಪಿ ಸರ್ಕಾರ ಎರಡನ್ನೂ ಟೀಕಿಸಿದ ಅವರು, "ಬಾಯಲ್ಲಿ ಬಡವರ ಪರ, ಮನದಲ್ಲಿ ಬಲಾಢ್ಯರ ಪರ" ಎಂದು ಆರೋಪಿಸಿದರು. ಅದಲ್ಲದೆ, ಗಣಿಗಾರಿಕೆ ಹಕ್ಕುಗಳನ್ನು ದೊಡ್ಡ ಕಂಪನಿಗಳಿಗೆ ನೀಡುವ ಮೂಲಕ ಜನವರ್ಗವನ್ನು ಜಮೀನಿಲ್ಲದೆ ಬೀದಿಗೆ ತಳ್ಳಲಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಈಶ್ವರಪ್ಪ, ವಿಶ್ವನಾಥ್, ರಾಮಕೃಷ್ಣ, ಮಹೇಶ್, ವಸಂತರಾಜ್, ಪ್ರಭಾಕರ್‌ರೆಡ್ಡಿ, ಅಸುಂಡಿ ಬಸವರಾಜ್ ಉಪಸ್ಥಿತರಿದ್ದರು.

# ಹಕ್ಕು ಪಡೆಯದ ಠೇವಣಿಗಳ ಕುರಿತು ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ,ನ:** ಹಣಕಾಸು ಸೇವೆಗಳ ಇಲಾಖೆ, ಹಣಕಾಸು ಸಚಿವಾಲಯ, ಆರ್‌ಬಿಐ, ಎಸ್‌ಎಲ್‌ಬಿಸಿ ಮತ್ತು ಬಳ್ಳಾರಿ ಜಿಲ್ಲಾಡಳಿತ ನಿರ್ದೇಶನದಂತೆ ಹಕ್ಕು ಪಡೆಯದ ನಿಷ್ಕ್ರಿಯ ಖಾತೆಗಳ ಮುಚ್ಚುವಿಕೆ ಮತ್ತು ಮರು–ಸಕ್ರಿಯಗೊಳಿಸುವಿಕೆಗಾಗಿ ನ.21 ರಂದು ಮಧ್ಯಾಹ್ನ 12.30 ಗಂ–ಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿಮ್ಮ ಹಣ–ನಿಮ್ಮ ಹಕ್ಕು, ನಿಷ್ಕ್ರಿಯ ಖಾತೆಗಳು, ಹಕ್ಕು ಪಡೆಯದ ಠೇವಣಿಗಳ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಲೀಡ್ ಬ್ಯಾಂಕ್ ನ ಜಿಲ್ಲಾ ಮುಖ್ಯ ವ್ಯವಸ್ಥಾಪಕ ಗಿರೀಶ್ ವಿ.ಕುಲಕರ್ಣಿ ಅವರು ತಿಳಿಸಿದ್ದಾರೆ.

ಹಣಕಾಸು ಸೇವೆಗಳ ಇಲಾಖೆಯು ಅಕ್ಟೋಬರ್ 03 ರಿಂದ ಡಿಸೆಂಬರ್ 31 ರವರೆಗೆ ನಿಷ್ಕ್ರಿಯ ಖಾತೆಗಳು, ಹಕ್ಕು ಪಡೆ–ಯದ ಠೇವಣಿಗಳು, ವಿಮಾ ಪಾಲಿಸಿ ಮೊತ್ತ, ಷೇರುಗಳನ್ನು ಇತ್ಯರ್ಥಪಡಿಸಲು ಅಭಿಯಾನ ಪ್ರಾರಂಭಿಸಿದೆ.

ದಾಖಲೆಗಳ ಪ್ರಕಾರ ಬಳ್ಳಾರಿ ಜಿಲ್ಲೆಯಲ್ಲಿ 2,73,484 ನಿಷ್ಕ್ರಿಯ ಖಾತೆಗಳಿದ್ದು, ಒಟ್ಟು 73.54 ಕೋಟಿ ರೂ. ಮೊತ್ತವಿದೆ. 10 ವರ್ಷಗಳಿಗೂ ಹೆಚ್ಚು ಕಾಲದಿಂದ ಬಾಕಿ ಇರುವ ನಿಷ್ಕ್ರಿಯ ಖಾತೆಗಳನ್ನು ಮುಚ್ಚುವ ಅಥವಾ ಕೆವೈಸಿ ದಾಖಲೆಗಳನ್ನು ಸಲ್ಲಿಸುವ ಮೂಲಕ ನಿಷ್ಕ್ರಿಯ ಖಾತೆಗಳನ್ನು ಮರು–ಸಕ್ರಿಯಗೊಳಿಸಿಕೊಳ್ಳಬೇಕು.

ಆನ್‌ಲೈನ್ https://udgam.rbi.org.in ವೆಬ್‌ಸೈಟ್ ಗೆ ಭೇಟಿ ನೀಡಿ ಪರಿಶೀಲಿಸಬಹುದು ಅಥವಾ ಗ್ರಾಹಕರು ತಮ್ಮ ಹತ್ತಿರದ ಬ್ಯಾಂಕ್ ಶಾಖೆ, ಎಲ್‌ಐಸಿ ಕಚೇರಿಗೆ ಭೇಟಿ ನೀಡಿ, ಕೆವೈಸಿ ದಾಖಲೆಗಳನ್ನು ಸಲ್ಲಿಸುವ ಮೂಲಕ ನಿಷ್ಕ್ರಿಯ ಖಾತೆಗಳ ಮುಚ್ಚುವಿಕೆ ಮತ್ತು ಮರು–ಸಕ್ರಿಯಗೊಳಿಸುವಿಕೆಗಾಗಿ ಇತ್ಯರ್ಥಪಡಿಸಿಕೊಳ್ಳಬೇಕು. ಬಳ್ಳಾರಿಯ ಸಾರ್ವಜನಿಕರು ಈ ಸೌಲಭ್ಯವನ್ನು ಬಳಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಪ್ರತಿದಿನ ಸಂವಿಧಾನ ಪೀಠಿಕೆ ಭೋದನೆ



ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ,ನ:** ನಗರದ ಹೃದಯಭಾಗದಲ್ಲಿರುವ ಮತ್ತು ಅತಿಹೆಚ್ಚು ವಿದ್ಯಾರ್ಥಿಗಳ ಪ್ರವೇಶಾತಿ ಹೊಂದಿದ ಕಾಲೇಜು ಎಂಬ ಖ್ಯಾತಿ ಪಡೆದ ಬಳ್ಳಾರಿಯ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್‌ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರತಿದಿನ ತರಗತಿ ಆರಂಭಕ್ಕೂ ಮುನ್ನ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಭಾರತ ಸಂವಿಧಾನದ ಪ್ರಸ್ತಾವನೆ ಭೋದಿಸಲಾಗುತ್ತಿದೆ.

ಪ್ರತಿದಿನ (ರಜೆದಿನ ಹೊರತುಪಡಿಸಿ) ಬೆಳಿಗ್ಗೆ 09 ರಿಂದ ಮಧ್ಯಾಹ್ನ 01.30 ರ ವರೆಗೆ, ವಿಜ್ಞಾನ ವಿಭಾಗಗಳು ಒಳಗೊಂಡಂತೆ ಸಂಜೆ 04 ಗಂಟೆಯವರೆಗೆ ತರಗತಿ ನಡೆಯಲಿವೆ. ತರಗತಿ ಆರಂಭಕ್ಕೂ ಮುನ್ನ ಬೆಳಗಿನ ಪ್ರಾರ್ಥನಾ ಸಮಯದಲ್ಲಿ ರಾಜ್ಯ ಸರ್ಕಾರದ ನಿರ್ದೇಶನದಂತೆ ಪ್ರಾಂಶುಪಾಲರು, ಉಪನ್ಯಾಸಕರು, ಅತಿಥಿ ಉಪನ್ಯಾಸಕರು ಮತ್ತು ಎಲ್ಲಾ ಅಧಿಕಾರಿ, ಸಿಬ್ಬಂದಿ ಹಾಗೂ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ತಪ್ಪದೇ ಭಾರತ ಸಂವಿಧಾನದ ಪ್ರಸ್ತಾವನೆವನ್ನು ಪಠಿಸುತ್ತಾರೆ.

'ಸಂವಿಧಾನ ಪ್ರಸ್ತಾವನೆಯಲ್ಲಿ ನಮೂದಿಸಲಾದ ತತ್ವಗಳನ್ನು ಎಲ್ಲಾ ವಿದ್ಯಾರ್ಥಿಗಳು ಅಳವಡಿಸಿಕೊಂಡು ಅಂತರ್ಗತಗೊಳಿಸಿದಾಗ ಮಾತ್ರ ಸಂವಿಧಾನದ ಉದ್ದೇಶಗಳನ್ನು ಸಾಧಿಸಲು ಸಾಧ್ಯವಾಗುತ್ತದೆ' ಎಂದು ಬಳ್ಳಾರಿಯ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್‌ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಪ್ರಹ್ಲಾದ್ ಚೌಧರಿ ಹೇಳಿದ್ದಾರೆ.

# ಮೂಳೆ ಕೀಲು ಸಮಸ್ಯೆಗಳ ಬಗ್ಗೆ ಜಾಗೃತಿ ಅಗತ್ಯ




ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಮತ್ತು ಕೀಲು ಸಮಸ್ಯೆಗಳು ವೇಗವಾಗಿ ಏರುತ್ತಿರುವ ಹಿನ್ನೆಲೆಯಲ್ಲಿ, ಜನರಲ್ಲಿ ಜಾಗೃತಿ ಮೂಡಿಸುವುದು ವಶ್ಯಕ ಎಂದು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯ ಮೂಳೆ ಮತ್ತು ಕೀಲು ಶಸ್ತ್ರಚಿಕಿತ್ಸಕ ಮತ್ತು ರೋಬೋಟಿಕ್

ಸರ್ಜನ್ ಡಾ. ಸಮರ್ಥ್ ಆರ್ಯ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇತ್ತೀಚಿನ ವರ್ಷಗಳಲ್ಲಿ ಮೂಳೆ–ಕೀಲು ಸಂಬಂಧಿತ ಸಂಖ್ಯೆ. ಗಣನೀಯವಾಗಿ ಏರಿಕೆಯಾಗುತ್ತಿವೆ. ಹೆಚ್ಚಿದ ಜೀವಿತಾವಧಿ ಜಡ ಜೀವನಶೈಲಿ, ಆಹಾರ ಪದ್ಧತಿಯಲ್ಲಿ ಕೊರತೆ, ಹಾಗೂ ಮೂಳೆ ಮತ್ತು ಕೀಲು ಸಂಬಂಧಿ ಸಮಸ್ಯೆಗಳನ್ನು ತಡೆಗಟ್ಟುವ ಕ್ರಮಗಳ ಬಗ್ಗೆ ಕಡಿಮೆ ಜಾಗೃತಿಯಂತಹ ಅಂಶಗಳು ಈ ಪರಿಸ್ಥಿತಿಗೆ ಮುಖ್ಯ ಕಾರಣಗಳಾಗಿವೆ ಎಂದು ತಿಳಿಸಿದರು.

ಭಾರತದಲ್ಲಿ ಮೂಳೆ'ಅಧ್ಯಯನಗಳ ಪ್ರಕಾರ, ಕರ್ನಾಟಕದಲ್ಲಿ ದಾಖಲಾಗುವ ಒಟ್ಟು ಮೂಳೆ ಮತ್ತು ಕೀಲು ರೋಗಗಳ ಪೈಕಿ ಕೀಲು ನೋವು (ಆಸ್ಟಿಯೋಆರ್ಥ್ರೈಟಿಸ್) ಮತ್ತು ಮು–ರಿತಗಳಂತಹ ಸಮಸ್ಯೆಗಳೇ ಸುಮಾರು 11 ರಿಂದ 15% ರಷ್ಟಿದೆ. ಸೊಂಟ ನೋವು ಮತ್ತೊಂದು ಅತ್ಯಂತ ಸಾಮಾನ್ಯ ಮೂಳೆ ರೋಗಿಗಳಲ್ಲಿ ಕಂಡುಬರುತ್ತಿರುವ ಮೊಳೆ ಈ ಹಿನ್ನೆಲೆಯಲ್ಲಿ ತಾವು ಚಿಕಿತ್ಸೆ ನೀಡುತ್ತಿರುವ ಮತ್ತು ಕೀಲುಗಳ ಪ್ರಮುಖ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಿದ ಅವರು. ಪ್ರಸ್ತುತ ಸಾಮಾನ್ಯವಾಗಿ ಕಂಡುಬರುತ್ತಿರುವ ಪ್ರವೃತ್ತಿಗಳ ಬಗ್ಗೆ ವಿವರಿಸಿದರು.

ಈ ಹಿಂದೆ ಸಾಮಾನ್ಯವಾಗಿದ್ದ ಕೀಲು ನೋವು ವಯಸ್ಸಾದವರಲ್ಲಿ ಮಾತ್ರ ಕಾಣುತ್ತಿತ್ತು. ಈಗ 35–45 ವರ್ಷದೊಳಗಿನ ಯುವ ವಯಸ್ಕರಲ್ಲೂ ಹೆಚ್ಚಾಗಿ ಕಂಡುಬರುತ್ತಿದೆ.

ಊತದೊಂದಿಗೆ ಸಂಧಿವಾತ 25–45 ವರ್ಷ ವಯಸ್ಸಿನ ವಯಸ್ಕರಲ್ಲಿ ಕಂಡುಬರುತ್ತಿದೆ. ವಿಶೇಷವಾಗಿ 50 ವರ್ಷಕ್ಕಿಂತ ಮೇಲಟ ಮಹಿಳೆಯರಲ್ಲಿ ಮೂಳೆ ಸವೆತ ಸಮಸ್ಯೆ ಸಾಮಾನ್ಯವಾಗುತ್ತಿದೆ. ವರದಿಯಾದ ಒಟ್ಟು ಪ್ರಕರಣಗಳಲ್ಲಿ ಆಘಾತ ಮತ್ತು ಆಟ ಆಡುವಾಗ ಉಂಟಾಗುವ ಗಾಯಗಳ ಪಾಲು ಗಣನೀಯವಾಗಿದೆ. ಇದರಲ್ಲಿ ಕೀಲುಗಳ ಒಳಗಿನ ಸ್ನಾಯು ರಜ್ಜು ಹರಿದು ಹೋಗುವುದು 33% ರಷ್ಟು ಸಾಮಾನ್ಯ ಸಮಸ್ಯೆಯಾಗಿದೆ. ನಂತರದ ಸ್ಥಾನದಲ್ಲಿ ಭುಜದ ಸುತ್ತಲಿನ ಸ್ನಾಯುಗಳಿಗೆ ಸಂಬಂಧಿಸಿದ ಪ್ರಕರಣಗಳು ದಾಖಲಾಗುತ್ತಿವೆ. ಕೃತಕ ಬುದ್ಧಿಮತ್ತೆ ಆದಿರಿತ ಇಮೇಜಿಂಗ್ ಉಪಕರಣಗಳಾದ ವರ್ಧಿತ ಸಿಟಿ, ಎಂಆರ್‌ಐ ಮತ್ತು ಎಕ್ಸ್‌ರೇ ವಿಶ್ಲೇಷಣೆಯಂತಹ ಕಾರ್ಯವಿಧಾನಗಳ ಸಹಾಯದಿಂದ ಸಾಮಾನ್ಯ ಮೌಲ್ಯಮಾಪನದಲ್ಲಿ 'ವಾ ಸ್ನಾಯು ರಜ್ಜು ಅಸಹಜತೆಗಳನ್ನು ಪತ್ತೆಹಚ್ಚುವುದು ಈಗ ಸಾಧ್ಯವಾಗಿರುವುದರಿಂದ ವೈದ್ಯರು ಬೇಗ ಚಿಕಿತ್ಸೆ ನೀಡಬಹುದಾಗಿದೆ ಎಂದು ಡಾ. ಸಮರ್ಥ್ ತಿಳಿಸಿದರು. ಈ ಸಮಸ್ಯೆಗಳ ಆರಂಭಿಕ ಲಕ್ಷಣಗಳನ್ನು ಗುರುತಿಸುವುದು, ಅಪಾಯಕಾರಿ ಅಂಶಗಳನ್ನು ಅರ್ಥಮಾಡಿಕೊಳ್ಳುವುದು, ಚಿಕಿತ್ಸಾ ತಂತ್ರಗಳು, ನಿರ್ವಹಣೆಯಲ್ಲಿನ ಇತ್ತೀಚಿನ ಬೆಳವಣಿಗೆಗಳು ಮತ್ತು ಪುನಶ್ಚೇತನದ ಕುರಿತು ಮಾಹಿತಿ ನೀಡಿರು.

# ಕುಕ್ಕುಟ ಉದ್ಯಮಕ್ಕೆ ಬೇಡಿಕೆ: ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ




ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಕುಕ್ಕುಟ ಉದ್ಯಮಕ್ಕೆ ಬಹಳಷ್ಟು ಬೇಡಿಕೆ ಇದ್ದು, ಮಹಿಳೆಯರು ಸರಿಯಾದ ತರಬೇತಿ ಹೊಂದುವ ಮೂಲಕ ಉದ್ಯಮಿಗಳಾಗಬೇಕು ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಹೇಳಿದರು.

ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ರಚಿಸಿರುವ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳ ಮಹಿಳೆಯರಿಗೆ 13 ದಿನಗಳ ಉಚಿತ ಕೋಳಿ ಸಾಕಾಣಿಕೆ ತರಬೇತಿ ಕಾರ್ಯಕ್ರಮವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ತಮ್ಮ ಗ್ರಾಮಗಳಲ್ಲಿ ಕೋಳಿ ಶೆಡ್‌ಗಳನ್ನು ನಿರ್ಮಿಸಲು ಮತ್ತು ಮಹಿಳಾ ಉದ್ಯಮಿಗಳಾಗಲು ಜಿಲ್ಲಾ ಪಂಚಾಯತ್, ಎನ್‌ಆರ್‌ಎಲ್‌ಎಂ ಯೋಜನೆಯ ಸ್ವ–ಸಹಾಯ ಸಂಘದ

ಒಕ್ಕೂಟದ ಮಹಿಳೆಯರಿಗೆ ನೆರವು ನೀಡಲಾಗುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಾರ್ಗದರ್ಶನ ಮಾಡಿದರು.

ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ರಾಜೆಸಾಬ್ ಎಚ್ ಎರಿಮನಿ, ಜಿಪಂ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ, ಉಪನ್ಯಾಸಕರುಗಳಾದ

ಜಡೆಪ್ಪ, ಸಿದ್ದಲಿಂಗಮ್ಮ, ಸಂತೋಷಕುಮಾರ್, ಪರಮೇಶ ಸೇರಿದಂತೆ ಎನ್‌ಆರ್‌ಎಲ್‌ಎಂ ಸಿಬ್ಬಂದಿಗಳು, ಬಳ್ಳಾರಿ ಜಿಲ್ಲೆಯ 70 ಜನ ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆ ಮತ್ತು ಕಾಯ್ದೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ನ.27 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಕ್ಲಸ್ಟರ್ ಅಭಿವೃದ್ಧಿ ಯೋಜನೆ ಅನುಷ್ಠಾನಕ್ಕಾಗಿ ಪ್ರಸ್ತಾವನೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ರಾಷ್ಟ್ರೀಯ ತೋಟಗಾರಿಕೆ ಮಂಡಳಿ ವತಿಯಿಂದ ಕ್ಲಸ್ಟರ್ ಅಭಿವೃದ್ಧಿ ಯೋಜನೆ ಅನುಷ್ಠಾನಕ್ಕಾಗಿ ಪ್ರಸ್ತಾವನೆಗಳಿಗೆ ಆಹ್ವಾನಿಸಲಾಗಿದೆ.

ಬಳ್ಳಾರಿ ಜಿಲ್ಲೆಯಲ್ಲಿ ಒಣಮೆಣಸಿನಕಾಯಿ, ಈರಳ್ಳಿ, ಬಾಳೆ, ದಾಳಿಂಬೆ ಮತ್ತು ಅಂಜೂರ ಬೆಳೆಗಳ ಕ್ಲಸ್ಟರ್ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನ ಮಾಡಲು ಅವಕಾಶವಿದ್ದು, ಅನುಷ್ಠಾನ ಮಾಡಲು ಎಷ್ಟಿಮೆಟಿಂಗ್ ಏಜೆನ್ಸಿಗಳು ಮುಂದೆ ಬಂದಲ್ಲಿ ರೈತರಿಗೆ ಹೆಚ್ಚಿನ ಸಹಾಯಧನ ಮತ್ತು ನೆರವು ಒದಗಿಸಿಕೊಡಲಾಗುತ್ತದೆ.

ಕೇಂದ್ರ ಸರ್ಕಾರದ ರಾಷ್ಟ್ರೀಯ ತೋಟಗಾರಿಕೆ ಮಂಡಳಿಯು (ಎನ್‌ಹೆಚ್‌ಬಿ) ದೇಶದ ಹಣ್ಣು, ತರಕಾರಿ, ಪುಷ್ಪ, ತೋಟದ ಬೆಳೆ ಮತ್ತು ಸಂಬಾರು ಬೆಳೆಗಳ ಸಮಗ್ರ ಅಭಿವೃದ್ಧಿ ಗುರಿ ಹೊಂದಿದ್ದು, ಕ್ಲಸ್ಟರ್ ಡೆವಲಪ್ ಮೆಂಟ್ ಪ್ರೋಗ್ರಾಂ (ಸಿಡಿಪಿ) ಎಂಬ ಹೊಸ ಯೋಜನೆಯನ್ನು ರಾಜ್ಯ ಮಟ್ಟದಲ್ಲಿ ಅನುಷ್ಠಾನ ಮಾಡಲು ಕ್ರಮಕೈಗೊಂಡಿದೆ.

ಈ ಯೋಜನೆಯ ಮುಖ್ಯ ಉದ್ದೇಶ, ಒಂದು ಪ್ರದೇಶದಲ್ಲಿ ಸಾಮಾನ್ಯವಾಗಿ ಬೆಳೆಯಬಹುದಾದ ಬೆಳೆಯನ್ನು ಕ್ಲಸ್ಟರ್ ರೂಪದಲ್ಲಿ ಒಗ್ಗೂಡಿಸಿ ಉತ್ಪಾದನೆ–ಸಂಸ್ಕರಣೆ–ಸಂಗ್ರಹ–ಮಾರುಕಟ್ಟೆ–ರಫ್ತು ಸರಪಳಿಯನ್ನು ಬಲಪಡಿಸುವುದಾಗಿದೆ. ಈ ಕ್ಲಸ್ಟರ್ ಗಳಿಗೆ ಎನ್.ಹೆಚ್.ಬಿ ಯಿಂದ ಹಣಕಾಸು ನೆರವು ನೀಡಲಾಗುವುದು. ರಾಷ್ಟ್ರೀಯ ತೋಟಗಾರಿಕೆ ಬೋರ್ಡ್ (ಎನ್.ಹೆಚ್.ಬಿ) ಸಿ.ಡಿ.ಪಿ ಯನ್ನು ಜಾರಿಗೆ ತರಲು ನೋಡಲ್ ಏಜೆನ್ಸಿಯಾಗಿ ಕಾರ್ಯನಿರ್ವಹಿಸುತ್ತದೆ.

ರಾಜ್ಯ ತೋಟಗಾರಿಕೆ ಮಿಷನ್ ಸಿ.ಡಿ.ಪಿ ಜಾರಿ ಪ್ರಕ್ರಿಯೆಯನ್ನು ಸುಗಮಗೊಳಿಸುವ ಜವಾಬ್ದಾರಿಯಾಗಿದ್ದು, ಇದರ ಪ್ರಮುಖ ಪಾತ್ರವು ಬೆಳೆಯ ಕ್ಲಸ್ಟರ್ ಆಯ್ಕೆ, ಕಾರ್ಯಗತಗೊಳಿಸುವ ಸಂಸ್ಥೆ ಗುರುತಿಸುವುದು (ಐ.ಎ), ಯೋಜನೆಯ ಮೇಲ್ವಿಚಾರಣೆ ಮತ್ತು ತಳಮಟ್ಟದ ಪರಿಶೀಲನೆಯಾಗಿದೆ. ಕ್ಲಸ್ಟರ್ ನಲ್ಲಿನ ಗುರುತಿಸಲಾದ ಪ್ರಮುಖ ಬೆಳೆಯ ವಾರ್ಷಿಕ ಫಾರ್ಮ್ ಗೇಟ್ ಮೌಲ್ಯ (ಎಫ್.ಜಿ.ವಿ) ಕನಿಷ್ಠ 100 ಕೋಟಿ ಇದ್ದೇ ಇರಬೇಕು.

ಕ್ಲಸ್ಟರ್ ನ ಗ್ರಾಮಗಳು ಗರಿಷ್ಠ ಮೂರು ಜಿಲ್ಲೆಗೆ ಮಾತ್ರ ಸೀಮಿತವಾಗಿರಬೇಕು. ಈ ಯೋಜನೆಯನ್ನು ಕಾರ್ಯಗತಗೊಳಿಸುವ ಸಂಸ್ಥೆ (ಇಂಪ್ಲಿಮೆಂಟಿಂಗ್ ಏಜೆನ್ಸಿ) (ಐ.ಎ) ಮೂಲಕ ಪ್ರಸ್ತಾವನೆ ಸಲ್ಲಿಸಿ, ಅನುಮೋದನೆ ಪಡೆದು ಅನುಷ್ಠಾನ ಮಾಡುವುದು ಕಡ್ಡಾಯವಾಗಿದೆ. ಇಂಪ್ಲಿಮೆಂಟಿಂಗ್ ಏಜೆನ್ಸಿಗಳು ಕಾನೂನುಬದ್ದ ಸಂಸ್ಥೆಗಳಾಗಿರಬೇಕು. ಅವು ರೈತ ಉತ್ಪಾದಕ ಮತ್ತು ಅವುಗಳ ಫೆಡರೇಶನ್ ಗಳು, ಸಹಾಕಾರ ಸಂಘಗಳು, ಪಾಲುದಾರಿಕೆ ಫರ್ಮ್‌ಗಳು, ಕಂಪನಿಗಳು ಅಥವಾ ಇವೆಲ್ಲದರ ಸಂಯೋಜನೆ ಸೇರಬಹುದು.

ಇಂಪ್ಲಿಮೆಂಟಿಂಗ್ ಏಜೆನ್ಸಿಯಾಗಲು ಕೆಲವು ಮಾನದಂಡಗಳನ್ನು ನಿಗದಿಪಡಿಸಲಾಗಿದೆ. ಖರ್ಚಿನ ಘಟಕಕ್ಕೆ ಬೇಕಾದ ಈಕ್ವಿಟಿ ಕೊಡುಗೆಗೆ ಸಮಾನವಾದ ಅಥವಾ ಅದಕ್ಕಿಂತ ಹೆಚ್ಚು ನೆಟ್ ವರ್ತ್ ಸಂಸ್ಥೆಯು ಹೊಂದಿರಬೇಕು. ಸಂಸ್ಥೆಯು ಯೋಜನೆಗೆ ಐಎ ಕಾಸ್ಟ್ ಕಂಪೋನೆಂಟ್ ಕನಿಷ್ಠ ಶೇ.20 ಅನ್ನು ಈಕ್ವಿ–ಟಿಯಾಗಿ ಹೂಡಿಕೆ ಮಾಡಿರಬೇಕು.

ಸಂಸ್ಥೆಯು ಕೃಷಿ/ ತೋಟಗಾರಿಕೆ ಕ್ಷೇತ್ರಗಳಲ್ಲಿ ಅನುಭವ ಹೊಂದಿರಬೇಕು ಮತ್ತು ಅದು ದಾಖಲೆ ಆಧಾರಿತವಾಗಿರಬೇಕು. ಸಂಸ್ಥೆಯ ವಾರ್ಷಿಕ ಒಟ್ಟು ಆದಾಯ ಯೋಜನೆಯ ಒಟ್ಟು ವೆಚ್ಚಕ್ಕೆ ಸಮಾನವಾಗಿರಬೇಕು. ಐಎ ಕಾಸ್ಟ್ ಕಂಪೋನೆಂಟ್ ಕನಿಷ್ಠ ಶೇ.20 ಕ್ಕೆ ಸಮಾನವಾದ ಸಾಲವನ್ನು ಆರ್‌ಬಿಐ ಅನುಮೋದಿತ ವ್ಯವಹಾರಿಕ ಬ್ಯಾಂಕ್ ಅಥವಾ ಹಣಕಾಸು ಸಂಸ್ಥೆಯಿಂದ ಪಡೆಯಬೇಕು. ಈ ಯೋಜನೆಯ ಪೂರ್ಣ ಅನುಷ್ಠಾನ ಇಪ್ಲಿಮೆಂಟಿಂಗ್ ಎಜೆನ್ಸಿಯದ್ದಾಗಿದ್ದು, ಯೋಜನೆಯ ವ್ಯಾಪ್ತಿ, ಗುರಿಗಳು, ವಿಧಾನ ಮತ್ತು ಹಣಕಾಸು ಯೋಜನೆ ಒಳಗೊಂಡ ವಿಸ್ತೃತ ಯೋಜನಾ ವರದಿ (ಡಿ.ಪಿ.ಆರ್) ತಯಾರಿಸಿ, ಅನುಮೋದನೆ ಪಡೆಯುವುದರಿಂದ ಅನುಷ್ಠಾನದವರೆಗಿನ ಎಲ್ಲಾ ಜವಾಬ್ದಾರಿಯನ್ನು ನಿರ್ವಹಿಸಬೇಕು.

ಇಪ್ಲಿಮೆಂಟಿಂಗ್ ಎಜೆನ್ಸಿಗೆ ನೀಡಲಾಗುವ ಗರಿಷ್ಠ ಹಣಕಾಸು ಸಹಾಯವು ಕ್ಲಸ್ಟರ್ ನ ಮುಖ್ಯ ಬೆಳೆಯ ವಾರ್ಷಿಕ ಫಾರ್ಮ್ ಗೇಟ್ (ಎಫ್.ಜಿ.ವಿ) ಮೌಲ್ಯದ ಶೇ.25 ವರೆಗೆ ಇರಲಿದೆ. ರೈತರಿಗೆ ನೀಡುವ ನೆರವು ಐಎ ಗೆ ನೀಡುವ ನೆರವಿಗೆ ಹೆಚ್ಚುವರಿಯಾಗಿ ನೀಡಲಾಗುತ್ತದೆ.

ರೈತರ ಹಾಗೂ ಐಎ ಗೆ ಇಬ್ಬರಿಗೂ ನೀಡಲಾಗುವ ಹಣಕಾಸು ಸಹಾಯವು ಮಾರ್ಗಸೂಚಿಗಳಲ್ಲಿ ನೀಡಿರುವ ಘಟಕ ವೆಚ್ಚದ ಪ್ರಕಾರವಾಗಿರುತ್ತದೆ. ಐಎ ಗೆ ನೀಡುವ ಹಣಕಾಸು ನೆರವು ಕ್ರೇಡಿಟ್ ಲಿಂಕ್ ಆಗಿರುತ್ತದೆ.

ರೈತ ಘಟಕದ ಸಹಾಯಧನವನ್ನು ಸಿಡಿಪಿ ಸುರಕ್ಷಾ ಪೋರ್ಟಲ್ ಮೂಲಕ ಡಿಬಿಟಿ ಮಾದರಿಯಲ್ಲಿ ನೇರವಾಗಿ ಜಮಾ ಮಾಡಲಾಗುವುದು. ಯೋಜನೆಯ ಅನುಷ್ಠಾನದ ಅವಧಿ ಗರಿಷ್ಠ 3 ವರ್ಷದಾಗಿದ್ದು, ಇಂಪ್ಲಿಮೆಂಟಿಂಗ್ ಏಜೆನ್ಸಿ ಯೋಜನೆಯನ್ನು ಸಂಪೂರ್ಣವಾಗಿ ಮತ್ತು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಿದರೆ ಶೇ.5 ಹೆಚ್ಚುವರಿ ಪ್ರೋತ್ಸಾಹ ಧನ ದೊರೆಯಲಿದೆ. ಹೊಸ ತಂತ್ರಜ್ಞಾನ, ನವೀನ ಚಟುವಟಿಕೆಗಳಿಗೆ ಹೆಚ್ಚಿನ ನೆರವು ನೀಡಲಾಗುವುದು. ಎಲ್ಲಾ ಅನುದಾನಗಳನ್ನು ಸಿಡಿಪಿ ಸುರಕ್ಷಾ ಪೋರ್ಟಲ್ ಮೂಲಕ ಡಿಜಿಟಲ್ ರೀತಿಯಲ್ಲಿ ಬಿಡುಗಡೆಗೊಳಿಸಲಾಗುವುದು ಎಂದು ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ ಕೋಟಿಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚ ಗ್ಯಾರಂಟಿ ಯೋಜನೆ ಪ್ರಾಮಾಣಿಕ ಅನುಷ್ಠಾನ: ಶ್ರೀನಿವಾಸ್ ರಾವ್




ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ಬಡವರ ಪರ ಸರ್ಕಾರ ಎಂದು ನಿರೂಪಿಸಿದೆ ಎಂದು ಕಂಪ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ್ ರಾವ್ ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ 2025–26ನೇ ಸಾಲಿನ ಕ್ಷೇತ್ರ ಪ್ರಚಾರ ಕಾರ್ಯಕ್ರಮದಡಿ 10 ದಿನಗಳ ಕಾಲ ಜಿಲ್ಲೆಯ ವಿವಿಧ ತಾಲ್ಲೂಕುಗಳ ಗ್ರಾಪಂ ಮಟ್ಟದಲ್ಲಿ ಆಯೋಜಿಸಲಾಗುತ್ತಿರುವ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಇತರೆ ಅಭಿವೃದ್ಧಿ ಯೋಜನೆಗಳ ಕುರಿತ ಬೀದಿ ನಾಟಕ ಪ್ರದರ್ಶನಕ್ಕೆ ಕಂಪ್ಲಿ ತಾಲ್ಲೂಕಿನ ಸಣಾಪುರ ಮತ್ತು ಇಟಗಿ ಗ್ರಾಪಂ ಗಳಲ್ಲಿ ಗುರುವಾರ ಚಾಲನೆ ನೀಡಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಿಂದ ಜನರ ಜೀವನಮಟ್ಟ ಸುಧಾರಣೆಗೊಳ್ಳುತ್ತಿದೆ. ರಾಜ್ಯ ಸರ್ಕಾರವು ಬಡವರ ಪರ ಕಾಳಜಿ ಹೊಂದಿದ್ದು, ಜನರಿಗೆ ಅನುಕೂಲವಾಗುವಂತಹ ಯೋಜನೆಗಳನ್ನೇ ಜಾರಿಗೊಳಿಸಿದೆ. ಅದರ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೂ ಆದ್ಯತೆ ನೀಡಿದೆ ಎಂದು ತಿಳಿಸಿದರು.

ಶಕ್ತಿ ಯೋಜನೆಯಿಂದ ಬಸ್ ಗಳಲ್ಲಿ ಮಹಿಳೆಯರು, ಹೆಣ್ಣು ಮಕ್ಕಳು ಉಚಿತವಾಗಿ ಸಂಚರಿಸುತ್ತಿದ್ದಾರೆ. ಗೃಹಲಕ್ಷ್ಮಿ ಯೋಜನೆಯ 2000 ರೂ. ಹಣದಿಂದ ಮನೆಯ ಯಜಮಾನಿಯರು ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ. ಗೃಹಜ್ಯೋತಿಯಡಿ ನೋಂದಾಯಿಸಿಕೊಂಡ ಎಲ್ಲಾ ಮನೆಗಳಿಗೆ ಶೂನ್ಯಮೊತ್ತದ ಬಿಲ್ ಬರುತ್ತಿದೆ. ಅನ್ನಭಾಗ್ಯ ಯೋಜನೆಯಡಿ 10 ಕೆ.ಜಿ ಅಕ್ಕಿ ವಿತರಿಸಲಾಗುತ್ತಿದೆ. ನಿರುದ್ಯೋಗ ಯುವಕ–ಯುವತಿಯರಿಗೆ ಯುವನಿಧಿ ಯೋಜನೆಯಡಿ ಸಹಾಯಧನ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ನಂತರ ಚಿಗುರು ಕಲಾತಂಡದ ಹುಲುಗಪ್ಪ ಎಸ್.ಎಂ ನೇತೃತ್ವದಲ್ಲಿ ಎಚ್.ರಮೇಶ್, ಆನಂದ.ಬಿ, ಎರ್ರಿಸ್ವಾಮಿ, ವೆಂಕಟೇಶ್.ಎಂ., ನವೀನ್.ಎಂ., ಹೆಚ್.ಗಂಗಮ್ಮ, ರುತಮ್ಮ ಸೇರಿದಂತೆ ಕಲಾವಿದರು ಒಳಗೊಂಡು ಬೀದಿ ನಾಟಕ ಕಾರ್ಯಕ್ರಮದ ಮೂಲಕ ಪಂಚ ಗ್ಯಾರಂಟಿ

ಯೋಜನೆಗಳು ಮತ್ತು ಇತರೆ ಅಭಿವೃದ್ಧಿ ಯೋಜನಗೆಳ ಕುರಿತು ಅತ್ಯಂತ ಆಕರ್ಷಣೀಯವಾಗಿ ಬೀದಿ ನಾಟಕ ಪ್ರದರ್ಶಿಸಿ, ಜನರ ಚಪ್ಪಾಳೆ ಗಿಟ್ಟಿಸಿಕೊಂಡರು.

ಈ ಸಂದರ್ಭದಲ್ಲಿ ಸಣಾಪುರ ಗ್ರಾಮ ಪಂಚಾಯತಿ ಅಧ್ಯಕ್ಷ ರಮಣಯ್ಯ, ಉಪಾಧ್ಯಕ್ಷರಾದ ಸಾವಿತ್ರಿ, ಸದಸ್ಯರುಗಳಾದ ವೀರನಗೌಡ ರೆಡ್ಡಿ, ಹೆಚ್.ಹೊನ್ನೂರಮ್ಮ, ಹುಲಿಗೆಮ್ಮ, ಮರಿಯಮ್ಮ, ಬಸವರಾಜ್ ಕುರುಗೋಡು, ಕೆ.ಭಾರತಿ, ನಾಗಮ್ಮ ಆರ್.ಕೆ., ಗವಿಸಿದ್ದಪ್ಪ, ಜ್ಯೋತಿ, ರತ್ನಮ್ಮ, ಸಣ್ಣ ಬಾಲೆ ಸಾಬ್, ಗೂಳ್ಯಮ್ಮ, ಈರಮ್ಮ ವಡ್ಡರ್, ಫಕೀರಪ್ಪ.ಕೆ, ಭಾಸ್ಕರ್, ಲಕ್ಷ್ಮಿ, ಲಕ್ಷ್ಮಿದೇವಿ, ವೆಂಕಟೇಶ್.ಜಿ., ನೆಟ್ಕಲ್ಲಪ್ಪ, ಕೆ.ಸಂಧ್ಯಾ, ಸಾವಿತ್ರಿ ಸೇರಿದಂತೆ ಗ್ರಾಮದ ಹಿರಿಯರು, ಸಾರ್ವಜನಿಕರು ಇದ್ದರು.

# ತರಕಾರಿ ಬೀಜ ಮಾರಾಟ ವಿತರಕರಿಗೆ ಪರವಾನಿಗೆ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ತರಕಾರಿ ಬೀಜಗಳನ್ನು ಮಾರಾಟ ಮಾಡುತ್ತಿರುವ ವಿತರಕರಿಗೆ (ಡಿಲರ್ಸ್) ತರಕಾರಿ ಬೀಜ ಮಾರಾಟ ಪರವಾನಿಗೆ ಕಡ್ಡಾಯವಾಗಿದ್ದು, ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಆನ್ ಲೈನ್ ಸೇವಾಸಿಂಧು ಮೂಲಕ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು ಎಂದು ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ ಕೋಟಿಮನಿ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ತರಕಾರಿ ಮತ್ತು ಹೂ ಬೀಜಗಳನ್ನು ಮಾರಾಟ ಮಾಡುತ್ತಿರುವ ವಿತರಕರು ಮತ್ತು ಡೀಲರ್ಸ್ ತೋಟಗಾರಿಕೆ ಇಲಾಖೆಯಿಂದ ಬೀಜ ಮಾರಾಟ ಪರವಾನಿಗೆ ಪ್ರಮಾಣ ಪತ್ರ ಪಡೆಯದೇ ಬೀಜಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಪರಿಶೀಲನೆ ಸಮಯದಲ್ಲಿ ಕಂಡುಬಂದಲ್ಲಿ ಅಂತಹ ವಿತರಕರ, ಡೀಲರ್ಸ್, ಮಾಲೀಕರ ಪರವಾನಿಗೆಯನ್ನು ಕಪ್ಪುಪಟ್ಟಿಗೆ ಸೇರಿಸಿ ಹಾಗೂ ಬೀಜ ನಿಯಂತ್ರಣ ಕಾಯ್ದೆ ಪ್ರಕಾರ ಕಾನೂನು ರೀತಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ತೋಟಗಾರಿಕೆ ಇಲಾಖೆ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನರ ಕುಂದುಕೊರತೆ ಸಭೆ: ಬಾಕಿ ಯುಡಿಐಡಿ ಕಾರ್ಡ್ ವಿತರಣೆಗೆ ಡಿಸಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಜಿಲ್ಲೆಯಲ್ಲಿ ವಿಕಲಚೇತನರಿಗೆ ನೀಡಲಾಗುತ್ತಿರುವ ಯುಡಿಐಡಿ ಕಾರ್ಡ ವಿತರಣೆಯಲ್ಲಿ ಬಾಕಿ ಉಳಿದ 936 ಕಾರ್ಡಗಳ ವಿತರಣೆಗೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ವಿಕಲಚೇತನರ ಕುಂದುಕೊರತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈಗಾಗಲೇ 31209 ಯುಡಿಐಡಿ ಕಾರ್ಡಗಳು ಆನ್‌ಲೈನ್‌ನಲ್ಲಿ ಜನರೇಟ ಆಗಿದ್ದು, ಈ ಪೈಕಿ 936 ಮಾತ್ರ ಬಾಕಿ ಉಳಿದಿವೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಹಾಗೂ ಆಯಾ ತಾಲೂಕಾ ಎಂ.ಆರ್. ಡಬ್ಲ್ಯೂ,ಯು.ಆರ್.ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂಗಳು ಕ್ರಮವಹಿಸಿ ಕಾರ್ಡ ವಿತರಣೆಗೆ ಕ್ರಮವಹಿಸಲು ಸೂಚಿಸಿದರು.

ಅರ್ಹ ವಿಕಲಚೇತನರಿಗೆ ಯುಡಿಐಡಿ ಕಾರ್ಡಗಳನ್ನು ವಿತರಣೆ ಮಾಡಿದಾಗ ಮಾತ್ರ ಸರಕಾರದ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗಲಿದೆ. ತಾಂತ್ರಿಕ ದೋಷಗಳು ಇದ್ದಲ್ಲಿ ಸರಿಪಡಿಸಿ ಕಾರ್ಡ ವಿತರಣೆ ಕ್ರಮವಹಿಸಲು ತಿಳಿಸಿದರು. ತಾಲೂಕಾ ಹಂತದಲ್ಲಿ ತಹಶೀಲ್ದಾರರು ತಮ್ಮ ವ್ಯಾಪ್ತಿಯಲ್ಲಿ ಯುಡಿಐಡಿ ಕಾರ್ಡ ವಿತರಣೆಯಲ್ಲಿ ಬಾಕಿ ಉಳಿದ ಮಾಹಿತಿ ಪಡೆದುಕೊಂಡು ವಿತರಣೆಗೆ ಕ್ರಮವಹಿಸಬೇಕು. ಅಲ್ಲದೇ ಆಯಾ ಉಪವಿಭಾಗಾಧಿಕಾರಿಗಳು ಸಹ ವಿವಿಧ ಸರಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ ವಿಕಲಚೇತನರಿಗೆ ಆದ್ಯತೆಯ ಮೇರೆಗೆ ಚಿಕಿತ್ಸೆಗೆ ಕ್ರಮವಹಿಸಲು ಸೂಚಿಸಲು ಸಂಗಪ್ಪ ತಿಳಿಸಿದರು.



ಗ್ರಾಮ ಪಂಚಾಯತಿ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಲ್ಲಿ ಕ್ರೀಯಾ ಯೋಜನೆ ರೂಪಿಸುವಲ್ಲಿ ಯು.ಆರ್.ಡಬ್ಲ್ಯೂ, ಎಂ.ಆರ್.ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂಗಳ ಗಣನೆಗೆ ತೆಗೆದುಕೊಳ್ಳಬೇಕು. ಜಿಲ್ಲೆಯ ಶಾಲಾ ಕಾಲೇಜುಗಳಲ್ಲಿ ರ್‍ಯಾಂಪ್ ವ್ಯವಸ್ಥೆ, ಆಧಾರ ಕಾರ್ಡ, ರೇಷನ್ ಕಾರ್ಡ ತಿದ್ದುಪಡಿ ಸೇರಿದಂತೆ ನವನಗರದಲ್ಲಿರುವ ವಿಕಲಚೇತನರ ಸಮುದಾಯ ಭವನಕ್ಕೆ ಮೂಲಭೂತ ಸೌಲಭ್ಯ ಒದಗಿಸುವ ಅಗತ್ಯವಿದೆ ಎಂದು ವಿಕಲಚೇತನ

ಸಂಘಟನೆಯ ಪ್ರತಿನಿಧಿಗಳು ಸಭೆಗೆ ತಿಳಿಸಿದರು. ಈ ಬಗ್ಗೆ ಮಾಹಿತಿ ಪಡೆದುಕೊಂಡು ಸೂಕ್ತ ಕ್ರಮವಹಿಸಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವಿಕಲಚೇತನರ ಬೇಡಿಕೆಯಂತೆ ಪಡಿತರ ಧಾನ್ಯ ವಿತರಣೆಯಲ್ಲಿ ವಿಕಲಚೇತನರಿಗೆ ಆದ್ಯತೆ ನೀಡುವಂತೆ ಸಭೆಯಲ್ಲಿದ್ದ ಆಹಾರ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು. ಅದರಂತೆ ಸರಕಾರಿ ಆಸ್ಪತ್ರೆ, ಬ್ಯಾಂಕ್‌ಗಳಲ್ಲಿ ಪ್ರತ್ಯೇಕ ಸರದಿ ಸಾಲಿನ ವ್ಯವಸ್ಥೆ ಮಾಡಲು ಸಹ ಕ್ರಮವಹಿಸಲಾಗುವುದು. ವಿಕಲಚೇತನರಿಗೆ ವಿವಿಧ ಇಲಾಖೆಯ ಅನುದಾನದಲ್ಲಿ ಶೇ.5 ರಷ್ಟು ವಿಕಲಚೇತನರಿಗೆ ಮೀಸಲಿರಿಸಿ ಅರ್ಹ ಫಲಾನುಭವಿಗಳಿಗೆ ಅಗತ್ಯತೆಗೆ ಅನುಗುಣವಾಗಿ ಸಾಧನ ಸಲಕರಣೆಗಳ ವಿತರಣೆ ಕ್ರಮವಹಿಸಲು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಎಸ್.ಎಂ.ಕಾಂಬಳೆ, ನಗರಾಭಿವೃದ್ಧಿ ಕೋಶದ

ಯೋಜನಾ ನಿರ್ದೇಶಕಿ ರೇಣುಕಾ ಎಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಗಿರಿಜಾ ಪಾಟೀಲ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಸ್ತುವಾರಿ ಸಚಿವ ತಿಮ್ಮಾಪೂರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪೂರ ನವೆಂಬರ 21ರಿಂದ 26ವರೆಗೆ ಬಾಗಲಕೋಟೆ ಜಿಲ್ಲಾ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ನವೆಂಬರ 21 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ಮುಧೋಳ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಹೂಡಲಿದ್ದಾರೆ. 22 ರಂದು ಬೆಳಿಗ್ಗೆ 9 ಗಂಟೆಗೆ ಮುಧೋಳದಲ್ಲಿ ಜರುಗಲಿರುವ ರಾಜ್ಯ ಮಟ್ಟದ ಸೈಕ್ಲಿಂಗ್ ಕಾರ್ಯಕ್ರಮ, 10 ಗಂಟೆಗೆ ತಹಶೀಲ್ದಾರ ಕಚೇರಿಯಲ್ಲಿ ಎಡಿಎಲ್‌ಆರ್, ಡಿಡಿಎಲ್‌ಆರ್, ಉಪವಿಭಾಗಾಧಿಕಾರಿಗಳು, ತಹಶೀಲ್ದಾರ, ಟೌನ್ ಪ್ಲಾನಿಂಗ್ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ನಂತರ ಬಾಗಲಕೋಟೆಗೆ ಪ್ರಯಾಣ ಬೆಳೆಸಿ ನವನಗರದ ಸೆಕ್ಟರ ನಂ.25ರಲ್ಲಿರುವ ಮೇದಾರ ಸಮಾಜದ ನಿವೇಶನದಲ್ಲಿ ಹಮ್ಮಿಕೊಂಡ ಶಿವಶರಣ ಮೇದಾರ ಕೇತಯ್ಯನವರ 895ನೇ ರಾಜ್ಯ ಮಟ್ಟದ ಜಯಂತೋತ್ಸವ ಹಾಗೂ ಬೃಹತ್ ಸಮಾವೇಶದಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ಗಂಟೆಗೆ ಮುಧೋಳಕ್ಕೆ ತೆರಳಿ ಸ್ಥಳೀಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಾಸ್ತವ್ಯ ಮಾಡಲಿದ್ದಾರೆ. 23 ರಂದು ಮುಧೋಳ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. 24 ರಂದು ಬೆಳಿಗ್ಗೆ 10 ಗಂಟೆಗೆ ಮುಧೋಳ ತಹಶೀಲ್ದಾರ ಕಚೇರಿಯಲ್ಲಿ ಬಗರ ಹುಕುಂ ಸಭೆಯಲ್ಲಿ ಪಾಲ್ಗೊಂಡು ತಾಲೂಕಾ ಪಂಚಾಯತ ಸಭಾಭವನದಲ್ಲಿ ತಾ.ಪಂ ಕೆಡಿಪಿ ಸಭೆಯಲ್ಲಿ ಭಾಗವಹಿಸುವರು.

25 ರಂದು ಬೆಳಿಗ್ಗೆ 9.30ಕ್ಕೆ ಮುಧೋಳದಿಂದ ಬಾಗಲಕೋಟೆಗೆ ಪ್ರಯಾಣ ಬೆಳೆಸಿದ ಸಚಿವರು ಬೆ.10.30ಕ್ಕೆ ಜಿ.ಪಂ ನೂತನ ಸಭಾಭವನದಲ್ಲಿ ಜರಗುವ ಜಿ.ಪಂ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಭಾಗವಹಿಸಿ, ಬಾಗಲಕೋಟೆಯಲ್ಲಿ ವಾಸ್ತವ್ಯ ಹೂಡಲಿದ್ದಾರೆ.

26 ರಂದು ಬೆಳಿಗ್ಗೆ 9 ಗಂಟೆಗೆ ವಿಜಯಪುರಕ್ಕೆ ತೆರಳಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಂತರ 10.30ಕ್ಕೆ ಬಾಗಲಕೋಟೆಗೆ ಆಗಮಿಸಲಿದ್ದಾರೆ. ಬಾಗಲಕೋಟೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಆರ್‌ಬಿಸಿ, ಅರಣ್ಯ, ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ, ಮಧ್ಯಾಹ್ನ 12.30ಕ್ಕೆ ಚಾಲುಕ್ಯ ಉತ್ಸವ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಬಾಗಲಕೋಟೆಯಲ್ಲಿ ವಾಸ್ತವ್ಯ ಮಾಡಲಿದ್ದಾರೆಂದು ಪ್ರಕಟಣೆ ತಿಳಿಸಿದೆ.

# ವಿದ್ಯಾರ್ಥಿಗಳ ಜೀವನದಲ್ಲಿ ಪೋಷಕರ ಪಾತ್ರ ಮುಖ್ಯ: ಮಹೇಶ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.20– ವಿದ್ಯಾರ್ಥಿಗಳ ಜೀವನ ಹಾಗೂ ಅವರ ಸಾಧನೆಯಲ್ಲಿ ಪೋಷಕರ ಪಾತ್ರಬಹು ಮುಖ್ಯವಾದದ್ದು ಎಂದು ಧಾರವಾಡದ ವಿಸ್ತಾರ ಜಿಂದಗಿಯ ಹ್ಯೂಮನ್ ಮೈಂಡ್‌ಸೆಟ್ ಕೋಚ್ ಮಹೇಶ ಮಾಶಾಳ ಹೇಳಿದರು.

ನಗರದ ಬಿ.ವಿ.ವಿ ಸಂಘದ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ (ಬಿಮ್ಸ್) 1ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಓರಿಯಂಟೇಶನ್ ಪ್ರೊಗ್ರಾಮ್‌ನಲ್ಲಿ ಮುಖ್ಯ ಉಪನ್ಯಾಸ ನೀಡಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಸಮಯ, ಹಣ ಮತ್ತು ಸ್ವಾತಂತ್ರ್ಯ ನೀಡುವುದರಲ್ಲಿ ಪೋಷಕರು ತಮ್ಮದೇ ಆದ ಬಹುಮುಖ್ಯ ಪಾತ್ರವನ್ನು ವಹಿಸುತ್ತಿದ್ದಾರೆ. ಪ್ರತಿಯೊಬ್ಬ ವಿದ್ಯಾರ್ಥಿಯು ತನ್ನ ಶೈಕ್ಷಣಿಕ ಜೀವನದಲ್ಲಿ ಪಠ್ಯಕ್ರಮವನ್ನು ಅರ್ಥಮಾಡಿಕೊಳ್ಳುವುದರ ಜೊತೆಗೆ, ತಮ್ಮ ಪೋಷಕರ ಹಾಗೂ ಪಾಲಕರ ಪಾತ್ರವನ್ನು ಅರಿತುಕೊಳ್ಳುವುದು ಬಹು ಮುಖ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜು ಆಡಳಿತ ಮಂಡಳಿ ಪದನಿಮಿತ್ತ ಅಧಿಕಾರಿಗಳು ಪ್ರಾಚಾರ್ಯ ಡಾ॥ ಎಸ್.ಎಂ ಗಾಂವಕಾರ್ ಮಾತನಾಡಿ, ಹೊಸದಾಗಿ ಎಂ.ಬಿ.ಎ ಕೋರ್ಸ್‌ಗೆ ಪ್ರವೇಶಾತಿ ಪಡೆದ 1ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕ್ಷೇತ್ರದಲ್ಲಿ ಬಿ.ವಿ.ವಿ ಸಂಘದ ಹಾಗೂ ಬಿಮ್ಸ್ ಮಹಾವಿದ್ಯಾಲದ ಸೇವಾ ಮನೋಭಾವನೆಯನ್ನು ವಿವರಿಸುತ್ತಾ ವಿದ್ಯಾರ್ಥಿಗಳಿಗೆ ತಮ್ಮ ಶೈಕ್ಷಣಿಕ ಪ್ರಯಾಣಕ್ಕೆ ಅಭಿನಂದನೆ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ನಿರ್ದೇಶಕರಾದ ಡಾ.ಪ್ರಕಾಶ ವಡವಡಗಿ ಮಾತನಾಡಿ, ಬಿಮ್ಸ್



ಮಹಾವಿದ್ಯಾಲಯವು ನಿರ್ವಹಣ ಕ್ಷೇತ್ರಕ್ಕೆ ಸಂಬಂಧಿಸಿದ ಗುಣಮಟ್ಟದ ಶಿಕ್ಷಣವನ್ನು ನೀಡುವುದಲ್ಲಿ ತನ್ನದೇ ಆದ ಮೈಲುಗಲ್ಲನ್ನು ಸಾಧಿಸಿದ್ದು, ವಿದ್ಯಾರ್ಥಿಗಳಿಗೆ ಹಲವಾರು ಕೌಶಲ್ಯಗಳನ್ನು ಕಲಿಸುವುದಕ್ಕೆ ಮಹಾವಿದ್ಯಾಲಯದಲ್ಲಿ ಇರುವ ಅನೇಕ ಅತ್ಯುತ್ತಮ ಸೌಕರ್ಯಗಳ ಬಗ್ಗೆ ವಿವರಿಸುತ್ತ, ಅವುಗಳನ್ನು ಸರಿಯಾಗಿ ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಮಹಾವಿದ್ಯಾಲಯದ ಬೋಧಕ–ಭೋಧಕೇತರ ಸಿಬ್ಬಂದಿಗಳು, 3ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಮರ್ಥ ಪಟ್ಟಣಶೆಟ್ಟಿ ಹಾಗೂ ವೈಶ್ಣವಿ ದೇಸಾಯಿ ನಿರೂಪಿಸಿದರು, ಡಾ.ಅಮರೇಶ ಚರಂತಿಮಠ, ಡಾ.ಪವನ್ ಬೆನಕಟ್ಟಿ ಹಾಗೂ ಪ್ರೊ.ಸಂತೋಷಕುಮಾರ ಪರಿಚಯಿಸಿದರು.

ಪ್ರೊ.ಸೀಮಾ ರೊಡ್ಡಣ್ಣರವರ ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಾಗೂ ಸ್ವಾತಿ ಮದರಕರ್ ವಂದಿಸಿದರು.

# ಮಂಗಲ ಭವನ ನಿರ್ಮಾಣಕ್ಕೆ ಭೂಮಿ ದಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.20–ತಾಲೂಕಿನ ಹಳ್ಳೂರ ಗ್ರಾಮದ ಪ್ರಸಿದ್ಧ ಬಸವೇಶ್ವರ ದೇವಸ್ಥಾನದ ಮಂಗಲ ಭವನ ನಿರ್ಮಾಣಕ್ಕೆ ಅದೇ ಗ್ರಾಮದ ರಾಮನಗೌಡ ಪಾಟೀಲ 6 ಗುಂಟೆ ಜಮೀನು ದಾನ ಮಾಡಿದ್ದಾರೆ.

ಜಮೀನು ದಾನ ನೀಡಿದ ರಾಮನಗೌಡ ಪಾಟೀಲ ದಂಪತಿಗಳನ್ನು ದೇವಸ್ಥಾನದಲ್ಲಿ ಬಿಲ್ ಕೆರೂರ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗೇಶ್ವರ ಸ್ವಾಮೀಜಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಪಾಟೀಲರ ಪುತ್ರರಾದ ಚಂದ್ರಶೇಖರಗೌಡ, ಸುರೇಶಗೌಡ, ಗೌರಮ್ಮ, ಲೀಲಾ, ಪಲ್ಲವಿ ಮತ್ತು ದೇವಸ್ಥಾನ ಸಮಿತಿ ಅಧ್ಯಕ್ಷ ಮಹಾಂತೇಶ ಮನಿನಾಗರ, ಸದಸ್ಯರಾದ ವಿನೋದ ಮೇಟಿ, ಬಸವರಾಜ ಅಥಣಿ, ದ್ಯಾವಪ್ಪ ಮೇಟಿ, ಮುದಿಗೌಡ ಕಿರಸೂರ, ಮಧ್ವರಾವ್ ಕುಲಕರ್ಣಿ, ಹಳ್ಳೂರಪ್ಪ ಮಾಗಿ, ಅಯ್ಯನಗೌಡ ಪೊಲೀಸಗೌಡ್ರ ಹಾಗೂ ಶಂಕರಗೌಡ ಅಮರಪ್ಪಗೌಡರ ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** 2025–26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮಾಜಿ ದೇವದಾಸಿ ಪುನರ್ವಸತಿ, ಚೇತನ ಮತ್ತು ಉದ್ಯೋಗಿನಿ ಹಾಗೂ ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆ ನವೆಂಬರ್ 15 ರಿಂದ ಪ್ರಾರಂಭವಾಗಿದ್ದು, ಡಿಸೆಂಬರ 15ರವರಿಗೆ ನಡೆಯಲಿದೆ. ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು. 2023–24 ಮತ್ತು 2024–25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳದವರು ಮತ್ತೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ,

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬಾಗಲಕೋಟ ತಾಲೂಕು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ನೇರಡಗಂ ಶ್ರೀಮಠದಲ್ಲಿ ಪ್ರಸಾದ ನಿಲಯ ಉದ್ಘಾಟನೆ | ಶಾಸಕ ಕಂದಕೂರ ಆಶಯ

ಕರ್ನಾಟಕ ಮತ್ತು ತೆಲಂಗಾಣ ಉಭಯ ರಾಜ್ಯಗಳ ಗಡಿಭಾಗದ ಆಧ್ಯಾತ್ಮಿಕ ಮತ್ತು ಧಾರ್ಮಿಕ ಕೇಂದ್ರವಾದ ನೇರಡಗಂ ಶ್ರೀಮಠದಲ್ಲಿ ಅನ್ನಪ್ರಸಾದ ಕಾರ್ಯ ನಿರಂತರವಾಗಿ ಸಾಗಲಿ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರು ಆಶಯ ವ್ಯಕ್ತಪಡಿಸಿದರು.ಸಮೀಪದ ನೇರಡಗಂ ಪಶ್ಚಿಮಾದ್ರಿ ಸಂಸ್ಥಾನ ವಿರಕ್ತಮಠದಲ್ಲಿ ಲಿಂಗೈಕ್ಯ ನಾಗನಗೌಡ ಕಂದಕೂರ ಅವರ ಸ್ಮರಣಾರ್ಥವಾಗಿ ಅವರ ಕುಟುಂಬದಿಂದ ನಿರ್ಮಾಣ ಮಾಡಲಾದ ಶ್ರೀ ಚೋಳೇಂದ್ರಸ್ವಾಮಿ ಪ್ರಸಾದ ನಿಲಯವನ್ನು ಬುಧವಾರ ಸಾಯಂಕಾಲ ಉದ್ಘಾಟಿಸಿ ಮಾತನಾಡಿದರು. ಶ್ರೀಮಠದ ಪೀಠಾಧಿಪತಿ ಪಂಚಮ ಸಿದ್ದಲಿಂಗ ಮಹಾಸ್ವಾಮಿಗಳು ಅತ್ಯಂತ ಕ್ರಿಯಾಶೀಲರಾಗಿದ್ದು ಅವರ ಪಟ್ಟಾಧಿಕಾರ ವಹಿಸಿಕೊಂಡ ಕ್ಷಣದಿಂದ ಶ್ರೀಮಠದಲ್ಲಿ ನಾನಾ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿರುವುದು ಗಮನಾರ್ಹ. ಮಠ ಮಂದಿರಗಳು ಕೇವಲ ಆಧ್ಯಾತ್ಮಿಕ ಕ್ಷೇತ್ರಗಳು ಮಾತ್ರವಲ್ಲದೆ ಶೈಕ್ಷಣಿಕ, ಆರೋಗ್ಯ ಮತ್ತು ಸಾಮಾಜಿಕ ಕೇಂದ್ರಗಳಾಗಿವೆ ಎಂಬುದನ್ನು ಸಾಬೀತು ಮಾಡಿದ್ದಾರೆ. ಶ್ರೀಮಠದಲ್ಲಿ ಗೋ ಶಾಲಾ, ಶೈಕ್ಷಣಿಕ ಕೇಂದ್ರ, ಅನಾಥಾಶ್ರಮ ಇದೀಗ ಪ್ರಸಾದ ನಿಲಯ ನಿರ್ಮಾಣ ಮಾಡಿರುವುದು ಶ್ಲಾಘನೀಯ. ಇದಲ್ಲದೆ ದುಂದುವೆಚ್ಚಕ್ಕೆ ಕಡಿವಾಣ ಹಾಕಬೇಕು ಎಂಬ ಸದುದ್ದೇಶ ಹೊಂದಿರುವ ಪೂಜ್ಯರು ಉಚಿತ ಸಾಮೂಹಿಕ



ಅನ್ನಪ್ರಸಾದ ಸೇವೆ ನಿರಂತರವಾಗಿ ನಡೆಯಲಿ...!

ವಿವಾಹಗಳನ್ನು ಏರ್ಪಡಿಸಿ, ನಾಡಿನ ಹೆಸರಾಂತ ಶ್ರೀಗಳ ಸಮ್ಮುಖದಲ್ಲಿ ಅವರ ಆಶೀರ್ವಾದದೊಂದಿಗೆ ನವ ವಧುವರರಿಗೆ ಕಂಕಣಭಾಗ್ಯ ಕಲ್ಪಿಸುತ್ತಿದ್ದಾರೆ. ಆರೋಗ್ಯ ಶಿಬಿರ, ರಕ್ತದಾನ ಶಿಬಿರ ಕಾರ್ತಿಕ ದೀಪೋತ್ಸವ ಹೀಗೆ ಪ್ರತಿಯೊಂದು ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸುತ್ತಿದ್ದಾರೆ ಎಂದರು.

ಶ್ರೀಗಳ ಸೇವಾ ಕಾರ್ಯಕ್ಕೆ ಭಕ್ತರ ಸಹಕಾರ ಅತ್ಯವಶ್ಯಕವಾಗಿರುತ್ತದೆ. ಪ್ರತಿಯೊಬ್ಬರು ಸೇರಿ ಕೈಜೋಡಿಸಿದಾಗ ಮಾತ್ರ ಮಠದ ಕಾರ್ಯಕ್ರಮಗಳು ಯಶಸ್ವಿ ಕಾಣುತ್ತವೆ. ಇದಕ್ಕಾಗಿ ಶ್ರೀಮಠದ ಸೇವಾ ಕಾರ್ಯದಲ್ಲಿ ಪಾಲ್ಗೊಳ್ಳುವ ಎಲ್ಲರಿಗೂ ಆ ಸಿದ್ದಲಿಂಗೇಶ ಒಳಿತನ್ನು ಮಾಡಲಿದ್ದಾರೆ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಶ್ರೀಮಠದ ಪಂಚಮ ಸಿದ್ದಲಿಂಗ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಪೂಜ್ಯರಾದ ಶ್ರೀ ಶಿವಲಿಂಗ ಮಹಾಸ್ವಾಮಿಗಳು ಖೇಳಗಿ, ಶ್ರೀ ಶಂಭುಲಿಂಗ ಮಹಾಸ್ವಾಮಿಗಳು ಕೂಡ್ಲಾ, ಶ್ರೀ ಶಂಭುಲಿಂಗ ಮಹಾಸ್ವಾಮಿಗಳು ಕಲ್ಲೂರು, ಶ್ರೀ ಸಿದ್ದಲಿಂಗ ಸ್ವಾಮಿಗಳು ಕೆಂಪಿನ ಮಠ, ಹೊಸಪೇಟೆ, ಶ್ರೀ ಗುರುಸಿದ್ಧ ಸ್ವಾಮಿಗಳು ಆದೋನಿ, ಪ್ರಭು ಸ್ವಾಮಿಗಳು ಶಂಕರಲಿಂಗ ಮಠ ರಾಂಪೂರ ಸೇರಿದಂತೆ ಮಕ್ತಲ್ ಮತಕ್ಷೇತ್ರದ ಮಾಜಿ ಶಾಸಕ ರಾಮಮೋಹನ ರೆಡ್ಡಿ, ಮಹೇಶರೆಡ್ಡಿ ಮುದ್ನಾಳ, ಯಾದಗಿರಿ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಸುಭಾಷ ಕಟಕಟಿ, ಬಸವರಾಜಪ್ಪಗೌಡ ಗೊಂದಡಗಿ, ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕೋಟಗೇರಾ, ರಾಧಾ ಲಕ್ಷ್ಮಿರೆಡ್ಡಿ, ಬಾಲಕೃಷ್ಣ,

ಬಿ.ಕೊಂಡಯ್ಯ, ಲಕ್ಷ್ಮೀಕಾಂತರೆಡ್ಡಿ, ಕೆ.ವೆಂಕಟರೆಡ್ಡಿ, ಭಗವಂತರೆಡ್ಡಿ ಸಂಗಮಬಂಡ, ಬಿ.ಆರ್. ಎಸ್ ಮುಖಂಡರಾದ ಶಿವರಾಜ ಪಾಟೀಲ ಗುರ್ಜಾಲ ಸೇರಿದಂತೆ ನೂರಾರು ಭಕ್ತರು ಉಪಸ್ಥಿತರಿದ್ದರು.

# ನ.29 ವಿಕಲಚೇತನರ ಕ್ರೀಡಾ ಸ್ಪರ್ಧೆಗಳು

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಡಿಸೆಂಬರ್ 3ರಂದು ನಡೆಯಲಿರುವ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ನವೆಂಬರ 29 ರಂದು ಬೆಳಿಗ್ಗೆ 10 ಗಂಟೆಗೆ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದೆ.

ವಿಕಲಚೇತನರು ಭಾಗವಹಿಸಲು ಯು,ಡಿ,ಐ,ಡಿ ಕಾರ್ಡ ಆಧಾರ್ ಕಾರ್ಡ ಹಾಗೂ ನಗದು ಬಹುಮಾನ ವರ್ಗಾವಣೆಗಾಗಿ ರಾಷ್ಟ್ರೀಕೃತ ಬ್ಯಾಂಕ್ ಪಾಸಬುಕ್ ಝುರಾಕ್ಸ ಕಡ್ಡಾಯವಾಗಿದೆ. ಕಾರ್ಯಕ್ರಮದಲ್ಲಿ ಕಬ್ಬಡಿ, 200 ಮೀ ಓಟ,100 ಮೀ ಓಟ, ವೀಲಚೇರ ರೇಸ್, ಗುಂಡು ಎಸೆತ, ಲೇಮನ–ಸ್ಪೂನ್, ಗಾಯನ, ಗುಂಪು ನೃತ್ಯ ಹಾಗೂ ಮಹಿಳೆಯರಿಗೆ ರಂಗೋಲಿ ಸೇರಿದಂತೆ 13 ವಿಭಾಗಗಳ ಸ್ಪರ್ಧೆಗಳು ವಿವಿಧ ವಯೋಮಾನದ ಗಂಡು–ಹೆಣ್ಣು ಮಕ್ಕಳಿಗಾಗಿ ಆಯೋಜಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿತ ತಾಲೂಕಾ ವಿಕಲಚೇತನರ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಪ್ಲಿ ಪುರಸಭೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ಕಂಪ್ಲಿ ಪುರಸಭೆ ವ್ಯಾಪ್ತಿಯ ಕಂಪ್ಲಿ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿನ ಹಳೆ ಬಸ್ ನಿಲ್ದಾಣದ ಮಳಿಗೆಗಳು, ಬಳ್ಳಾರಿ ರಸ್ತೆಯಲ್ಲಿರುವ ನೆಲ ಮತ್ತು ಒಂದನೇ ಮಹಡಿ ಮಳಿಗೆಗಳು ಶಿಥಿಲಾವಸ್ಥೆಗೊಂಡಿದ್ದು, ವಾಸಕ್ಕೆ ಯೋಗ್ಯವಿಲ್ಲವೆಂದು ಮತ್ತು ಅದೇ ಜಾಗದಲ್ಲಿ ಬಸ್ ಶೆಲ್ಟರ್ ಆಗಿ ನಿರ್ಮಿಸಲು ಮತ್ತು ಈ ಜಾಗವನ್ನು ಕೆಕೆಆರ್‌ಟಿಸಿ ಇಲಾಖೆಗೆ ಹಸ್ತಾಂತರಿಸಲಾಗುತ್ತಿದ್ದು, ಈ ಕುರಿತು ಕಂಪ್ಲಿ ಪಟ್ಟಣದ ಸಾರ್ವಜನಿಕರಿಂದ ಯಾವುದೇ ರೀತಿಯ ತಂಟೆ–ತಕರಾರು ಇದ್ದಲ್ಲಿ 15 ದಿನ ಒಳಗಾಗಿ ಕಂಪ್ಲಿ ಪುರಸಭೆ ಕಚೇರಿಗೆ ಅರ್ಜಿಯ ಮೂಲಕ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರೂರಿನಲ್ಲಿ ಇಂದಿನಿಂದ ಪುರಾಣ ಪ್ರವಚನ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ತಾಲೂಕಿನ ಶಿರೂರ ಪಟ್ಟಣದಲ್ಲಿ ಸಿದ್ದೇಶ್ವರ ಜಾತ್ರಾ ಮಹೋತ್ಸವ ಹಾಗೂ ಲಿಂ.ಸಿದ್ಧಲಿಂಗ ಸ್ವಾಮೀಜಿಗಳ ಪುಣ್ಯಸ್ಮರಣೋತ್ಸವದ ಅಂಗವಾಗಿ ನ.21 ರಿಂದ ಡಿ. 5 ರವರೆಗೆ ಪುರಾಣ ಪ್ರವಚನ ಜರುಗಲಿದೆ.

ಶಿವಯೋಗ ಮಂದಿರದ ಸಂಸ್ಥಾಪಕರಾದ ಹಾನಗಲ್ ಶ್ರೀಗುರುಕುಮಾರ ಮಹಾಸ್ವಾಮಿಗಳ ಜೀವನಾಧಾರಿತ ಪ್ರವಚನ ಪ್ರತಿದಿನ ಸಂಜೆ 7 ಗಂಟೆಯಿಂದ ನಡೆಯುವುದು. ಗುಳೇದಗುಡ್ಡ ಒಪ್ಪತ್ತೇಶ್ವರ ಮಠದ ಅಭಿನವ ಒಪ್ಪತ್ತೇಶ್ವರ.ಸ್ವಾಮೀಜಿ ಪ್ರವಚನ ನಡೆಸಿಕೊಡುವರು.

ನ.21 ರಂದು ಶಿವಯೋಗಾಶ್ರಮದಲ್ಲಿ ಸಂಜೆ 7.30 ಗಂಟೆಗೆ ಪುರಾಣ ಪ್ರವಚನ ಕಾರ್ಯಕ್ರಮದ ಪ್ರಾರಂಭೋತ್ಸವ ಜರುಗಲಿದ್ದು, ಶ್ರೀಮಠದ ಅಭಿನವ ಸಿದ್ಧಲಿಂಗ ಸ್ವಾಮೀಜಿ ಸಾನಿಧ್ಯ ವಹಿಸುವರು. ಗುಳೇದಗುಡ್ಡ ಮರಡಿಮಠದ ಅಭಿನವ ಕಾಡಸಿದ್ದೇಶ್ವರ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಸಂಗೀತ ಬಳಗದ ನೆಹರು ಭಗವಂತರಾಯ್ ಹಾಗೂ ಮಲ್ಲಿಕಾರ್ಜುನ ಉಪಸ್ಥಿತರಿರುವರು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಮಕ್ಕಳ ಹಕ್ಕು ರಕ್ಷಣೆಯಲ್ಲಿ ಶಿಕ್ಷಕರ, ಪೋಷಕರ ಪಾತ್ರ ಬಹುಮುಖ್ಯ: ಸುಲ್ಪಿ

ಬಸವಕಲ್ಯಾಣ: ಮಕ್ಕಳ ಹಕ್ಕುಗಳ ಬಗ್ಗೆ ಶಿಕ್ಷಕರು ಮತ್ತು ಪೋಷಕರು ಕೂಡ ಹೆಚ್ಚಿನ ಗಮನ ಹರಿಸಬೇಕು ಅಂದಾಗ ಮಾತ್ರ ಮಕ್ಕಳ ಹಕ್ಕುಗಳ ಗ್ರಾಮ ಸಭೆ ಯಶಶ್ವಿಯಾಗಲು ಸಾಧ್ಯ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹ ಅಧಿಕಾರಿ ರಮೇಶ ಸುಲ್ಪಿ ಹೇಳಿದರು.

ತಾಲ್ಲೂಕಿನ ಪರತಾಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಗುರುವಾರ ಹಮ್ಮಿಕೊಂಡ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನ ಉದ್ಘಾಟಿಸಿ ಅವರು ಮಾತನಾಡಿ, ಸರಕಾರದ ಆದೇಶ ದಂತೆ ಮಕ್ಕಳ ಹಕ್ಕುಗಳ ಜಾಗೃತಿ ಮೂಡಿಸುವ ಸಲೂವಾಗಿ ಹಾಗೂ ಮಕ್ಕಳ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಳ್ಳುವ ಸಲೂವಾಗಿ ಪ್ರತಿ ವರ್ಷ ಶಾಲೆಗಳಲ್ಲಿ ಮಕ್ಕಳ ಗ್ರಾಮ ಸಭೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಹೀಗಾಗಿ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವ ಮೂಲಕ ನಿಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ತಿಳಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಚಂದ್ರಾಮ ಧೂಳಖೇಡ ಅವರು ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಸಮಸ್ಯೆಯನ್ನು ಮುಕ್ತವಾಗಿ ಹಂಚಿಕೊಳ್ಳುವ ಉದ್ದೇಶ ದಿಂದ ಎಲ್ಲಾ ಕಡೆ ಮಕ್ಕಳ ಗ್ರಾಮ ಸಭೆ ಹಮ್ಮಿಕೊಳ್ಳಲಾಗುತ್ತಿದೆ. ಆದ್ದರಿಂದ ನಿಮ್ಮ ಸಮಸ್ಯೆಗಳು ನಮ್ಮ ಗಮನಕ್ಕೆ ತಂದರೆ ಸಾಕು. ನಮ್ಮ ವ್ಯಾಪ್ತಿಯಲ್ಲಿ ಬಂದರೆ ಗ್ರಾಮ ಪಂಚಾಯತ್ ನಿಂದ ಮಾಡಿಕೊಡುತ್ತೆವೆ. ಇಲ್ಲದಿದ್ದರೆ ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಡುತ್ತೆವೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಗ್ರಾಮ ಪಂಚಾಯತ್ ಅಧ್ಯಕ್ಷೆ ಶೋಭಾ ರಾಜೇಶ ಮೇತ್ರೆ ಅವರು ಮಾತನಾಡಿ, ಮಕ್ಕಳ ಗ್ರಾಮ ಸಭೆಯಲ್ಲಿ ಮಕ್ಕಳು ತಮ್ಮ ಸಮಸ್ಯೆಗಳು ಹೇಳಿಕೊಳ್ಳಬೇಕು ಮತ್ತು ಮಕ್ಕಳ ಧೈರ್ಯ ದಿಂದ ಮಾತನಾಡುವ ಮೂಲಕ ತಮಗಿರು ಸಮಸ್ಯೆಗಳನ್ನು ಮುಕ್ತವಾಗಿ ಚರ್ಚೆ ಮಾಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಖಂಡೂರಾವ್ ಕುಲಕರ್ಣಿ, ಆರ್.ಡಿ.ಪಿ.ಆರ್.ಫೆಲ್ಲೋ ಶೃತಿ, ಸದಸ್ಯರಾದ, ಮುಖ್ಯಗುರು ಮಮತಾ ಜಡಗೆ, ಸದಸ್ಯರಾದ ಖುರ್ಷಿದ್ ಅಹ್ಮದ್, ದ್ವಿ.ಲೆ.ಸ.ಮಾಳಪ್ಪಾ, ಮಹೇಶ ಅಷ್ಟಗೆ ಹಾಗೂ ಪ್ರಮುಖ ಇದ್ದರು. ಶಿಕ್ಷಕಿ ಅನ್ನಪೂರ್ಣಾ ಕಾಮಶೆಟ್ಟಿ ನಿರೂಪಿಸಿ, ವಂದಿಸಿದರು.

# ಬೀದಿ ನಾಯಿಗಳ ಹಾವಳಿ ನಿಯಂತ್ರಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

**ಬೀದರ್**:'ಪಶು ಸಂಗೋಪನೆ ಇಲಾಖೆಯು 2019ರಲ್ಲಿ ಕೈಗೊಂಡ ಗಣತಿ ಪ್ರಕಾರ ಜಿಲ್ಲೆಯಲ್ಲಿ ಏಳು ಸಾವಿರ ಬೀದಿ ನಾಯಿಗಳಿವೆ. ಆರು ವರ್ಷಗಳಲ್ಲಿ ಅವುಗಳ ಸಂಖ್ಯೆ ಹೆಚ್ಚಿದ್ದು ನಿಯಂತ್ರಣಕ್ಕೆ ಕ್ರಮ ಜರುಗಿಸಬೇಕು' ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಇಲ್ಲಿ ಅಧಿಕಾರಿಗಳಿಗೆ ಸೂಚಿಸಿದರು.

ಬೀದಿ ನಾಯಿಗಳ ಹಾವಳಿ ನಿಯಂತ್ರಣ ಸಂಬಂಧ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಬುಧವಾರ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಬಂಧಿಸಿದ ಅಧಿಕಾರಿಗಳು ಸದ್ಯ ಜಿಲ್ಲೆಯಲ್ಲಿ ಎಷ್ಟು ಬೀದಿ ನಾಯಿಗಳಿವೆ ಎಂಬುದರ ಸಂಖ್ಯೆ ಕೊಡಬೇಕು ಎಂದು ತಿಳಿಸಿದರು.

ಸ್ಥಳೀಯ ಸಂಸ್ಥೆಗಳು ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿರುವ ಬೀದಿ ನಾಯಿಗಳ ಸಂಖ್ಯೆ ಹಾಗೂ ಅವುಗಳಿಗೆ ಒದಗಿಸಲಾಗುವ ಆಶ್ರಯ ತಾಣಗಳ ಪಟ್ಟಿಯನ್ನು ನ.21ರೊಳಗೆ ಸಲ್ಲಿಸಬೇಕು. ಬೀದಿ ನಾಯಿಗಳ ಹಾವಳಿ ನಿಯಂತ್ರಣ ಸಂಬಂಧ ಸುಪ್ರೀಂಕೋರ್ಟ್ ಇತ್ತೀಚಿನ ಆದೇಶದ ಹಿನ್ನೆಲೆಯಲ್ಲಿ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ತಕ್ಷಣವೇ ಬೀದಿ ನಾಯಿಗಳ ನಿಯಂತ್ರಣಕ್ಕೆ ಕಾರ್ಯೋನ್ಮುಖರಾಗಬೇಕು ಎಂದು ನಿರ್ದೇಶನ ನೀಡಿದರು.

ನಾಯಿಗಳ ಹಾವಳಿ ನಿಯಂತ್ರಣಕ್ಕೆ ಸಂಬಂಧಿಸಿದ 15 ಇಲಾಖೆಗಳು ತಮಗೆ ನೀಡಲಾಗುವ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸಬೇಕು. ಇದರಲ್ಲಿ ನಗರಸಭೆ ಹಾಗೂ ಗ್ರಾಮ ಪಂಚಾಯಿತಿಗಳು ಮುಖ್ಯ ಪಾತ್ರ ವಹಿಸುತ್ತವೆ ಎಂದರು.

ಸಾರ್ವಜನಿಕ ಕಟ್ಟಡಗಳ ಸುತ್ತ ಆವರಣ ಗೋಡೆ ನಿರ್ಮಿಸಬೇಕು. ಬಸ್ ನಿಲ್ದಾಣದಲ್ಲಿ ಬೀದಿ ನಾಯಿಗಳು ಪ್ರವೇಶಿಸದಂತೆ, ಎಲ್ಲೆಂದರಲ್ಲಿ ತಿನಿಸು ಪದಾರ್ಥಗಳನ್ನು ಎಸೆಯದಂತೆ ಕ್ರಮ ಕೈಗೊಳ್ಳಬೇಕು. ಶಿಕ್ಷಣ ಇಲಾಖೆಯು ಮಕ್ಕಳಿಗೆ ನಾಯಿ ಕಡಿತ ಆದಾಗ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಬೇಕು. ಆರೋಗ್ಯ ಇಲಾಖೆಯ ಎಲ್ಲೆಡೆ ರೇಬಿಸ್ ಲಸಿಕೆ ಹಾಗೂ 'ಇಮ್ಯುನೋಗ್ಲೋಬಿನ್' ಕಡ್ಡಾಯವಾಗಿ ದಾಸ್ತಾನು ಮಾಡಬೇಕು ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಸಂತಾನಹರಣ ಶಸ್ತ್ರಚಿಕಿತ್ಸೆ

ಪಶು ಸಂಗೋಪನೆ ಇಲಾಖೆಯ ಉಪನಿರ್ದೇಶಕ ಬಿ.ನರಸಪ್ಪ ಮಾತನಾಡಿ ಎಂಟು ವಾರಗಳಲ್ಲಿ ಎಲ್ಲಾ ಬೀದಿ ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆ ನಡೆಸಿ ಅವುಗಳನ್ನು ಸೂಕ್ತ ಆಶ್ರಯತಾಣಕ್ಕೆ ಸ್ಥಳಾಂತರಿಸಿ ರೇಬಿಸ್ ಲಸಿಕೆಗಳನ್ನು ಹಾಕಬೇಕಾಗುತ್ತದೆ. ಬೀದರ್ ಮಹಾನಗರ ಪಾಲಿಕೆಗೆ ಸೇರಿದ ಗೋರನಳ್ಳಿ ಗ್ರಾಮದಲ್ಲಿ ಆಶ್ರಯತಾಣ ಗುರುತಿಸಲಾಗಿದೆ ಎಂದರು.

# ಆರ್‌ಎಸ್‌ಎಸ್ ವಿರೋಧಿಸಿ, ಪ್ರಿಯಾಂಕ್ ಖರ್ಗೆ ಬೆಂಬಲಕ್ಕೆ ನ.25ರಂದು ದಲಿತ ಸಂಘರ್ಷ ಸಮಿತಿಯಿಂದ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ: ಸಂವಿಧಾನ ವಿರೋಧಿ ಹಾಗೂ ಕಾನೂನುಬಾಹಿರ ನಡೆ ನಡೆಸುತ್ತಿರುವ ಆರ್‌ಎಸ್‌ಎಸ್ ವಿರುದ್ಧ, ಮತ್ತು "ರಾಷ್ಟ್ರಗೀತೆಯನ್ನು ಬ್ರಿಟಿಷ್ ಅಧಿಕಾರಿಗೆ ಸ್ವಾಗತಿಸಲು ಬರೆಯಲಾಗಿದೆ" ಎಂಬ ಬಿಜೆಪಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿಕೆಯನ್ನು ಖಂಡಿಸಿ, ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಬೆಂಬಲವಾಗಿ ನ.25ರಂದು ಜಿಲ್ಲಾಧಿಕಾರಿ ಕಚೇರಿ ಎದುರು ದಲಿತ ಸಂಘರ್ಷ ಸಮಿತಿಯಿಂದ ಪ್ರತಿಭಟನೆ ನಡೆಯಲಿದೆ ಎಂದು ಜಿಲ್ಲಾ ಸಂಚಾಲಕ ಶಿವಪುತ್ರ ಜವಳಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಒಂದೇ ದಿನ ಈ ಪ್ರತಿಭಟನೆ ನಡೆಯಲಿದ್ದು, ಯಾದಗಿರಿಯಲ್ಲೂ ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾಧಿಕಾರಿ ಕಚೇರಿ ತನಕ ಸಂವಿಧಾನ ಪ್ರತಿಗಳು, ಅಂಬೇಡ್ಕರ್ ಭಾವಚಿತ್ರ, ನೀಲಿ ಧ್ವಜಗಳು, ತಮಟೆಗಳೊಂದಿಗೆ ಮೆರವಣಿಗೆ ನಡೆಯಲಿದೆ ಎಂದು ಹೇಳಿದರು. ನಂತರ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಸಲ್ಲಿಸಲಾಗುವುದು ಎಂದರು.

ಅಧಿಕೃತ ನೋಂದಣಿ ಇಲ್ಲದಿದ್ದರೂ ಶತಮಾನೋತ್ಸವ ಆಚರಿಸುತ್ತಿರುವ ಆರ್‌ಎಸ್‌ಎಸ್ ಮನುವಾದಿ ಚಿಂತನೆ ಹರಡುತ್ತಿದ್ದು, ಬಿಜೆಪಿಯ ಮುಖವಾಣಿ ಸಂಸ್ಥೆಯಾಗಿ ಕೆಲಸ ಮಾಡುತ್ತಿದೆ ಎಂದು ಅವರು ಆರೋಪಿಸಿದರು. ಆರ್‌ಎಸ್‌ಎಸ್ ವಿರುದ್ಧ ಪ್ರಶ್ನೆ ಎತ್ತಿದ ಪ್ರಿಯಾಂಕ್ ಖರ್ಗೆ ಹಾಗೂ ಅವರ ಕುಟುಂಬವನ್ನು ಅವಮಾನಿಸುವ ಕ್ರಮ ನಾಚಿಕೆಗೇಡು ಎಂದು ಖಂಡಿಸಿದರು.

ನಂತರ ಮಾತನಾಡಿದ ಶಿವಲಿಂಗ ಹಸನಾಪುರ, ಸಂವಿಧಾನ ಪ್ರಜಾಪ್ರಭುತ್ವದ ಮೌಲ್ಯಗಳನ್ನು ದುರ್ಬಲಗೊಳಿಸುವ ಶಕ್ತಿಗಳು ಸಕ್ರಿಯವಾಗಿವೆ. ಸಿಜೆಐ ಬಿ.ಆರ್.ಗವಾಯಿ ಹಾಗೂ ಅಂಬೇಡ್ಕರ್ ವಿರುದ್ಧ ನಡೆಯುತ್ತಿರುವ ಅವಹೇಳನ ಪ್ರಜಾಪ್ರಭುತ್ವಕ್ಕೆ ಅಪಾಯದ ಸೂಚನೆ ಎಂದು ಹೇಳಿದರು.

ಪ್ರಿಯಾಂಕ್ ಖರ್ಗೆ ಅವರು ಕೇವಲ ಸಂವಿಧಾನದ ಚೌಕಟ್ಟಿನಲ್ಲಿ ನಡೆದುಕೊಳ್ಳಲು ಹೇಳಿದ್ದಕ್ಕಾಗಿ ಕೆಲ ದುಷ್ಟಶಕ್ತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಅವಾಚ್ಯ ಪದಗಳಿಂದ ನಿಂದಿಸುತ್ತಿದ್ದು, ಜೀವ ಬೆದರಿಕೆ ಹಾಕುತ್ತಿರುವುದನ್ನು ಅವರು ಖಂಡಿಸಿದರು. ದಲಿತ ನಾಯಕರ ಮೇಲೆ ನಡೆಯುತ್ತಿರುವ ದಾಳಿ ಖಂಡನೀಯ ಇದರ ವಿರುದ್ಧ ಸಂಘಟಿತ ಹೋರಾಟ ಅಗತ್ಯ ಎಂದು ಹೇಳಿದರು.

ಹೀಗಾಗಿ ಸಂವಿಧಾನ, ಪ್ರಜಾಪ್ರಭುತ್ವ ಮತ್ತು ಅಂಬೇಡ್ಕರ್ ತತ್ವಗಳನ್ನು ನಂಬಿದ ಪ್ರತಿಯೊಬ್ಬರೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಚಂದಪ್ಪ ಮುನೆಪ್ಪನೋರ, ಮರೆಪ್ಪ ಕ್ರಾಂತಿ, ಭೀಮಣ್ಣ ಹುಣಸಗಿ, ತಿಪ್ಪಣ್ಣ ಶೆಳ್ಳಗಿ, ಶರಭಣ್ಣ ದೊರನಳ್ಳಿ, ತಾಯಪ್ಪ ಭಂಡಾರಿ, ಭೀಮಾಶಂಕರ ಗುಂಡಳ್ಳಿ, ರಂಗಸ್ವಾಮಿ ಕೊಂಕಲ್, ದೊಡ್ಡಪ್ಪ ಕಾಡಂಗೇರಾ, ರಮೇಶ್ ಭಾಚಿಮಟ್ಟಿ, ಚಂದ್ರು ಬಲಶೆಟ್ಟಿಹಾಳ, ಎಂ.ಪಟೇಲ್, ಬಲಭೀಮ ಬೇವಿನಹಳ್ಳಿ, ಚನ್ನಪ್ಪ ದೇವಾಪುರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಧರಣಿ ವಾಪಸ್ ಪಡೆದ ರೈತರಿಗೆ ಅಭಿನಂದನೆ ರಾಜಶೇಖರ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಪ್ರತಿ ಟನ್ ಕಬ್ಬಿಗೆ 2950 ನೀಡಲು ಬೀದರನ ಎಲ್ಲಾ ಕಾರ್ಖಾನೆಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಸೂಚಿಸಿದ್ದರಿಂದ ರೈತ ಬಂಧುಗಳ ಧರಣಿ ಹಿಂಪಡೆದಿರುವುದಕ್ಕಾಗಿ ಹೃತ್ಪೂರ್ವಕ ಅಭಿನಂದನೆಗಳು.

ಕಾರ್ಖಾನೆ ಮಾಲೀಕರನ್ನು ಮನವೊಲಿಸಿ ಪ್ರತಿ ಟನ್ ಕಬ್ಬಿಗೆ 2850ಕ್ಕೆ ಹೆಚ್ಚುವರಿಯಾಗಿ 50 ಸೇರಿಸಿ 2900 ನೀಡಲು ಒಪ್ಪಿಗೆ ಪಡೆಯಲಾಗಿದೆ. ಇದಕ್ಕೆ ಮುಖ್ಯಮಂತ್ರಿಗಳು ಈಗಾಗಲೇ ಘೋಷಿಸಿರುವ ಸರ್ಕಾರದ 50 ಸಹಾಯ ಸೇರಿ, ಒಟ್ಟಾರೆ ಟನ್‌ಗೆ 2950 ರೈತರಿಗೆ ಲಭ್ಯವಾಗುತ್ತದೆ.

ಈ ಪ್ರಕ್ರಿಯೆಗೆ ಸಹಕರಿಸಿ ಧರಣಿ ಹಿಂಪಡೆದ ರೈತ ಬಂಧುಗಳಿಗೆ ಹೃತ್ಪೂರ್ವಕ ಅಭಿನಂದನೆಗಳು.

ರೈತರ ಹಿತವೇ ನಮ್ಮ ಸರ್ಕಾರದ ಆದ್ಯತೆ.

# ಪೌರಾಯುಕ್ತ ಚವ್ಹಾಣ ನೇತೃತ್ವದಲ್ಲಿ ವಿವಿಧಡೆ ದಾಳಿ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ: ಇನ್ನೂ ಮುಂದೇ ಜಾನುವಾರುಗಳನ್ನು ರಸ್ತೆಬೀಡುವಂತಿಲ್ಲ. ಇದು ಹೀಗೆ ಮುಂದುವರೆದರೇ ತಕ್ಷಣವೇ ಅವುಗಳನ್ನು ಗೋಶಾಲೆಗಳಿಗೆ ಬಿಟ್ಟು ಬರುವ ಕೆಲಸ ಪ್ರತಿದಿನ ನಢಯಲಿದೆ ಎಂಬ ಎಚ್ಚರಿಕೆಯನ್ನು ನಗರಸಭೆ ಆಯುಕ್ತ ಉಮೇಶ ಚವ್ಹಾಣ ದನಗಳ ಮಾಲಿಕರಿಗೇ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ನಗರದ ವಿವಿಧಡೆವ ಪಶುಸಂಗೋಪನಾ, ಪೊಲೀಸ್ ಇಲಾಖೆ ಹಾಗೂ ನಮ್ಮ ನಗರಸಬೆ ಸಿಬ್ಬಂದಿಯೊಂದಿಗೆ ನಗರದ ವಿವಿಧಡೆ ಜಾಲಾಡಿ ರಸ್ತೆಗಳ ಮೇಲೆ ಠಿಕಾಣಿ ಹೂಡಿದ್ದ ಸುಮಾರು 15 ಜಾನುವಾರುಗಳನ್ನು ಗೋಶಾಲೆಗೆ ಕಳುಹಿಸಲಾಗಿದೆ ಎಂದರು.

ಕಡ್ಡಾಯವಾಗಿ

ಜಾನುವಾರುಗಳಿಗೆ ಗುರುತಿನ ಚೀಟಿ ಮತ್ತು ಇನ್ಸೂರೆನ್ಸ್ ಮಾಡಿಸಬೇಕೆಂದ ಅವರು, ಬಿಡಾಡಿ ದನಗಳು ಎಲ್ಲೆಂದರಲ್ಲಿ ರಸ್ತೆ ಮೇಲೆ ಮಲಗುತ್ತಿರುವುದರಿಂದ ವಾಹನ ಅಪಘಾತಗಳು ಹೆಚ್ಚಿಗೆ ಆಗುತ್ತಿರುವ ಬಗ್ಗೆ ಮತ್ತು ಬಸ್ ನಿಲ್ದಾಣಗಳಲ್ಲಿ ರಾತ್ರಿಯಲ್ಲ ಇದ್ದು ಇಡಿ ನಿಲ್ದಾಣಗಳೇ ಹೊಲಸು ಮಾಡುತ್ತಿದ್ದರಿಂದ ಅವುಗಳನ್ನು ಹಿಡಿದು ಗೋಶಾಲೆಗೆ ಬೀಡಲಾಗಿದೆ ಎಂದು ಚವ್ಹಾಣ ಹೇಳಿದ್ದಾರೆ.

> ಕಳೆದ ಅನೇಕ ತಿಂಗಳುಗಳಿಂದ ಅನೇಕ ದನಗಳು ನಗರದ ಎಲ್ಲೆಡೆ ರಸ್ತೆಗಳ ಮೇಲೆ ರಾತ್ರಿ ಹೊತ್ತು ವಾಸ ಮಾಡುತ್ತಿರುವ ಬಗ್ಗೆ ಅನೇಕರಿಂದ ತಮಗೂ ಹಾಗೂ ಡಿಸಿ ಅವರಿಗೂ ದೂರುಗಳು ಬಂದ ಹಿನ್ನಲೆಯಲ್ಲಿ ಈ ಕೆಲಸಕ್ಕೆ ಮಾಡಲಾಗಿದೆ. ಇದು ನಿರಂತರವಾಗಿ ನಡೆಯುತ್ತದೆ. ಅವುಗಳ ಮಾಲಿಕರು ಈ ಬಗ್ಗೆ ನಿಗಾ ವಹಿಸಬೇಕು.
>
> **ಉಮೇಶ ಚವ್ಹಾಣ**
> **ಪೌರಾಯುಕ್ತರು, ನಗರಸಭೆ ಯಾದಗಿರಿ.**

> ದನಗಳು ಹೀಗೆ ರಸ್ತೆ ಮೇಲೆ ಅವುಗಳ ಮಾಲಿಕರು ಬಿಡಬಾರದು. ಅವುಗಳಿಗೂ ಜೀವವಿದೆ. ಮನೆಗಳಲ್ಲಿ ಸಾಕಬೇಕು.
>
> ರಸ್ತೆ ಮೇಲೆ ಕಂಡರೇ ಅವುಗಳನ್ನು ಗೋಶಾಲೆಗಳಿಗೆ ಬಿಟ್ಟು ಬರಲು ನಾನು ನಗರಸಭೆಗೆ ಸೂಚಿಸಿದ್ದೇನೆ.
>
> **ಹರ್ಷಲ್ ಬೋಯರ್**
> **ಡಿಸಿ ಯಾದಗಿರಿ.**

ರಸ್ತೆ ಮೇಲೆ ಜಾನುವಾರು ಅಪಘಾತದಲ್ಲಿ ಸತ್ತರೇ ಅದಕ್ಕೆ ನೇರವಾಗಿ ಅವುಗಳ ಮಾಲಿಕರೇ ಹೊಣೆಗಾರರೆಂದು

ಹೇಳಿರುವ ಅವರು, ತಮ್ಮ,ತಮ್ಮ ದನಗಳನ್ನು ಕಡ್ಡಾಯವಾಗಿ ಕಟ್ಟಿಕೊಳ್ಳುವ ವ್ಯವಸ್ಥೆ ಮಾಡಿಕೊಳ್ಳಬೇಕು. ಹೀಗೆ ರಸ್ತೆಗೆ ಬಿಟ್ಟರೇ ಅವುಗಳಿಗೂ ಮತ್ತು ಜನರಿಗೂ ತೊಂದರೆಯಾಗುತ್ತದೆ ಎಂಬ ಕಿವಿಮಾತು ಹೇಳಿದ್ದಾರೆ.

ನಗರದ ಹೊಸ ಬಸ್ ನಿಲ್ದಾಣ, ಹೊಸಳ್ಳಿಕ್ರಾಸ್, ಗಾಂಧಿ ಚೌಕ್ ಮತ್ತು ಗಂಜ್ ರಸ್ತೆಯ ಬಸವೇಶ್ವರ ಚೌಕ್ ಬಳಿ ಇದ್ದ ದನಗಳನ್ನು ಹಿಡಿದು ಗೋಶಾಲೆಗಳಿಗೆ ಕಳುಹಿಸಲಾಗಿದೆ ಎಂದು ಚವ್ಹಾಣ ಹೇಳಿದ್ದಾರೆ.

ನಗರಸಭೆ ಅಧಿಕಾರಿಗಳಾದ ಪ್ರಶಾಂತ ಸೂರ್ಯವಂಶಿ, ಮಂಜುನಾಥ ಚವ್ಹಾಣ, ಶಿವಪುತ್ರ, ಸಿದ್ದಾರ್ಥ ಸೇರಿದಂತೆಯೇ ಇತರರಿದ್ದರು.

# ಸೇವಾ ಮನೋಭಾವ ಬೆಳಸಿಕೊಂಡು ಸೂಸೈಟಿಗಳ ಸದೃಡಗೊಳಿಸಿರಿ: ಸಚಿವ ದರ್ಶನಾಪುರ

ಮಲ್ಲಮ್ಮ ನುಡಿ ವಾರ್ತೆ



ಶಹಾಪುರ: ಸಹಕಾರ ಕ್ಷೇತ್ರಗಳಿಂದ ರೈತರಿಗೆ ಅನೂಕೂವಾಗುವ ಯೋಜನೆಗಳನ್ನು ರೂಪಿಸಿಕೊಂಡು ಹೆಚ್ಚುವ್ಯೆವಾಟುಗಳನ್ನು ಮಾಡಿಕೊಂಡು ಜನಪರರಿಗೆ ಸಹಕಾರ ಸಾಲ ನೀಡಿ ಅವರ ಕಾರ್ಯಚಟುವಟಿಕೆಗಳಿಗೆ ಅನೂಕೂಲ ಮಾಡಿಕೊಡಬೇಕು ಸಹಕಾರಿ ಕ್ಷೇತ್ರದಲ್ಲಿ ಸೇವಾ ಮನೋಭಾವನೆಗಳನ್ನು ಬೆಳಸಿಕೊಂಡು ಪತ್ರಿಯೊಬ್ಬರು ಸೂಸೈಟಿಗಳನ್ನು ಸದೃಡಗೊಳಿಸಬೇಕು ಎಂದು ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಕರೆ ನೀಡಿದರು.

ಅವರು ನಗರದ ಎನ್,ಜಿ,ಓ ಕಾಲೋನಿಯ ನೌಕರರ ಸಹಕಾರ ಸಂಘದ ಭವನದಲ್ಲಿ ನಡೆದ ಕರ್ನಾಟಕ ರಾಜ್ಯ ಸಹಕಾರ ಮಾಹಾಮಂಡಳ ನಿಯಮಿತ ಬೆಂಗಳೂರ, ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ [ಯುನಿಯನ್] ನಿ, ಸಹಕಾರ ಇಲಾಖೆ ಯಾದಗಿರಿ, ನೌಕರರ ಗ್ರಹ ನಿರ್ಮಾಣ ಸಹಕಾರ ಸಂಘ,ರಿ, ಶಹಾಪುರ ಮತ್ತು ಶಹಾಪುರ ತಾಲುಕಿನ ಸಹಕಾರ ಸಂಘಗಳ ಆಶ್ರೆಯದಲ್ಲಿ ಹಮಮಿಕೊಂಡ ಅಖಿಲ ಭಾರತ ಸಹಕಾರ 2 ನೇಯ ಸಪ್ತಾಹ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು ಸಹಕಾರ ಸಂಘಗಳ ಜವಾಬ್ದಾರಿಯಾಗಿ ಬೆಳಿಸಬೇಕು, ಸೂಸೈಟಿಗಳಲ್ಲಿ ಅನೇಕ ಸೌಲಭ್ಯಗಳು ಲಭ್ಯವಾಗುತ್ತಿದ್ದು ಸಮರ್ಪಕವಾಗಿ ಜನರಿಗೆ ತಲುಪಿಸಬೇಕು ಎಂದ ಅವರು, ರೈತರು ಬ್ಯಾಂಕಗಳಲ್ಲಿ ಹಣ ಡಿಪಾಜಿಟ್ ಮಾಡುವದಕ್ಕಿಂತ ಸೂಸೈಟಿಗಳಲ್ಲಿ ಹಣ ಜಮಾಮಾಡಿದಲ್ಲಿ ಅವರಿಗೆ ಇನ್ಸರೆನ್ಸ್ ಬರುತ್ತದೆ.

ವಿಶ್ವಾಸಗಳಿಂದ ಹಣಕಾಸಿನ ವ್ಯವಹಾರ ಮಾಡಿದಲ್ಲಿ ವ್ಯವಸಾಹಾಯ ಸಂಘಗಳು ಅಭಿವೃದ್ದಿ ಸಾಧ್ಯವಾಗುತ್ತದೆ ಹೆಚ್ಚು ಸದಸ್ಯತ್ವದ ನೊಂದಣಿ ಮಾಡಿದಲ್ಲಿ ಹೆಚ್ಚು ವ್ಯವಹಾರಗಳು ನಡೆಯುತ್ತವೆ ಎಂದು ಸಚಿವ ದರ್ಶನಾಪುರ ತಿಳಿಸಿದರು, ಸಮಾರಂಭದ ಅಧ್ಯಕ್ಷತೆಯನ್ನು ಸಹಕಾರ ರತ್ನ ಪ್ರಶಸ್ತಿ ವಿಜೇತರಾದ ವಿಶ್ವನಾಥರಡ್ಡಿ ದರ್ಶನಾಪುರವರು ವಹಿಸಿ ಗೌರವ ಸನ್ಮಾನ ಸ್ವೀಕರಿಸಿದರು, ನೂತನ ನಿರ್ದೇಶಕರಾದ ಗುರುನಾಥರಡ್ಡಿ ಪಾಟೀಲ್ ಹಳಿಸಗರ, ಕೆಂಚಪ್ಪ ನಗನೂರ, ಡಾ, ಅಂಬ್ರೇಣಗೌಡ ಗಡ್ಡಸೂಗೂರ, ಶಾಂತಗೌಡ ಸಾಧ್ಯಾಪುರ, ವಿಶ್ವರಾಧ್ಯ ಸತ್ಯಂಪೇಟ, ರಾಯಪ್ಪಗೌಡ ದರ್ಶನಾಪುರ, ಎನ್,ಸಿ,ಪಾಟೀಲ್,

ಸಹಕಾರ ಸಂಘದ ಉಪನಿಬಂದಕರಾದ ಆರ್,ಪವನಕುಮಾರ, ಶರಣಬಸವ ಮಾಡ್ಯಾಳ, ಶ್ರೀಮತಿ ಸೀಮಾ ಫಾ–ರೋಜಿ ಅಣ್ಣೆಪ್ಪ ಜಿಲ್ಲಾ ಸರ್ಕಾರಿ ನೌಕರರ ಸಂಘಧ ಅಧ್ಯಕ್ಷರಾದ ರಾಯಪ್ಪಗೌಡ ಹುಡೆದರವರು ಸಹಕಾರ ಯುನಿಯನ್ ಒಕ್ಕೂಟದ ಉಪಾದ್ಯಕ್ಷರಾದ ನಾರಾಯಣರವರು, ಆಗೂ ಸುಜಾತ ಹೀರೆಮಠ ಉಪಸ್ಥಿತಿರಿದ್ದರು.

ಈ ಸಮಾರಂಭದಲ್ಲಿ ನೂತನ ನಿರ್ದೇಶಕರಾದ ಸೋಮಶೇಖರ ಗೋನಾಯಕ, ಗುರುನಾಥರಡ್ಡಿ ಪಾಟೀಲ್, ವಿಠಳ ಯಾದವ್, ಸುರೇಶ ಸಜ್ಜನ, ಸಿದ್ರಾಮರಡ್ಡಿ ಕೌಳೂರ, ಬಸವರಾಜಪ್ಪಗೌಡ ಚಿಂಚೋಳಿ, ಘೇವರಚಂದ ಜೈನ್, ಬಸವರಾಜ ಹೀರೆಮಠರವರು ವಿಶೇಷ ಸನ್ಮಾನಿಸಿದರು, ಅಲ್ಲದೆ ಶಹಾಪುರ ತಾಲುಕಿನ ಪತ್ರಕರ್ತರಾದ ನಾರಾಯಣಚಾರ್ಯ ಸಗರ, ಮಲ್ಲಿಕಾರ್ಜುನ

ಮೂದನೂರ, ಈರಣ್ಣ ಹಾದಿಮನಿ, ಪ್ರಕಾಶ ದೊರೆ ಮಡಿವಾಳಪ್ಪ ಪಾಟೀಲರವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು,

ಪ್ರಥಮದಲ್ಲಿ ರೇಖಾರವರು ಸ್ವಾತಿಸಿದರು, ನೂತನ ನಿರ್ದೇಶಕರಾದ ಸುರೇಶ ಸಜ್ಜನರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹಕಾರ ಸಂಘಗಳ ನಿರ್ದೇಶಕರು, ಅಧ್ಯಕ್ಷರು, ಪಧಾಧಿಕಾರಿಗಳು ಭಾಗವಹಿಸಿದ್ದರು.

# ಚಿಟ್ಟಾ ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



ಮಲ್ಲಮ್ಮ ನುಡಿ ವಾರ್ತೆ

**ಬೀದರ್ : ರಾಜ್ಯ** ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಚಿಟ್ಟಾ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಶಕ್ತಿ ಯೋಜನೆ: ಮಹಿಳೆಯರಿಗೆ ಉಚಿತ ಪ್ರಾಮಾಣದ ಸೌಲಭ್ಯ ಕಲ್ಪಿಸುವುದು. ಮತ್ತು ಮಹಿಳೆಯರಿಗೆ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣ ನೀಡುವುದು. ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಗೃಹ ಲಕ್ಷ್ಮಿ: ಕುಟುಂಬದ ಮಹಿಳಾ ಮುಖ್ಯಸ್ಥರಿಗೆ ಆರ್ಥಿಕ ನೆರವು ನೀಡಿ, ಅವರ ಸಬಲೀಕರಣ ಮಾಡುವುದು,

ಗೃಹ ಜ್ಯೋತಿ: ರಾಜ್ಯದ ಪ್ರತಿ ಮನೆಗೆ ಉಚಿತ ವಿದ್ಯುತ್ ಒದಗಿಸಿ, ವಿದ್ಯುತ್ ಬಿಲ್ ಹೊರೆಯಿಂದ ಮುಕ್ತಿ ನೀಡುವುದು.

ಮತ್ತು ಯುವನಿಧಿ ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷರಾದ ಮೋಹಿನ್ ಪಾಠಣ್, ಮುಖಂಡರಾದ ಗೋಪಾಲ ದೊಡ್ಡಿ, ನವಾಜ್ ಖಾನ್, ವಿಲ್ಸನ್ ನಡುವಿನಡೊಡ್ಡಿ, ಶೈಲೇಶ್, ವಿನೋದ್ ಎನ್ ದೊಡ್ಡಿ, ಪ್ರವೀಣ್, ದಯಾನಂದ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ನಟನೆಯ ಆಂತರ್ಯಕ್ಕೆ ಜೀವ ತುಂಬುವ ಚಾಂದಿನಿ

ಛಾಂದಿನಿ ಅಂಚನ್ ತರಬೇತಿ ಪಡೆದ ಗಾಯಕಿ, ನರ್ತಕಿ, ಚಿತ್ರಕಾರ, ರೂಪದರ್ಶಿ ಮತ್ತು ನಟಿ ಮತ್ತು ಅವರು 2014 ರಲ್ಲಿ ಮಿಸ್ ಗ್ಲೋರಿ ಆಫ್ ಇಂಡಿಯಾ ಪೆಜೆಂಟ್ ವಿಜೇತರು. ಅವರು 2025 ರ ಕರ್ನಾಟಕ ರಾಜೋತ್ಸವ ಸೇರಿದಂತೆ ಹಲವಾರು ಪ್ರಶಸ್ತಿಗಳನ್ನು ಪಡೆದಿದ್ದಾರೆ. ಅವರು ಮೂಲತಃ ದಕ್ಷಿಣ ಕರಾವಳಿಯ ಮಂಗಳೂರಿನವರು. ಆದರೆ ಕೆಲಸದ ದೃಷ್ಟಿಯಿಂದ ಅವರು ಮಿಸ್ ಗ್ಲೋರಿ ಆಫ್ ಇಂಡಿಯಾ ಕಿರೀಟವನ್ನು ಪಡೆದ ನಂತರ ಬೆಂಗಳೂರಿನಲ್ಲಿದ್ದಾರೆ. ಅವರು ಭಾರತದಲ್ಲಿ ಸೂಪರ್ ಮಾಡೆಲ್ ಆಗಿ ಮತ್ತು ಕೆಲವು ಬ್ರಾಂಡ್‌ಗಳು ಮತ್ತು ನಿಯತಕಾಲಿಕೆಗಳಲ್ಲಿ ಬ್ರಾಂಡ್ ಅಂಬಾಸಿಡರ್ ಆಗಿ ಕಾಣುತ್ತಾರೆ. ನಂತರ ಅವರು ತೆಲುಗು ಚಲನಚಿತ್ರ ಮತ್ತು ಕನ್ನಡ ಮತ್ತು ತುಳು ಚಲನಚಿತ್ರಗಳಲ್ಲಿ ಕೆಲಸ ಮಾಡಿದ್ದಾರೆ. ಅವರು 2022 ರಲ್ಲಿ ಕನ್ನಡ ಸಂಗೀತ ಆಲ್ಬಮ್‌ಗಳು ಮತ್ತು 2009 ರಲ್ಲಿ ತುಳು ಸಂಗೀತ ಆಲ್ಬಮ್‌ಗಳಲ್ಲಿ ಕೆಲಸ ಮಾಡಿದ್ದಾರೆ. ಅವರು ಬಿಎಸ್ಸಿ ಸಿಬಿಝುಡ್) ಪದವಿ ಮತ್ತು ಶಾಲಾ ಶಿಕ್ಷಣವನ್ನು ಮಂಗಳೂರಿನಲ್ಲಿ ದಕ್ಷಿಣ ಕರಾವಳಿಯಲ್ಲಿ ಪೂರ್ಣಗೊಳಿಸಿದ್ದಾರೆ. ಅವರು ಚಿತ್ರಕಲೆಯಲ್ಲಿ ಹವ್ಯಾಸಗಳು. ನೃತ್ಯ ಗಾಯನ ಆಸಕ್ತಿ. ಅವರು ಮೊದಲ ಡೆಬ್ಯೂ ಚಲನಚಿತ್ರ ರುದ್ರಐಪಿಎಸ್ 2014 ಮತ್ತು ಸ್ಯಾಂಡಲ್‌ವುಡ್ ಚಲನಚಿತ್ರ ಹೆಸರು ಹೋಮ್‌ಮಿನಿಸ್ಟರ್ (2021–2022) ಬಹುಮುಖ ನಟ ಉಪೇಂದ್ರ ಅವರೊಂದಿಗೆ ನಟಿಸಿದ್ದಾರೆ.

ನಂತರ ಅವರು ಕಾರ್ಣಿಕದ ಕಲ್ಲುರ್ಟಿ ಐತಿಹಾಸಿಕ ತುಳು ಚಲನಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. –2021

> **ವೀಡಿಯೊ ಸಮಸ್ಯೆ, ಪರಿಹಾರ**
>
> ವೀಡಿಯೊ ಹೇಗೆ ವೈರಲ್ ಆಯಿತು ಎಂಬುದರ ಹಿಂದಿನ ಕಥೆಯಲ್ಲಿ, ವೀಡಿಯೊದಲ್ಲಿ ಯಾರಿದ್ದರು ಮತ್ತು ಅವರು ಸಮಸ್ಯೆಯನ್ನು ಹೇಗೆ ಪರಿಹರಿಸಿದರು ಎಂಬುದರ ಕುರಿತು ವಿವರಗಳನ್ನು ತಿಳಿದುಕೊಳ್ಳಲು ಕುತೂಹಲ ಹೊಂದಿರುವ ಕೆಲವು ಪಾತ್ರಗಳನ್ನು ಅವರು ಪರಿಚಯಿಸುತ್ತಾರೆ. ಇದು ನಮ್ಮ ಸಾಮಾನ್ಯ ಕುತೂಹಲ ಮತ್ತು ಲೈಂಗಿಕ ಆಕರ್ಷಣೆಯ ಪ್ರಜ್ಞೆಯ ಬಗ್ಗೆ ಮತ್ತು ನಾವೆಲ್ಲರೂ ಇಂಟರ್ನೆಟ್ ಮೂಲಕ ಸಂಪರ್ಕಗೊಂಡ ನಂತರ ಯಾವುದೂ ನಿಜವಾಗಿಯೂ ಖಾಸಗಿಯಾಗಿಲ್ಲ ಎಂಬುದರ ಬಗ್ಗೆ ಬಹಳಷ್ಟು ಹೇಳುತ್ತದೆ.

ಅವರ ಮೂರನೇ ಡೆಬ್ಯೂ ಚಿತ್ರ ಇತ್ತೀಚೆಗೆ ಚಿತ್ರಮಂದಿರದಲ್ಲಿ ಬಿಡುಗಡೆಯಾಯಿತು ಅಕ್ಟೋಬರ್ 2 4 ಯಾರಿಗುಹೆಲ್ಬೇಡಿ ಹೇಳ್ಬೇಡಿಕನ್ನಡಚಿತ್ರ ಥಿಯೇಟರ್‌ನಲ್ಲಿ ಯಶಸ್ವಿಯಾಗಿ ಪ್ರದರ್ಶನಗೊಳ್ಳುತ್ತಿದೆ ಯಾರಿಗುಹೆಲ್ಬೇಡಿ ಚಿತ್ರದ ಟ್ರೇಲರ್ ಅನ್ನು ಕಿಚ್ಚ ಸುದೀಪ್ ಅಧಿಕೃತವಾಗಿ ಬಿಡುಗಡೆ ಮಾಡಿದ್ದಾರೆ ಅವರು ತಂಡವನ್ನು ಶ್ಲಾಘಿಸಿದ್ದಾರೆ ಮತ್ತು ಚಿತ್ರದ ಬಗ್ಗೆ ಸಕಾರಾತ್ಮಕ ಪ್ರತಿಕ್ರಿಯೆಯನ್ನು ಪಡೆದರು ಚಾಂದಿನಿ ಪ್ರಮುಖ ವಿರುದ್ಧ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ(ಸಂಯುಕ್ತ) ಅವರು ಈ ಹೆಸರಿನಲ್ಲಿ ಅವರು ಆ ಪಾತ್ರದಲ್ಲಿ ಗಮನ ಸೆಳೆದಿದ್ದಾರೆ ವೀಡಿಯೊ ಹೇಗೆ ವೈರಲ್ ಆಯಿತು ಎಂಬುದರ ಹಿಂದಿನ ಕಥೆ ಕಥೆ–ಯ ಕಥಾವಸ್ತು ಹೇಳುತ್ತದೆ



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)